ಸಂಪುಟ: 14 Volume | ಸಂಚಿಕೆ: 73 Issue | ಪುಟಗಳು 08 Pages | ಮಂಗಳವಾರ 23 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಿಮ್ಮಷ್ಟಕ್ಕೆ ನೀವೇ ಬೆಳೆಯಬೇಕು. ಅದಕ್ಕಾಗಿ ಬೇರೊಬ್ಬ ಶಿಕ್ಷಕನಿರುವುದಿಲ್ಲ.
–ಸ್ವಾಮಿ ವಿವೇಕಾನಂದ

## ಚೆಕ್ ಸ್ವೀಕರಿಸಿದ ಸಿಎಂ ಶಿವಕುಮಾರ್



**ಬೆಂಗಳೂರು:** 2024–25ನೇ ಸಾಲಿನಲ್ಲಿ ಕರ್ನಾಟಕ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮವು ಗಳಿಸಿದ ನಿವ್ವಳ ಲಾಭದಲ್ಲಿ 143.12 ಕೋಟಿ ರೂ.ಗಳ ಲಾಭಾಂಶವನ್ನು (ಡಿವಿಡೆಂಡ್) ಬೃಹತ್ ಕೈಗಾರಿಕೆ ಮತ್ತು ಮೂಲಸೌಕರ್ಯ ಸಚಿವ ಎಂ ಬಿ ಪಾಟೀಲ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸೋಮವಾರ ಹಸ್ತಾಂತರಿಸಿದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ 3 ಕೋಟಿ ರೂ.ಗಳ ಚೆಕ್ ಅನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಕೊಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ನಿಗಮವು 2024–25ರಲ್ಲಿ ಒಟ್ಟು ತೆರಿಗೆ ಕಡಿತದ ಬಳಿಕ 188.41 ಕೋಟಿ ರೂ. ಲಾಭ ಗಳಿಸಿತ್ತು. ಜತೆಗೆ 2025–26ನೇ ಸಾಲಿನಲ್ಲಿ ಸಂಸ್ಥೆಗೆ 19.34 ಕೋಟಿ ರೂ.ಗಳಷ್ಟು ಹಣವು ವಿಶೇಷ ಡಿವಿಡೆಂಡ್ ಲಾಭದಲ್ಲಿ ಬಂದಿತ್ತು. ನಿಯಮಾನುಸಾರವಾಗಿ ಲಾಭಾಂಶದ ಪೈಕಿ ಶೇ.30ರಷ್ಟನ್ನು ಈಗ ಸರಕಾರ–ಕ್ಕೆ ಹಸ್ತಾಂತರಿಸಲಾಗಿದೆ ಎಂದಿದ್ದಾರೆ. ಈ ಕಾರ್ಯಕ್ರಮದಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಖುಷ್ಬೂ ಗೋಯಲ್, ಕಾರ್ಯನಿರ್ವಾಹಕ ನಿರ್ದೇಶಕ ಚಿದಾನಂದ್ ಉಪಸ್ಥಿತರಿದ್ದರು.



ಕ್ರಿಶ್ಚಿಯನ್ ಧರ್ಮ ಗುರುಗಳಾದ ಬರ್ನಾಡ್ ಮೊರಾಸ್ ಅವರು ಇಂದು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಆಶೀರ್ವದಿಸಿದರು. ಸೇಂಟ್ ಜೋಸೆಫ್ ವಿಶ್ವ ವಿದ್ಯಾಲಯದ ಕುಲಪತಿ ಫಾದರ್ ವಿಕ್ಟರ್ ಲೋಬೋ, ಶಾಸಕರಾದ ಅಶೋಕ್ ಪಟ್ಟಣ, ಪೊನ್ನಣ್ಣ, ವಿಧಾನ ಪರಿಷತ್ ಸದಸ್ಯ ಐವಾನ್ ಡಿಸೋಜಾ ಹಾಜರಿದ್ದರು.

## ಯೋಗದಿಂದ ರೋಗ ಮುಕ್ತ ಸಮಾಜ



**ಹುಮನಾಬಾದ:** ಯೋಗ ಎಂದರೆ ಕೇವಲ ವ್ಯಾಯಾಮವಲ್ಲ, ಅದು ದೇಹ, ಮನಸ್ಸು, ಉಸಿರು ಹಾಗೂ ಆತ್ಮವನ್ನು ಸಮತೋಲನಗೊಳಿಸುವ ಪ್ರಾಚೀನ ವಿಜ್ಞಾನವಾಗಿದೆ. ಯೋಗಾಭ್ಯಾಸದಿಂದ ರೋಗಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಲು ಸಾಧ್ಯ ಎಂದು ಬೌದ್ಧ ಧರ್ಮದ ಪ್ರಚಾರಕ ಧರ್ಮರಾಯ ಘಾಂಗ್ರೆ ಹೇಳಿದರು. ಪಟ್ಟಣದ ಇಂದಿರಾ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಪ್ರತಿಯೊಬ್ಬರೂ ನಿತ್ಯ ಯೋಗಾಭ್ಯಾಸ ಮಾಡುವುದರಿಂದ ದೇಹದ ರೋಗ ನಿರೋಧಕ ಶಕ್ತಿ ಹೆಚ್ಚಾಗುತ್ತದೆ. ಮಾನಸಿಕ ಒತ್ತಡ ಕಡಿಮೆಯಾಗುವುದರ ಜೊತೆಗೆ ಮನಸ್ಸಿಗೆ ಶಾಂತಿ ಹಾಗೂ ಚೈತನ್ಯ ದೊರೆಯುತ್ತದೆ. ಎಂದರು. ಈ ಸಂದರ್ಭದಲ್ಲಿ ಸಂಜುಕುಮಾರ ಜಂಜೀರ್, ಲಕ್ಷ್ಮಣ ಅಷ್ಟೂರೆ, ವಿಜಯಕುಮಾರ ಜಂಜೀರ್ ಸೇರಿ

## ಭೀಮಾತೀರದ ಕೊಲೆ ಆರೋಪಿಗೆ ಗುಂಡು

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ಭೀಮಾತೀರದಲ್ಲಿ ನಡೆದಿದ್ದ 6 ಜನರ ಭೀಕರ ಸಾಮೂಹಿಕ ಕೊಲೆ ಪ್ರಕರಣದ ಪ್ರಮುಖ ಆರೋಪಿ ಮಹೇಶ್ ತಳವಾರ್‌ನನ್ನು ಚಡಚಣ ಪೊಲೀಸರು ಸಿನಿಮೀಯ ಶೈಲಿಯಲ್ಲಿ ಗುಂಡು ಹಾರಿಸಿ ಬಂಧಿಸಿದ್ದಾರೆ.

ತಿಕೋಟಾ ತಾಲೂಕಿನ ಇಟ್ಟಂಗಿಹಾಳ ಗ್ರಾಮದ ಹೊರವಲಯದಲ್ಲಿ ಆರೋಪಿ ಅಡಗಿರುವ ಖಚಿತ ಮಾಹಿತಿ ಮೇರೆಗೆ ಚಡಚಣ ಪೊಲೀಸರು ಕಾರ್ಯಾಚರಣೆಗೆ ಇಳಿದಿದ್ದರು. ಪೊಲೀಸರು ಆತನನ್ನು ಬಂಧಿಸಲು ಮುಂದಾದಾಗ ಆರೋಪಿ ಮಹೇಶ್ ಪೊಲೀಸರ ಮೇಲೆಯೇ ಕಲ್ಲು ತೂರಿ ದಾಳಿ ನಡೆಸಿ ಓಡಿಹೋಗಲು ಯತ್ನಿಸಿದ್ದಾನೆ. ಈ ವೇಳೆ ಪರಿಸ್ಥಿತಿಯನ್ನು ನಿಯಂತ್ರಿಸಲು ಮತ್ತು ಆತ್ಮರಕ್ಷಣೆಗಾಗಿ ಚಡಚಣ ಸಿಪಿಐ ಪರಶುರಾಮ್ ಮನಗೂಳಿ ಅವರು ಆರೋಪಿಯ ಬಲಗಾಲಿಗೆ ಗುಂಡು ಹಾರಿಸಿ ಆತನನ್ನು ವಶಕ್ಕೆ ಪಡೆದಿದ್ದಾರೆ. ಆರೋಪಿ ನಡೆಸಿದ ಕಲ್ಲು ತೂರಾಟದ ದಾಳಿಯಲ್ಲಿ ಚಡಚಣ ಠಾಣೆಯ ಸಿಬ್ಬಂದಿಗಳಾದ ಶೇಖರ್ ಪವಾರ್ ಹಾಗೂ ವಿಜಯಕುಮಾರ್ ಬನಸೋಡೆ ಅವರಿಗೆ ಗಾಯಗಳಾಗಿದ್ದು, ಅವರನ್ನು ವಿಜಯಪುರ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಇತ್ತ ಗುಂಡೇಟಿನಿಂದ ಗಾಯಗೊಂಡಿರುವ ಪ್ರಮುಖ ಆರೋಪಿ ಮಹೇಶ್ ತಳವಾರ್‌ನನ್ನು ಸಹ ಅದೇ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನಾ ಸ್ಥಳಕ್ಕೆ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಸೇರಿದಂತೆ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣದ ಕುರಿತು ಚಡಚಣ ಪೊಲೀಸ್ ಠಾಣೆಯಲ್ಲಿ ಮುಂದಿನ ತನಿಖೆ ಮುಂದುವರಿದಿದೆ.

## ಪತ್ರಿಕಾ ದಿನಾಚರಣೆಯ ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

2026ರ ಪತ್ರಿಕಾ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲು ಪತ್ರಕರ್ತರು ಸೇರಿ ಇಂದು ಸಭೆ ನಡೆಸಿ ಈ ಸಾಲಿನ ಪತ್ರಿಕಾ ದಿನಾಚರಣೆಯ ಸ್ವಾಗತ ಸಮಿತಿ ಅಧ್ಯಕ್ಷರಾಗಿ ಹಿರಿಯ ಪತ್ರಕರ್ತರಾದ ಸನ್ಮಾನ್ಯ ಶ್ರೀ ಶಿವಶರಣಪ್ಪ ವಾಲಿಯವರ ಅಧ್ಯಕ್ಷತೆಯಲ್ಲಿ ಆಚರಿಸಲು ತೀರ್ಮಾನಿಸಲಾಯಿತು.

ಎರಡು ಮೂರು ದಿನಗಳಲ್ಲಿ ಸ್ವಾಗತ ಸಮಿತಿ ರಚಿಸಲಾಗುವುದು. ಮಾಧ್ಯಮದ ಎಲ್ಲರನ್ನು ಸೇರಿಸಿಕೊಂಡು ಸ್ಥಳೀಯ ಪತ್ರಕರ್ತರು, ರಾಜ್ಯಮಟ್ಟದ ಪತ್ರಕರ್ತರು, ವರದಿಗಾರರು, ಟಿವಿ ಮಾಧ್ಯಮದವರು ಛಾಯಾಗ್ರಾಹಕರು, ಯ್ಯೂಟ್ಯುಬರ್ ಪತ್ರಕರ್ತರನ್ನು ಸೇರಿಸಿಕೊಂಡು ಸ್ವಾಗತ ಸಮಿತಿ ರಚಿಸಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

ಇಂದಿನ ಸಭೆಯಲ್ಲಿ ಹಿರಿಯ ಪತ್ರಕರ್ತರಾದ



ಬಾಬು ವಾಲಿ, ದೀಪಕ್ ವಾಲಿ, ರಜನೀಶ್ ವಾಲಿ, ಸಿದ್ರಾಮಯ್ಯ ಸ್ವಾಮಿ, ಮಾಳಪ್ಪ ಅಡಸಾರೆ, ವಿಜಯಕುಮಾರ ಪಾಟೀಲ, ಅಜಯ ಭೋಸ್ಲೆ, ರಾಮಚಂದ್ರ ಭೋಸ್ಲೆ, ಗಣಪತಿ ಡಿಕೆ, ಅಬ್ದುಲ್ ಖದೀರ್, ರಮೇಶ್ ರೆಡ್ಡಿ, ಅಬ್ದುಲ್ ಅಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಡ್ಡಮತ ಧರ್ಮ ಸಂಕಟ

## ಧರ್ಮಸ್ಥಳದಲ್ಲಿ ಆಣೆ ಪ್ರಮಾಣಕ್ಕೆ ಮುಂದಾದ ಬಿಜೆಪಿ | ಪರ–ವಿರೋಧದ ವಾದ ಜೋರು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯಲ್ಲಿನ ಅಡ್ಡಮತದಾನ ಇನ್ನೂ ಸದ್ದು ಮಾಡತೊಡಗಿದೆ. ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಪ್ರಯಾಸದಿಂದ ಗೆದ್ದರೂ, ಪಕ್ಷದಲ್ಲಿ ಎದ್ದಿರುವ ಬಿರುಗಾಳಿ ಇನ್ನೊಂದು ಮಜಲಿಗೆ ತಿರುಗಿದೆ. ಎಷ್ಟು ಶಾಸಕರು ಕ್ರಾಸ್ ವೋಟಿಂಗ್ ಮಾಡಿದ್ದಾರೆ ಎನ್ನುವುದನ್ನೇ ಸರಿಯಾಗಿ ಲೆಕ್ಕ ಇಡದ, ಬಿಜೆಪಿ ನಾಯಕರು ಈಗ ಆಣೆ ಪ್ರಮಾಣಕ್ಕೆ ಮುಂದಾಗಿದೆ.

**ಪಕ್ಷದಲ್ಲಿ ಪರವಿರೋಧ:** ಇದು ರಾಜಕೀಯ ವೈಫಲ್ಯ ಎಂದೇ ಬಿಂಬಿತವಾಗಿರುವ ಕ್ರಾಸ್‌ವೋಟಿಂಗ್ ವಿಚಾರದಲ್ಲಿ, ರಾಜ್ಯದ ಪ್ರಮುಖರ ತಲೆದಂಡ ನಿಶ್ಚಿತ ಎನ್ನಲಾಗುತ್ತಿದೆ. ತಮ್ಮ ಪಾರ್ಟಿಯವರು, ಅಡ್ಡ ಮತದಾನ ಮಾಡುವ ಪ್ರಶ್ನೆಯೇ ಇಲ್ಲ ಎನ್ನುತ್ತಿದ್ದ ರಾಜ್ಯಾಧ್ಯಕ್ಷ ಬಿವೈವಿಜಯೇಂದ್ರ, ನಾಯಕ ಆರ್.ಅಶೋಕಗೆ, ಈ ಘಟನೆ ತಮ್ಮ ರಾಜಕೀಯ ಜೀವನಕ್ಕೆ ಹಿನ್ನಡೆಯನ್ನು ತಂದಿದೆ.

**ಧರ್ಮ ದೇಗುಲದಲ್ಲಿ ಸತ್ಯ:** ಎಲ್ಲಾ ಬಿಜೆಪಿಯ 63 ಶಾಸಕರು ಧರ್ಮಸ್ಥಳಕ್ಕೆ ಶೀಘ್ರ ತೆರಳಲಿದ್ದಾರೆ. ನಾಡಿನ ಧರ್ಮ ದೇಗುಲ ಖ್ಯಾತಿಯ ಮಂಜುನಾ ಥಸ್ವಾಮಿ ಮತ್ತು ಅಣ್ಣಪ್ಪಸ್ವಾಮಿಯ ಮುಂದೆ, ಆಣೆ ಪ್ರಮಾಣ ಮಾಡಿಸುವುದಕ್ಕೆ ವಿಜಯೇಂದ್ರ ಮುಂದಾಗಿದ್ದಾರೆ. ನಾವೆಲ್ಲರೂ ದೇವರನ್ನು ನಂಬುವವರು, ಹಾಗಾಗಿ, ಮಂಜುನಾಥನ ಸನ್ನಿಧಾನದಲ್ಲೇ ಸತ್ಯಾಸತ್ಯತೆ ಹೊರಗೆ ಬರಲಿ ಎನ್ನುತ್ತಿದ್ದಾರೆ.

### ಆಣೆಪ್ರಮಾಣ ಹೊಸದಲ್ಲ..!

ಧರ್ಮಸ್ಥಳ ಸೇರಿದಂತೆ ರಾಜ್ಯದ ಇತರ ಪ್ರಮುಖ ದೇವಾಲಯಗಳಲ್ಲಿ ಆಣೆ ಪ್ರಮಾಣದ ವಿದ್ಯಮಾನ ಹೊಸದೇನಲ್ಲ. ಯಡಿಯೂರಪ್ಪನವರು 2011ರಲ್ಲಿ ಸಿಎಂ ಆಗಿದ್ದಾಗ ಇವರು–ಕುಮಾರಸ್ವಾಮಿಯ ನಡುವೆ, ಭ್ರಷ್ಟಾಚಾರ ಸಂಬಂಧ ಆಣೆ ಪ್ರಮಾಣದ ವಿಚಾರ ಮಂಜುನಾಥನ ಸನ್ನಿಧಿಗೆ ಹೋಗಿತ್ತು. ಆದರೆ ಆಣೆ ಪ್ರಮಾಣ ಆಗದೆ ಸುದ್ದಿಯಾಗಿತು..!



### ಧರ್ಮ ಸಾಕ್ಷಿಯಾಗಿ ಪ್ರತಿಜ್ಞೆ

ಒಬ್ಬ ವ್ಯಕ್ತಿಯು ತಾನು ಆಡಿದ ಮಾತು ಅಥವಾ ಎಸಗಿದ ಕೆಲಸ ಸತ್ಯ ಎಂದು ಸಾಬೀತು ಪಡಿಸಲು ದೇವರು, ಧರ್ಮ ಸಾಕ್ಷಿಯಾಗಿ ಅಥವಾ ಪ್ರಮಾಣೀಕರಿಸಿ ಮಾಡುವ ಪ್ರತಿಜ್ಞೆ. ಕರ್ನಾಟಕದಲ್ಲಿ ಆಣೆ ಪ್ರಮಾಣಕ್ಕೂ ಧರ್ಮಸ್ಥಳಕ್ಕೂ ಹಿಂದಿನಿಂದಲೂ ನಂಟಿದೆ. ಧರ್ಮಸ್ಥಳದಲ್ಲಿ ದೇವರ ಮುಂದೆ ಅಥವಾ ಧರ್ಮಾಧಿಕಾರಿಗಳ ಮುಂದೆ, ಪ್ರಮಾಣ ಮಾಡುವ ಕ್ರಮವಿದೆ.

### ವರಿಷ್ಠರ ಬಳಿ ಭಿನ್ನರು..?

ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ಇಳಿಸಬೇಕು ಎನ್ನುವುದು ಇನ್ನೊಂದು ಬಣದ ಹಠ. ಇದಕ್ಕಾಗಿ, ಹಲವು ಸುತ್ತಿನ ಪ್ರಯತ್ನದ ನಂತರ, ಕೆಲವು ತಿಂಗಳಿನಿಂದ ಈ ವಿಚಾರ ಮುನ್ನಲೆಯಲ್ಲಿ ಇರಲಿಲ್ಲ. ಈಗ, ಅಡ್ಡ ಮತದಾನದ ಭೂತ ರಾಷ್ಟ್ರ ಮಟ್ಟದಲ್ಲಿ ಸುದ್ದಿಯಾಗುತ್ತಿರುವ ಹಿನ್ನೆಲೆಯಲ್ಲಿ ಭಿನ್ನಮತೀಯರು ಬಿಜೆಪಿ ವರಿಷ್ಠರ ಬಳಿ ಹೋಗುವ ಸಾಧ್ಯತೆ ದಟ್ಟವಾಗಿದೆ.

### ಆಣೆ, ಪ್ರಮಾಣಕ್ಕೆ ಅಪಸ್ವರ

ಆಣೆ ಪ್ರಮಾಣ ವಿಚಾರವಾಗಿ ಶಾಸಕ ಎಸ್.ಸುರೇಶ್‌ಕುಮಾರ್ ಅವರು, ಧರ್ಮಸ್ಥಳದಲ್ಲಿ ಆಣೆಪ್ರಮಾಣ ಮಾಡುವ ನಿರ್ಧಾರದ ಬಗ್ಗೆ ಬೇಸರ ವ್ಯಕ್ತ ಪಡಿಸಿದ್ದಾರೆ. ಅಡ್ಡ ಮತದಾನ ಮಾಡಿದವರು ಮುಂದೆ ಪಾಠ ಕಲಿಯಲಿದ್ದಾರೆ ಎನ್ನುತ್ತಿದ್ದಾರೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ. ಹಾಗಾದರೆ ಅಡ್ಡಮತದಾನ ಮಾಡಿದ್ದು ಯಾರು..? ಉತ್ತರ ಅಸ್ಪಷ್ಟವಾಗಿದೆ.

## ಸಂಭವನೀಯ ಬರ ನಿರ್ವಹಣೆಗೆ ರೈತರಿಗೆ ಸಲಹೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ಒಟ್ಟು 61.1 ಮಿ.ಮೀ ಮಳೆಯಾಗಬೇಕಾಗಿದ್ದು, ವಾಸ್ತವದಲ್ಲಿ 71.7 ಮಿ.ಮೀ ಮಳೆಯಾಗಿ ಸಾಮಾನ್ಯಕ್ಕಿಂತ ಶೇ. 17 ರಷ್ಟು ಹೆಚ್ಚು ಮಳೆಯಾಗಿರುತ್ತದೆ.

ಇದೇ ಅವಧಿಯಲ್ಲಿ ಗೋವಿನ ಜೋಳ 17224 ಹೆಕ್ಟೆರ್, ಸಜ್ಜೆ 6398 ಹೆಕ್ಟೆರ್, ತೊಗರಿ 23428 ಹೆಕ್ಟೆರ್, ಹೆಸರು 8291 ಹೆಕ್ಟೆರ್, ಉದ್ದು 3160 ಹೆಕ್ಟೆರ್, ಸೂರ್ಯಕಾಂತಿ 20728 ಹೆಕ್ಟೆರ್, ಸೊಯಾ ಅವರೆ 2849 ಹೆಕ್ಟೆರ್ ಹಾಗೂ ಕಬ್ಬು ಬೆಳೆಯು 1,17,550 ಹೆಕ್ಟೆರ್‌ನಷ್ಟು ಬೆಳೆದಿದ್ದಾರೆ. ಜೂನ 13 ರಿಂದ 19ರ ವರೆಗೆ ಆಗಬೇಕಾಗಿದ್ದ 21.8 ಮಿ.ಮೀ ಮಳೆಗೆ ವಾಸ್ತವವಾಗಿ ಕೇವಲ 1.2 ಮಿ.ಮೀ ಮಳೆಯಾಗಿ ಶೇ.94 ರಷ್ಟು ಕೊರತೆಯಾಗಿರುವುದನ್ನು ಗಮನಿಸಲಾಗಿರುತ್ತದೆ.

ಜುಲೈ ಮತ್ತು ಅಗಸ್ಟ ಮಾಹೆಗಳಲ್ಲಿ ಮಳೆ ಕಡಿಮೆಯಾಗಿ ಬರಗಾಲ ಪರಿಸ್ಥಿತಿ ಉಂಟಾಗುವ ಸಂಭವವಿರುವುದರಿಂದ ಕೃಷಿ ಚಟುವಟಿಕೆಗಳ ಮೇಲೆ ಆಗಬಹುದಾದ ಪರಿಣಾಮಗಳನ್ನು ಎದರಿಸಲು ಅವಶ್ಯವಿರುವ ಕ್ರಮಗಳನ್ನು ಒಳಗೊಂಡಿರುವ ಈ ಕೆಳಕಂಡ ಅಂಶಗಳನ್ನು ರೈತ ಬಾಂಧವರು ಅಳವಡಿಸಿಕೊಳ್ಳುವಂತೆ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಪ್ರಕಟಣೆಯಲ್ಲಿ ಕೋರಿದ್ದಾರೆ.

ಈ ದಿಸೆಯಲ್ಲಿ ರೈತರು ಕಡಿಮೆ ನೀರನ್ನು ಉಪಯೋಗಿಸಿ ಬೆಳೆಯುವ ಕೃಷಿ ಬೆಳೆಗಳಾದ ಸಿರಿಧಾನ್ಯಗಳು (ರಾಗಿ, ಜೋಳ, ನವಣೆ, ಸಜ್ಜೆ ಇತ್ಯಾದಿ) ದ್ವಿದಳ ಧಾನ್ಯಗಳು ಮತ್ತು ಎಣ್ಣೆಕಾಳು ಬೆಳೆಗಳಿಗೆ ಆದ್ಯತೆ ನೀಡುವಂತೆ ರೈತರಲ್ಲಿ ವಿನಂತಿಸಿದೆ. ಪರ್ಯಾಯ ಗೊಬ್ಬರಗಳಾದ ಜೈವಿಕ ಗೊಬ್ಬರಗಳು, ಸಾವಯವ ಗೊಬ್ಬರ, ಹಸಿರೆಲೆ ಗೊಬ್ಬರ ಮತ್ತು ನೈಸರ್ಗಿಕ ಕೃಷಿ, ಸಾವಯವ ಕೃಷಿ ಅಳವಡಿಸಿಕೊಳ್ಳುವುದು. ಪರ್ಯಾಯ ಗೊಬ್ಬರಗಳಾದ ಶೇ. 100 ರಷ್ಟು ನೀರಿನಲ್ಲಿ ಕರಗುವ ಗೊಬ್ಬರ, ಲಘು ಪೋಷಕಾಂಶಗಳು ಹಾಗೂ ನ್ಯಾನೋ ಯೂರಿಯಾ ಮತ್ತು ನ್ಯಾನೋ ಡಿಎಪಿ ಬಳಸಬೇಕು. ಮಣ್ಣು ಪರೀಕ್ಷೆ ಆಧಾರದ ಮೇಲೆ ಅಗತ್ಯವಿರುವ ಹಾಗೂ ಶಿಫಾರಸ್ಸು ಮಾಡಿರುವ ಪ್ರಮಾಣದಲ್ಲಿ ಮಾತ್ರ ರಸಗೊಬ್ಬರಗಳನ್ನು ಬಳಕೆ ಮಾಡುವದರೊಂದಿಗೆ ಬಿತ್ತನೆ ಪೂರ್ವ ಬೀಜಗಳಿಗೆ ಬರ ನಿರೋಧಕ ಶಕ್ತಿ ಒದಗಿಸುತ್ತದೆ. ಮಳೆಯಾಧರಿಸಿ ಸಸಿಗಳ ಸಂಖ್ಯೆಯನ್ನು ಶೇ.33 ರಿಂದ 50 ರಷ್ಟು ಕಡಿಮೆ ಮಾಡಬೇಕು. ಮಳೆಯಾಧರಿಸಿ ರಸಗೊಬ್ಬರ ಬಳಕೆಯನ್ನು ಕಡಿಮೆ ಪ್ರಮಾಣದಲ್ಲಿ ಮಾಡುವಂತೆ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಬಾಡಿದ ಬೆಳೆ, ಈ ಬಾರಿಯೂ ಬರದ ಕಾರ್ಮೋಡ..?

• ಸುರೇಶ ಕೆ.ವಿ, ಮುದಗಲ್

ಕಣ್ಣರೆಯಾದ ಮಳೆರಾಯನಿಂದಾಗಿ ರೈತ ಕಂಗಾಲಾಗಿದ್ದಾರೆ. ಇದರಿಮದಾಗಿ ಈ ಬಾರಿಯೂ ಬರದ ಕಾರ್ಮೋಡ ಆವರಿಸಿದೆ. ಮುಂಗಾರು ಹಂಗಾಮಿನಲ್ಲಿ ಅಬ್ಬರಿಸಿದ ಮೇಘರಾಜನ ಆಗಮನದಿಂದ ಸಂತೋಷದಲ್ಲಿದ್ದ ಅನ್ನದಾತನಿಗೆ ಮುಂಗಾರು ಮಳೆ ಮಲ್ಲನೆ ಕೈ ಕೊಟ್ಟಿದ್ದ–ರಿಂದ ನೇಗಿಲಯೋಗಿಯ ಮುಖ ಮುದುಡಿದೆ.

**ಬಿತ್ತನೆಗೆ ಹದಮಾಡಿದ್ದ ಆದರೆ!:** ಮುಂಗಾರು ಆರಂಭದಲ್ಲಿಯೇ ಸುರಿದ ಮಳೆಯ ಆಗಮನದಿಂದ ಕ್ಷೇತ್ರದ ಅನ್ನದಾತ ಖುಷಿಯೊಂದಿಗೆ ಸಾಲ ಶೂಲ ಮಾಡಿಕೊಂಡು ತಮ್ಮ ತಮ್ಮ ಜಮೀನಿನಲ್ಲಿ ಕೃಷಿ ಚಟುವಟಿಕೆ ಗಳೊಂದಿಗೆ ಬಿತ್ತನೆಗಾಗಿ ಹೊಲವನ್ನು ಸಜ್ಜು ಮಾಡಿಕೊಂಡಿದ್ದ. ಆದರೆ ಮಳೆರಾಯ ಇತ್ತ ಸುಳಿಯದೆ ಹದಗೊಂಡಿದ್ದ ಜಮೀನು ಮುದುಡಿ ಬಾಡಿಹೋಗಿದೆ.

**ಸಂಕಷ್ಟ ಸ್ಥಿತಿಯ ಸುಳಿ:** ಮುಂಗಾರು ಹಂಗಾಮಿನಲ್ಲಿ ಬಿತ್ತನೆಗಾಗಿ ಇಡೀ ರೈತಾಪಿ ವರ್ಗ ವಿವಿಧ ತಳಿಗಳ ಬೀಜ, ರಸ ಗೊಬ್ಬರ ಖರೀದಿಗಾಗಿ ಆಯಾ ಕೃಷಿ ಕೇಂದ್ರ ಖಾಸಗಿ ಅಂಗಡಿ ತೊಗರಿ, ಸೂರ್ಯಕಾಂತಿ ಸೇರಿದಂತೆ ಇನ್ನಿತರ ಬೆಳೆಗಳನ್ನು ಬಿತ್ತನೆ ಕಾರ್ಯ ಮಾಡಿಕೊಂಡಿದ್ದ. ಇನ್ನೇನು ಈ ಭಾರಿ ಚೆನ್ನಾಗಿ ಬೆಳೆಗಳು ಬರಬಹುದು ಎಂಬ ನಿರೀಕ್ಷೆಯೊಂದಿಗೆ ಆಸೆ ಭಾವನೆ ಯೊಂದಿಗಿದ್ದ ಅನ್ನದಾತನಿಗೆ ಮುಂಗಾರು ಮಳೆ ಮಾಯವಾಗಿ ಕೈಕೊಟ್ಟಿದ್ದರಿಂದ ಸಂಕಷ್ಟವನ್ನು ಎದುರಿಸುವಂತ ಪರಿಸ್ಥಿತಿ ನಿರ್ಮಾಣವಾಗಿದೆ.

**ಅನ್ನದಾತ ಬಾಡುವ ಭಿತಿ:** ಮಳೆ ನಿರೀಕ್ಷೆಯನ್ನು ಇಟ್ಟುಕೊಂಡಿದ್ದರಿಂದ ಬಿತ್ತನೆ ಕಾರ್ಯ ಕೆಲಕಡೆ ಇನ್ನು ಆಗಿಲ್ಲ. ಆದರೂ ಸಾಲಶೂಲ ಮಾಡಿಕೊಂಡು ಅಲ್ಪ ಸ್ವಲ್ಪ ಬಿತ್ತನೆ ಕಾರ್ಯ ಮಾಡಿದ್ದರಿಂದ ಈ ಬಾರಿ ಮುಂಗಾರು ಮಳೆ ಬಾರದೆ ಇರುವುದರಿಂದ ಚಿಗುರುತ್ತಿರುವ ಬೆಳೆಗಳು ಬಿಸಿಲಿನ ತಾಪಕ್ಕೆ ಗಳಲ್ಲಿ ಖರೀದಿಸಿದ್ದ ಅನ್ನದಾತ ಒಣಗುವ ಭೀತಿ ಎದುರಾಗಿದೆ.



ಪಂಚಾಯಿತಿ ಫಜೀತಿ



### ಬಿಸಿಲ ಝಳಕ್ಕೆ ಬಾಡತೊಡಗಿದ ಬೆಳೆ..!

ಸಾಲಶೂಲ ಮಾಡಿ ಬಿತ್ತನೆ ಕಾರ್ಯ ಮಾಡಿದ್ದ ಬೆಳೆಗಳು ಬಿಸಿಲಿನ ತಾಪಕ್ಕೆ ಬಾಡುವಂತ ಸ್ಥಿತಿ ನಿರ್ಮಾಣ ಮುಂಗಾರು ಆರಂಭದಲ್ಲಿ ಮಳೆ ಚೆನ್ನಾಗಿ ಆಗಿದ್ದರಿಂದ ಜಮೀನಿನಲ್ಲಿ ಸಾಲ ಶೂಲ ಮಾಡಿ ಹೊಲವನ್ನು ಹದ ಮಾಡಿಕೊಂಡು ಸುಮಾರು ಎಕರನಷ್ಟು ಬಿತ್ತನೆ ಕಾರ್ಯ ಮಾಡಿದ್ದೆ ಬೆಳೆ ಈ ಭಾರಿ ಚೆನ್ನಾಗಿ ಬರಬಹುದು ಅಂತಾ ನಿರೀಕ್ಷೆಯನ್ನು ಇಟ್ಟುಕೊಂಡಿದ್ವಿ. ಆದರೆ ಮುಂಗಾರು ಮಳೆ ಬಾರದೆ ಇರುವುದರಿಂದ ಬಿತ್ತಿದ ಹೆಸರು ಬೆಳೆ ಬಿಸಿಲಿನ ತಾಪಕ್ಕೆ ಬಾಡುವಂತ ಸ್ಥಿತಿ ನಿರ್ಮಾಣವಾಗಿದ್ದು, ಸಂಕಷ್ಟ ಪರಿಸ್ಥಿತಿಯನ್ನು ಅನುಭವಿಸುವಂತಾಗಿದೆ ಎನ್ನುತ್ತಾರೆ ರೈತರು.

ಈ ಬಾರಿ ಮುಂಗಾರು ಮಳೆಯನ್ನು ಸಾಕಷ್ಟು ನಿರೀಕ್ಷೆಯನ್ನು ಇಟ್ಟುಕೊಳ್ಳುವ ಮೂಲಕ ಬಿತ್ತನೆ ಕಾರ್ಯಕ್ಕಾಗಿ ಸಾಲ ಮಾಡಿ, ರಸಗೊಬ್ಬರ, ಬೀಜಗಳನ್ನು ಖರೀದಿಸಿ, ಬಿತ್ತನೆ ಕಾರ್ಯ ಮಾಡಿದ್ದೆ. ಆದರೆ ಈ ಭಾರಿಯ ಮುಂಗಾರು ಮಳೆ ಆರಂಭದಲ್ಲಿಯೇ ಸ್ವಲ್ಪ ಚೆನ್ನಾಗಿತ್ತು. ಬರು ಬರುತ್ತ ಮಳೆ ಬಾರದೆ ಇರುವುದರಿಂದ ಬಿತ್ತನೆ ಕಾರ್ಯ ಮಾಡಿದ್ದ ಬೆಳೆಗಳು ಬಾಡುವಂತಾಗಿದೆ. ಈಗೇನ್ ಮಾಡೋದು ಹೇಳಿ..?

–ಈರಪ್ಪ ಗೊಲ್ಲರ್, ಶ್ರೀಶೈಲಪ್ಪ ಪಿಕಳಿಹಾಳ ಸ್ಥಳೀಯ ರೈತರು

ಜಿಲ್ಲೆಯಲ್ಲಿ ಮುಂಗಾರು ಪೂರ್ವದಲ್ಲಿ ನಾಲ್ಕೈದು ಬಾರಿ ಉತ್ತಮ ಮಳೆಯಾಗಿ ರೈತರಲ್ಲಿ ಹೊಸ ಆಶಾಭಾವನೆ ಮೂಡಿಸಿತ್ತು. ಅದು ಮುಂಗಾರು ಹಂಗಾಮಿನಲ್ಲಿ ಇನ್ನಷ್ಟು ಹೆಚ್ಚಾಗಬಹುದು ಎಂಬ ನಿರೀಕ್ಷೆಯನ್ನು ದುಪ್ಪಟ್ಟು ಮಾಡಿತ್ತು. ಆದರೆ, ಕಳೆದ ಎರಡು ವಾರದಿಂದ ಮಳೆ ಜಿಲ್ಲೆಯಿಂದ ಕಣ್ಮರೆಯಾಗಿದೆ. ಸರ್ಕಾರ ಈ ಭಾಗದ ರೈತರ ನೆರವಿಗೆ ಬರಲೇ ಬೇಕು.

–ಸೋಮರೆಡ್ಡಿ, ಕರ್ನಾಟಕ ರೈತ ಸಂಘ ಮುದಗಲ್ ಹೋಬಳಿ ಘಟಕ ಅಧ್ಯಕ್ಷ

## 2028ರಲ್ಲಿ ನಾನೂ ಮಂತ್ರಿಯಾಗುತ್ತೇನೆ; ಶೇ. 7.5ರಷ್ಟು ಮೀಸಲಾತಿ ನೀಡದಿದ್ದರೆ ರಾಜೀನಾಮೆ: ರಮೇಶ್ ಜಾರಕಿಹೊಳಿ

## ಜಿಲ್ಲೆಯಲ್ಲಿ ಕೈ ಕೊಟ್ಟ ಮಳೆರಾಯ: ರೈತರ ನೆರವಿಗೆ ಸರ್ಕಾರ ಧಾವಿಸಲಿ

ಕೃಷಿ ಪ್ರಧಾನ ದೇಶವಾದ ಭಾರತದಲ್ಲಿ ರೈತನ ಬದುಕು ಇನ್ನೂ ಪ್ರಕೃತಿಯನ್ನು ಅವಲಂಬಿಸಿದೆ. ಅದರಲ್ಲೂ ಬೀದರ್ ಜಿಲ್ಲೆಯ ಬಹುತೇಕ ರೈತರು ಮಳೆಯನ್ನೇ ನಂಬಿಕೊಂಡು ಕೃಷಿ ಮಾಡುತ್ತಾರೆ. ಆದರೆ ಈ ಬಾರಿ ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಸುರಿಯದೆ ರೈತರು ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಬಿತ್ತನೆ ಮಾಡಿದ ಬೀಜಗಳು ಮೊಳಕೆಯೊಡೆಯದೆ ಒಣಗುತ್ತಿರುವುದು, ಬೆಳೆಗಳು ನೀರಿನ ಕೊರತೆಯಿಂದ ಕಂಗಾಲಾಗುತ್ತಿರುವುದು ರೈತರಲ್ಲಿ ತೀವ್ರ ಆತಂಕ ಮೂಡಿಸಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಸಾವಿರಾರು ರೂಪಾಯಿ ಖರ್ಚು ಮಾಡಿ ಬೀಜ, ಗೊಬ್ಬರ ಹಾಗೂ ಕೃಷಿ ಚಟುವಟಿಕೆಗಳನ್ನು ಆರಂಭಿಸಿದ ರೈತರು ಈಗ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಒಂದೆಡೆ ಸಾಲದ ಹೊರೆ, ಮತ್ತೊಂದೆಡೆ ಮಳೆಯ ಕೊರತೆಯಿಂದ ಬೆಳೆ ಹಾನಿಯ ಭೀತಿ ರೈತರನ್ನು ಚಿಂತೆಗೀಡು ಮಾಡಿದೆ. ರೈತನ ಕಷ್ಟವನ್ನು ಅರ್ಥಮಾಡಿಕೊಳ್ಳುವ ಜವಾಬ್ದಾರಿ ಸರ್ಕಾರದ ಮೇಲಿದೆ.

ಸರ್ಕಾರ ತಕ್ಷಣ ಬೀದರ್ ಜಿಲ್ಲೆಯ ಮಳೆ ಕೊರತೆಯ ಪರಿಸ್ಥಿತಿಯನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ಬೆಳೆ ಹಾನಿ ಸಮೀಕ್ಷೆ ನಡೆಸಬೇಕು. ರೈತರಿಗೆ ಪರಿಹಾರ ಧನ, ಬಡ್ಡಿರಹಿತ ಸಾಲ ಸೌಲಭ್ಯ, ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಅಗತ್ಯ ನೆರವು ಒದಗಿಸಬೇಕು. ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಗ್ರಾಮ ಮಟ್ಟದಲ್ಲಿ ಭೇಟಿ ನೀಡಿ ರೈತರಿಗೆ ಅಗತ್ಯ ಸಲಹೆ ಹಾಗೂ ಸಹಕಾರ ನೀಡಬೇಕು.

ರೈತ ದೇಶದ ಬೆನ್ನೆಲುಬು ಎಂಬ ಮಾತು ಕೇವಲ ಭಾಷಣಕ್ಕೆ ಸೀಮಿತವಾಗಬಾರದು. ಸಂಕಷ್ಟದ ಸಮಯದಲ್ಲಿ ರೈತರ ಕೈ ಹಿಡಿಯುವ ಕೆಲಸ ಸರ್ಕಾರದಿಂದ ಆಗಬೇಕು. ಬೀದರ್ ಜಿಲ್ಲೆಯ ರೈತರ ಸಮಸ್ಯೆಗೆ ಸರ್ಕಾರ ತಕ್ಷಣ ಸ್ಪಂದಿಸಿ, ಅವರ ಬದುಕಿಗೆ ಆಸರೆಯಾಗಬೇಕಾಗಿದೆ. ರೈತನ ಉಳಿವು ದೇಶದ ಅಭಿವೃದ್ಧಿಯ ಮೂಲ ಎಂಬುದನ್ನು ಪ್ರತಿಯೊಬ್ಬರೂ ಅರಿಯಬೇಕಾಗಿದೆ.

## ಅತಿಥಿ ಉಪನ್ಯಾಸಕಿ ಡಾ. ಸುನೀತಾ ಮಹೇಶ್ವರಿಗೆ ಕನ್ನಡ ರತ್ನ ಪ್ರಶಸ್ತಿ



**ಬೀದರ್:** ಶಿಕ್ಷಣ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿರುವ ಬೀದರ ವಿಶ್ವವಿದ್ಯಾಲಯದ ಅತಿಥಿ ಉಪನ್ಯಾಸಕಿ ಡಾ. ಸುನೀತಾ ಮಹೇಶ್ವರಿ ಅವರಿಗೆ ಕನ್ನಡ ಸೇನೆ ಕರ್ನಾಟಕ ವತಿಯಿಂದ ಪ್ರತಿಷ್ಠಿತ "ಕನ್ನಡ ರತ್ನ" ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಜೂನ್ 19ರಂದು ನಡೆದ ಕನ್ನಡ ಸೇನೆ ಕರ್ನಾಟಕದ 2ನೇ ಗಡಿನಾಡು ಜಾಗೃತ ಸಮಾವೇಶದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಕಾರ್ಯಕ್ರಮವು ಕನ್ನಡ ಸೇನೆ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ (ಬೆಂಗಳೂರು) ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಭಾರತ ಸೇವಾ ಸಮಿತಿಯ ಹವಾಮಲ್ಲಿನಾಥ ಸ್ವಾಮಿ, ಬಾಲಯೋಗಿ ಅಭಿನವ ಶರಣ ಹಾಗೂ ಶಂಕರಾನಂದ ಸ್ವಾಮೀಜಿಗಳ ದಿವ್ಯಸಾನ್ನಿಧ್ಯದಲ್ಲಿ ನಡೆದ ಸಮಾವೇಶವನ್ನು ಭಾರತ ಸರ್ಕಾರದ ರಾಜ್ಯ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ ಉದ್ಘಾಟಿಸಿದರು. ಡಾ.ರವಿ ಸ್ವಾಮಿ ಅವರ ಮುಖಂಡತ್ವದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ವಿಕಲಚೇತನರಾಗಿದ್ದರೂ ಶಿಕ್ಷಣ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಡಾ. ಸುನೀತಾ ಮಹೇಶ್ವರಿ ಅವರನ್ನು ಸನ್ಮಾನಿಸಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸರಿಗಮಪ ಸೀಸನ್–21ರ ವಿಜೇತೆ ಕು. ಶಿವಾನಿ ಸ್ವಾಮಿ, ಕಾಮಿಡಿ ಕಿಲಾಡಿ ಖ್ಯಾತಿಯ ನಯನ ಹಾಗೂ ಹಾಸ್ಯ ಚಲನಚಿತ್ರ ನಟ ಟೆನಶನ್ ಕೃಷ್ಣ ಭಾಗವಹಿಸಿ ಪ್ರೇಕ್ಷಕರನ್ನು ರಂಜಿಸಿದರು. ನಾಡಿನ ಖ್ಯಾತ ಗಾಯಕರು ಕೂಡ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಕನ್ನಡ ಸೇನೆ ಜಿಲ್ಲಾಧ್ಯಕ್ಷ ಸುಭಾಷ ಕೆನಾಡೆ, ತಾಲ್ಲೂಕು ಅಧ್ಯಕ್ಷ ರಾಜಶೇಖರ ಮಂಗಲಪೇಟ ಹಾಗೂ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶ್ರೀಮತಿ ಶಕುಂತಲಾ ಬಿರಾದ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ ಮತ್ತು ಬ್ರಿಟಿಷ್ ಕೌನ್ಸಿಲ್ ಸಹಯೋಗದೊಂದಿಗೆ ಅತ್ಯುತ್ತಮ ಪ್ರತಿಭಾವಂತ ಪದವಿಪೂರ್ವ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ ಖಅಔಗಖ–2.0 ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೋಮವಾರ ಚಾಲನೆ ನೀಡಿದರು. ಉನ್ನತ ಶಿಕ್ಷಣ ಇಲಾಖೆ ಮಾಜಿ ಸಚಿವ ಹಾಗೂ ಶಾಸಕ ಡಾ. ಎಂ.ಸಿ.ಸುಧಾಕರ್, ಶಾಸಕರಾದ ವಿಜಯಾನಂದ ಕಾಶಪ್ಪನವರ್, ದರ್ಶನ್ ಧ್ರುವನಾರಾಯಣ್, ಬ್ರಿಟಿಷ್ ಡೆಪ್ಯೂಟಿ ಹೈ ಕೌನ್ಸಿಲ್ ಒವೆನ್ ರಿಚರ್ಡ್ಸ್, ಬ್ರಿಟಿಷ್ ಕೌನ್ಸಿಲ್ ದಕ್ಷಿಣ ಭಾರತ ನಿರ್ದೇಶಕಿ ಜನಕ ಪುಷ್ಪನಾಥಾನ್, ಉನ್ನತ ಶಿಕ್ಷಣ ಇಲಾಖೆ ಕಾರ್ಯದರ್ಶಿ ತುಳಸಿ ಮದ್ದಿನೇನಿ ಮತ್ತಿತರ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶಾಲೆಯಲ್ಲಿ ಕಳಪೆ ಆಹಾರ: ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹ



ವಿದ್ಯಾರ್ಥಿಗಳಿಗೆ ಗುಣಮಟ್ಟದ ಹಾಗೂ ಪೌಷ್ಟಿಕ ಆಹಾರ ಒದಗಿಸುವುದು ಸರ್ಕಾರದ ಹಾಗೂ ಸಂಬಂಧಪಟ್ಟ ಇಲಾಖೆಯ ಜವಾಬ್ದಾರಿಯಾಗಿದೆ. ಮಕ್ಕಳ ಆರೋಗ್ಯದ ವಿಚಾರದಲ್ಲಿ ನಿರ್ಲಕ್ಷ್ಯ ತೋರಿದವರನ್ನು ಯಾವುದೇ ಕಾರಣಕ್ಕೂ ಕ್ಷಮಿಸಲಾಗುವುದಿಲ್ಲ. ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಿ, ಇಂತಹ ಘಟನೆಗಳು ಮರುಕಳಿಸದಂತೆ ಶಾಶ್ವತ ವ್ಯವಸ್ಥೆ ಕಲ್ಪಿಸಬೇಕು. ಅಲ್ಲದೆ, ವಸತಿ ಶಾಲೆಗಳಲ್ಲಿ ಆಹಾರದ ಗುಣಮಟ್ಟ, ಸ್ವಚ್ಛತೆ ಹಾಗೂ ವಿದ್ಯಾರ್ಥಿಗಳ ಕಲ್ಯಾಣಕ್ಕೆ ಸಂಬಂಧಿಸಿದಂತೆ ನಿಯಮಿತ ತಪಾಸಣೆ ನಡೆಸಿ, ಯಾವುದೇ ಲೋಪ ಕಂಡುಬಂದಲ್ಲಿ ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

–ಡಾ. ಶೈಲೇಂದ್ರ ಬೆಲ್ದಾಳೆ, ಶಾಸಕರು ಬೀದರ ದಕ್ಷಿಣ ಕ್ಷೇತ್ರ



• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಬೀದರ್ ದಕ್ಷಿಣ ಕ್ಷೇತ್ರದ ಕಮಠಾಣಾ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಭೇಟಿ ನೀಡಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಆಹಾರ ವ್ಯವಸ್ಥೆ, ಅಡುಗೆಮನೆ ಹಾಗೂ ಆಹಾರ ಪದಾರ್ಥಗಳ ಗುಣಮಟ್ಟವನ್ನು ಪರಿಶೀಲಿಸಿದರು.

ಪರಿಶೀಲನೆ ವೇಳೆ ವಿದ್ಯಾರ್ಥಿಗಳಿಗಾಗಿ ಸಂಗ್ರಹಿಸಿಟ್ಟಿದ್ದ ತೊಗರಿಬೇಳೆ, ಅಕ್ಕಿ, ಅಡುಗೆ ಎಣ್ಣೆ, ಶೇಂಗಾ, ಹೆಸರು ಬೇಳೆ ಸೇರಿದಂತೆ ಇನ್ನಿತರ ಆಹಾರ ಪದಾರ್ಥಗಳು ಕಳಪೆ ಗುಣಮಟ್ಟದ್ದಾಗಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಶಾಸಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳ ಆರೋಗ್ಯದೊಂದಿಗೆ ಚೆಲ್ಲಾಟವಾಡುವಂತಹ ಘಟನೆಗಳನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಘಟನೆಯ ಗಂಭೀರತೆಯನ್ನು ಮನಗಂಡ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ತಕ್ಷಣವೇ ಸಂಬಂಧಪಟ್ಟ ಮೇಲಧಿಕಾರಿಗಳಿಗೆ ದೂರವಾಣಿ ಮೂಲಕ ಸಂಪರ್ಕಿಸಿ, ಕಳಪೆ ಆಹಾರ ಪದಾರ್ಥಗಳ ಕುರಿತು ಸಂಪೂರ್ಣ ಮಾಹಿತಿ ನೀಡಿ ಪ್ರಕರಣದ ಸಮಗ್ರ ತನಿಖೆ ನಡೆಸುವಂತೆ ಸೂಚಿಸಿದರು. ಜೊತೆಗೆ, ಈ ನಿರ್ಲಕ್ಷ್ಯಕ್ಕೆ ಕಾರಣರಾದ ಅಧಿಕಾರಿಗಳು, ಸಿಬ್ಬಂದಿ ಅಥವಾ ಗುತ್ತಿಗೆದಾರರು ಯಾರೇ ಆಗಿದ್ದರೂ ಅವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಠಿಣ ಶಿಸ್ತು ಹಾಗೂ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು. ಪರಿಶೀಲನೆಯ ಬಳಿಕ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ವಿದ್ಯಾರ್ಥಿಗಳೊಂದಿಗೆ ನೇರವಾಗಿ ಸಂವಾದ ನಡೆಸಿ ಅವರ ಅಹವಾಲುಗಳು ಹಾಗೂ ಸಮಸ್ಯೆಗಳನ್ನು ಆಲಿಸಿದರು. ವಿದ್ಯಾರ್ಥಿಗಳು ನೀಡಿದ ಮಾಹಿತಿಯನ್ನು ಗಂಭೀರವಾಗಿ ಪರಿಗಣಿಸಿದ ಅವರು, ಮೂಲಭೂತ ಸೌಲಭ್ಯಗಳು, ಆಹಾರದ ಗುಣಮಟ್ಟ ಹಾಗೂ ವಸತಿ ವ್ಯವಸ್ಥೆಗೆ ಸಂಬಂಧಿಸಿದ ಎಲ್ಲ ಸಮಸ್ಯೆಗಳನ್ನು ಶೀಘ್ರದಲ್ಲಿಯೇ ಪರಿಷ್ಕರಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

# ಅಭಿಮಾನಿಗಳ ನಡುವೆ ಅಲಿಖಾನ್ ಜನ್ಮದಿನ ಸಂಭ್ರಮ



• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಕಲಬುರ್ಗಿ ಮಹಾನಗರ ಪಾಲಿಕೆಯ ಸಕ್ರಿಯ ಕಾಂಗ್ರೆಸ್ ಸದಸ್ಯರು ಹಾಗೂ ಜನಸೇವೆಯಲ್ಲಿ ತೊಡಗಿಸಿಕೊಂಡಿರುವ ಅಲಿಖಾನ್ ಅವರ ಜನ್ಮದಿನವನ್ನು ಬೀದರ್‌ನಲ್ಲಿ ಅಭಿಮಾನಿಗಳು, ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಸಂಭ್ರಮದಿಂದ ಆಚರಿಸಿದರು.

ನಗರದ ವಿವಿಧ ಭಾಗಗಳಿಂದ ಆಗಮಿಸಿದ್ದ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಲಿಖಾನ್ ಅವರ ಅಭಿಮಾನಿಗಳು ಜನ್ಮದಿನದ ಅಂಗವಾಗಿ ಶುಭಾಶಯಗಳನ್ನು ಸಲ್ಲಿಸಿ, ಅವರ ಸಾಮಾಜಿಕ ಸೇವೆ ಮತ್ತು ಜನಪರ ಕಾರ್ಯಗಳನ್ನು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸುವ ಮೂಲಕ ಜನ್ಮದಿನವನ್ನು ವಿಶೇಷವಾಗಿ ಆಚರಿಸಲಾಯಿತು. ಈ ವೇಳೆ ಕಾರ್ಯಕರ್ತರು ಹಾಗೂ ಮುಖಂಡರು ಅಲಿಖಾನ್ ಅವರಿಗೆ ಪುಷ್ಪಗುಚ್ಛ ನೀಡಿ ಸನ್ಮಾನಿಸಿ, ದೀರ್ಘಾಯುಷ್ಯ, ಉತ್ತಮ ಆರೋಗ್ಯ ಹಾಗೂ ಇನ್ನಷ್ಟು ಜನಸೇವೆಯ ಅವಕಾಶಗಳು ದೊರೆಯಲಿ ಎಂದು ಹಾರೈಸಿದರು.

ಅಲಿಖಾನ್ ಅವರು ಹಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆ ಬಲಪಡಿಸುವ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಸಮಾಜದ ವಿವಿಧ ವರ್ಗಗಳ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ. ಬಡವರು, ಯುವಕರು ಹಾಗೂ ಅಗತ್ಯವಿರುವ ಜನರಿಗೆ ನೆರವಾಗುವ ಮೂಲಕ ಸಾರ್ವಜನಿಕ ವಲಯದಲ್ಲಿ ತಮ್ಮದೇ ಆದ ಗುರುತನ್ನು ಮೂಡಿಸಿಕೊಂಡಿದ್ದಾರೆ ಎಂದು ಮುಖಂಡರು ಅಭಿಪ್ರಾಯಪಟ್ಟರು.

ಅಲಿಖಾನ್ ಅವರು ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದು, ಜನಸಾಮಾನ್ಯರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಮುಂದಿನ ದಿನಗಳಲ್ಲಿಯೂ ಅವರು ಸಾಮಾಜಿಕ ಹಾಗೂ ಸಾರ್ವಜನಿಕ ಸೇವಾ ಕಾರ್ಯಗಳಲ್ಲಿ ಇನ್ನಷ್ಟು ಸಕ್ರಿಯವಾಗಿ ತೊಡಗಿಸಿಕೊಂಡು ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ದಶರಥ್ ಮೀಸೆ, ಶ್ರೀಕಾಂತ್ ಭವಾನಿ, ಸುಮಥ ಲಂಗೋಟೆ, ಬಡಿಗೇರ್ ಈಶ್ವರ್, ಎಂ.ಕೆ. ಮಾರುತಿ, ಅಮರ್ ಪೂಜಾರಿ, ಸಾಗರ್ ಮೈಲೂರ್, ಆಕಾಶ್ ಮೈಲೂರ್, ಯೋಹಾನ್ ಮೈಲೂರ್, ಜಸ್ಟಿನ್, ಗಿರೀಶ್, ಸಂತೋಷ್, ಅರುಣ್ ಮೈಲೂರ್, ಅಶೋಕ್, ಅರುಣ್ ದೊಡ್ಡಿ, ಅಭಿಷೇಕ್, ರೂಬಿನ್, ಜಾಫರ್, ಮೊಷಿನ್ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಸಮಾಜಸೇವಕರು ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

# ಅಲೆಮಾರಿ ಸಮುದಾಯಕ್ಕೆ ನಿವೇಶನ ಕಲ್ಪಿಸಲು ಮನವಿ




• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ನಗರದ ಚೌಳಿಕಮಾನ ಸಮೀಪ ಬೀದಿ ಬದಿಯಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಜಾತಿಯ ಅಲೆಮಾರಿ ಸಮುದಾಯಗಳಾದ ಸಿಂದೋಳ, ಮಾಗರವಾಡಿ ಹಾಗೂ ಕೊರವ ಜನಾಂಗದ ಕುಟುಂಬಗಳಿಗೆ ಕಾರಂಜಾ ಗ್ರಾಮದ ಸರ್ವೆ ನಂ.45ರಲ್ಲಿ ತಾತ್ಕಾಲಿಕವಾಗಿ ವಾಸಿಸಲು ಜಾಗ ಮಂಜೂರು ಮಾಡುವಂತೆ ವಿಶ್ವಕ್ರಾಂತಿ ದಿವ್ಯಪೀಠದ ಅಧ್ಯಕ್ಷರಾದ ಓಂಪ್ರಕಾಶ ರೊಟ್ಟೆ ಅವರ ನೇತೃತ್ವದಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ–ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ ಅವರಿಗೆ ಮನವಿ ಸಲ್ಲಿಸಲಾಗಿದೆ.

ಮನವಿಯಲ್ಲಿ, ಸಮಾಜ ಕಲ್ಯಾಣ ಇಲಾಖೆಯು ಸರ್ವೆ ನಂ.87ರಲ್ಲಿ ಎರಡು ಎಕರೆ ಜಮೀನು ಕಾಯ್ದಿರಿಸಿದ್ದರೂ ಅದು ವಾಸಯೋಗ್ಯವಲ್ಲ ಎಂದು ಈಗಾಗಲೇ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಉಲ್ಲೇಖಿಸಲಾಗಿದೆ. ಇದೇ ವಿಷಯವನ್ನು ಏಪ್ರಿಲ್ 18, 2026ರಂದು ನಡೆದ ಸಭೆಯಲ್ಲಿಯೂ ಅಧ್ಯಕ್ಷರ ಗಮನಕ್ಕೆ ತರಲಾಗಿತ್ತು ಎಂದು ತಿಳಿಸಲಾಗಿದೆ.

ಕಾರಂಜಾ ಗ್ರಾಮದ ಸರ್ವೆ ನಂ.45ರಲ್ಲಿ ನಾಲ್ಕು ಎಕರೆ ಜಮೀನು ಲಭ್ಯವಿದ್ದು, ಅದರಲ್ಲಿ ಒಂದು ಎಕರೆ ಜಮೀನನ್ನು ಚೌಳಿಕಮಾನ ಸಮೀಪದ ಅಲೆಮಾರಿ ಸಮುದಾಯದವರಿಗೆ ನೀಡಲು ಅಗತ್ಯ ಪ್ರಕ್ರಿಯೆಗಳು ಪೂರ್ಣಗೊಂಡಿವೆ. ಹೀಗಾಗಿ ತಕ್ಷಣವೇ ಹದ್ದುಬಸ್ತು ಮಾಡಿ ಜಮೀನು ಹಸ್ತಾಂತರಿಸಲು ಸೂಚನೆ ನೀಡುವಂತೆ ಮನವಿ ಮಾಡಲಾಗಿದೆ.

ಪ್ರಸ್ತುತ ಅಲೆಮಾರಿ ಕುಟುಂಬಗಳು ವಾಸಿಸುತ್ತಿರುವ ಸ್ಥಳಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ಆದೇಶ ಭೂ ಮಾಲೀಕರ ಪರವಾಗಿ ಬಂದಿದ್ದು, ಗುಡಿಸಲುಗಳನ್ನು ತೆರವುಗೊಳಿಸುವಂತೆ ಪೊಲೀಸ್ ಠಾಣೆಯಲ್ಲಿಯೂ ದೂರು ದಾಖಲಾಗಿದೆ. ಜೂನ್ 30ರೊಳಗೆ ಸ್ಥಳ ಖಾಲಿ ಮಾಡಲು ಕಾಲಾವಕಾಶ ನೀಡಲಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದಲ್ಲದೆ, ಏಪ್ರಿಲ್ 18ರಂದು ಅಧ್ಯಕ್ಷರು ಗುಡಿಸಲುಗಳಿಗೆ ಭೇಟಿ ನೀಡಿ ವಿದ್ಯುತ್, ಶೌಚಾಲಯ ಹಾಗೂ ಶುದ್ಧ ಕುಡಿಯುವ ನೀರಿನಂತಹ ಮೂಲಸೌಕರ್ಯ ಒದಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದರೂ ಇದುವರೆಗೆ ಯಾವುದೇ ಕಾಮಗಾರಿ ನಡೆದಿಲ್ಲ ಎಂದು ಆರೋಪಿಸಲಾಗಿದೆ.

ಅಲೆಮಾರಿ ಸಮುದಾಯದ ಬಡ ಕುಟುಂಬಗಳ ಮಾನವೀಯ ಸಮಸ್ಯೆಯನ್ನು ಪರಿಗಣಿಸಿ, ತಕ್ಷಣ ಕ್ರಮ ಕೈಗೊಂಡು ವಾಸಸ್ಥಳ ಹಾಗೂ ಮೂಲಸೌಕರ್ಯ ಒದಗಿಸುವಂತೆ ಅವರು ಮನವಿಯಲ್ಲಿ ಆಗ್ರಹಿಸಿದ್ದಾರೆ.

# ರೂಪಾ ಪಾಟೀಲ್ ನೇತೃತ್ವದಲ್ಲಿ ಯಶಸ್ವಿ ಯೋಗ ದಿನಾಚರಣೆ





• **ಮಲ್ಲಮ್ಮ ನುಡಿ ವಾರ್ತೆ ಬೀದರ್**

"ಯೋಗ ಫಾರ್ ಹೆಲ್ದಿ ಏಜಿಂಗ್" ಧ್ಯೇಯವಾಕ್ಯದಡಿ ಪತಂಜಲಿ ಮಹಿಳಾ ಘಟಕ ಬೀದರ್ ಜಿಲ್ಲೆ, ಅಂತರರಾಷ್ಟ್ರೀಯ ಪ್ರಾಕೃತಿಕ ಚಿಕಿತ್ಸಾ ಸಂಘಟನೆ ಹಾಗೂ ರೂಪಾ ಕಲೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ವಿವಿಧ ಶಾಲೆಗಳು ಮತ್ತು ಬಡಾವಣೆಗಳಲ್ಲಿ 10 ದಿನಗಳ ಕೌಂಟ್‌ಡೌನ್ ಯೋಗ ದಿನಾಚರಣೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಜನವಾಡ, ಧೂಪತ ಮಹಾಗಾವ, ಕಮಠಾಣ, ಬೀದರ್ ನಗರದ ವಿವಿಧ ಶಾಲೆಗಳು ಹಾಗೂ ಜ್ಯೋತಿ ಮತ್ತು ಗುಮ್ಮೆ ಬಡಾವಣೆಗಳಲ್ಲಿ ಯೋಗ ತರಬೇತಿ, ಧ್ಯಾನ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು. ಪತಂಜಲಿ ಮಹಿಳಾ ಘಟಕದ ಅಧ್ಯಕ್ಷೆ ರೂಪಾ ಪಾಟೀಲ್ ನೇತೃತ್ವದಲ್ಲಿ ನಡೆದ ಕಾರ್ಯಕ್ರಮಗಳಲ್ಲಿ ಸಾವಿರಾರು ವಿದ್ಯಾರ್ಥಿಗಳು, ಮಹಿಳೆಯರು ಮತ್ತು ಸಾರ್ವಜನಿಕರು ಭಾಗವಹಿಸಿದರು.

ಯೋಗದ ಮಹತ್ವ, ಆರೋಗ್ಯಕರ ಜೀವನಶೈಲಿ ಹಾಗೂ ದೈನಂದಿನ ಯೋಗಾಭ್ಯಾಸದ ಅಗತ್ಯತೆಯ ಕುರಿತು ಅರಿವು ಮೂಡಿಸಲಾಯಿತು. ಮುಂದಿನ ದಿನಗಳಲ್ಲಿಯೂ ಜಿಲ್ಲೆಯ ಇನ್ನಷ್ಟು ಶಾಲೆಗಳು ಮತ್ತು ಬಡಾವಣೆಗಳಲ್ಲಿ ಉಚಿತ ಯೋಗ ಶಿಬಿರಗಳನ್ನು ಆಯೋಜಿಸಲಾಗುವುದು ಎಂದು ರೂಪಾ ಪಾಟೀಲ್ ತಿಳಿಸಿದ್ದಾರೆ.

ಕಾರ್ಯಕ್ರಮಗಳಲ್ಲಿ ಗೌರೀಶ್ ಪಾಟೀಲ್, ಅನಿಲ್ ಹಂಗರಗಿ, ಮಂಜುಳ ಹಂಗರಗಿ, ರೋಹಿಣಿ ಪಾಟೀಲ್, ಲತಿಕಾ ಸೇಡೋಳೆ, ಪ್ರಿಯಾಂಕಾ ಪಾಟೀಲ್, ಸಂತೋಷ್ ಸರ್, ಸುವರ್ಣ ಚಿಮಕೋಡ, ಶರಣಪ್ಪ ಚಿಮಕೋಡ, ಭಾರತಿ ಪಾಟೀಲ್, ಪ್ರತಿಭಾ ಡಿ., ಶಶಿಕಲಾ ಸಂಗ್ರಾಮ್, ವಿದ್ಯಾವತಿ ಹಿರೇಮಠ, ಆನಂದ್ ಉದಗಿರ, ಪ್ರಕಾಶ್ ಕನಜೋಳೆ, ಸುನಿಲ್ ವೈಜಾಪುರೆ, ಡಾ. ಸುಜಾತಾ ಹೊಸಮನಿ, ನಾಗನಾಥರಾವ್, ಮಾಸ್ಟರ್ ನಿಂಗಣ್ಣ, ರುಕ್ಮಿಣಿ ಮೇಡಂ, ರಾಜಕುಮಾರ್ ಪಾಟೀಲ್, ಜಗನ್ನಾಥ್ ಸರ್, ಚಂದ್ರಕಾಂತ್ ನೀಡೋದಕರ, ಸಾಧನಾ ಗಣಪುರ, ಲಕ್ಷ್ಮೀ ಬಿರಾದಾರ, ರಾಜಕುಮಾರಿ ಅಗರ್ವಾಲ್, ಸಂಧ್ಯಾ ಪಾಟೀಲ್, ಲೀನಾ ಅಗ್ರವಾಲ್, ನೀಲಿಮಾ ಕುಲಕರ್ಣಿ, ವಸುಂಧರಾ ಚಂಗಲೇರಾ, ಸರಳ ಮಾನಕಾರಿ, ನಿಕಿತಾ ಹಂಗರಗಿ, ವನಿತಾ ಬಚ್ಚಾ, ರಶ್ಮಿ ರಾಮತೀರ್ಥ, ವಿಜಯ ರಂಗದಾಳ್, ಗೀತಾ ಹಂಗರಗಿ, ಲಲಿತಾ ಹಂಗರಗಿ, ವಿದ್ಯಾ ಸ್ವಾಮಿ, ವಿಜಯ ಸ್ವಾಮಿ, ಪ್ರೇಮಿಲಾ ಚೋಳಕರ್, ಪದ್ಮಾ ಚಂದರಗಿ, ಶ್ರಾವಂತಿ ಬಚ್ಚಾ, ಶ್ರಾವಣಿ ಬಚ್ಚಾ, ರಾಣಿ ಪಾಟೀಲ್, ರಾಜೇಶ್ವರಿ ಬಿರಾದಾರ, ಅನ್ನಪೂರ್ಣ ಲಕ್ಷೆಟ್ಟಿ, ಸಿಂಚನ ಪಾಟೀಲ್, ಗೋರಖನಾಥ್ ಕುಂಬಾರ, ಮಲ್ಲಿಕಾರ್ಜುನ ಪಾಟೀಲ್, ಶ್ರೀನಿವಾಸ ಬಿರಾದಾರ ಹಾಗೂ ರಾಣಿ ಗಾಜಲ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಯೋಗವು ಆರೋಗ್ಯಕರ ಬದುಕಿನ ಮೂಲಾಧಾರ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಹುಣಸಗಿ: ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಪಟ್ಟಣದ ಯುಕೆಪಿ ಕ್ಯಾಂಪಿನ ಸ್ಪಂದನ ಪಬ್ಲಿಕ್ ಶಾಲೆಯಲ್ಲಿ ಶನಿವಾರ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸಾಮೂಹಿಕವಾಗಿ ಯೋಗಾಭ್ಯಾಸ ನಡೆಸುವ ಮೂಲಕ ಯೋಗ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ವಿವಿಧ ಯೋಗಾಸನಗಳು ಮತ್ತು ಪ್ರಾಣಾಯಾಮಗಳನ್ನು ಅಭ್ಯಾಸ ಮಾಡಿ ಯೋಗದ ಮಹತ್ವವನ್ನು ಅರಿತುಕೊಂಡರು.ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ಮುಖ್ಯಸ್ಥ ಮಲ್ಲಿಕಾರ್ಜುನ ಗುತ್ತೇದಾರ್, ಯೋಗವು ಭಾರತದ ಪ್ರಾಚೀನ ಪರಂಪರೆಯ ಅಮೂಲ್ಯ ಕೊಡುಗೆಯಾಗಿದ್ದು, ಆರೋಗ್ಯಕರ ಬದುಕಿಗೆ ಯೋಗ ಅತ್ಯಗತ್ಯವಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಪ್ರತಿದಿನ ಯೋಗಾಭ್ಯಾಸ ಮಾಡುವ ಮೂಲಕ ಉತ್ತಮ ಆರೋಗ್ಯ ಮತ್ತು ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.ಸಹ ಶಿಕ್ಷಕಿ ಜಯಶ್ರೀ ಮಡಿವಾಳರ ಮಾತನಾಡಿ, ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ; ಮನಸ್ಸು, ದೇಹ ಮತ್ತು ಆತ್ಮದ ಸಮನ್ವಯ ಸಾಧಿಸುವ ಜೀವನ ಪದ್ಧತಿಯಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಯೋಗದ ಮೂಲಕ ಶಿಸ್ತು, ಸಂಯಮ ಹಾಗೂ ಸಕಾರಾತ್ಮಕ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಯೋಗದಿಂದ ಆರೋಗ್ಯ ವೃದ್ಧಿ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಜೂ 22: ಯೋಗವು ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ವೃದ್ಧಿಸುವ ಅತ್ಯುತ್ತಮ ಸಾಧನವಾಗಿದ್ದು, ವಿದ್ಯಾರ್ಥಿಗಳು ದಿನನಿತ್ಯ ಯೋಗಾಭ್ಯಾಸವನ್ನು ಅಳವಡಿಸಿಕೊಳ್ಳಬೇಕು ಎಂದು ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಸಿದ್ದರಾಮಪ್ಪ ಮುದ್ಗಲ್ ಸಾಹುಕಾರ ಹೇಳಿದರು.ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಸಸಿಗೆ ನೀರು ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು. ಯೋಗಾಭ್ಯಾಸದಿಂದ ಮನಸ್ಸಿಗೆ ನೆಮ್ಮದಿ ದೊರೆಯುವುದರ ಜೊತೆಗೆ ನೆನಪಿನ ಶಕ್ತಿಯೂ ಹೆಚ್ಚುತ್ತದೆ. ಇದರಿಂದ ವಿದ್ಯಾರ್ಥಿಗಳು ಓದಿದ ವಿಷಯಗಳನ್ನು ಸುಲಭವಾಗಿ ನೆನಪಿನಲ್ಲಿ ಇಟ್ಟುಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ನಾಗನಗೌಡ ಪಾಟೀಲ ಅವರು ವಿದ್ಯಾರ್ಥಿನಿಯರಿಗೆ ನಿಂತು, ಕುಳಿತು ಹಾಗೂ ಮಲಗಿ ಮಾಡುವ ವಿವಿಧ ಯೋಗಾಸನಗಳು, ಪ್ರಾಣಾಯಾಮ ಮತ್ತು ಧ್ಯಾನದ ವಿಧಾನಗಳನ್ನು ಪ್ರಾಯೋಗಿಕವಾಗಿ ಮಾಡಿಸಿದರು.ಪ್ರಾಸ್ತಾವಿಕವಾಗಿ ಮಾತನಾಡಿದ ಶಿಕ್ಷಕ ಬಸವರಾಜ ತೆಗ್ಗಳ್ಳಿ ಅವರು ಜ್ಞಾನಯೋಗ, ಭಕ್ತಿಯೋಗ, ರಾಜಯೋಗ ಹಾಗೂ ಕರ್ಮಯೋಗಗಳ ಮಹತ್ವವನ್ನು ವಿವರಿಸಿದರು.ಪ್ರಧಾನ ಗುರುಗಳಾದ ವಿಟ್ಠಲ್ ಬಿ. ಚೌಹಾನ್ ಅವರು ಮಾತನಾಡಿ, ಯೋಗದಿಂದ ರೋಗಮುಕ್ತಿ ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಪ್ರತಿದಿನ ಯೋಗಾಭ್ಯಾಸವನ್ನು ರೂಢಿಸಿಕೊಂಡು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.ನಂತರ ವಿದ್ಯಾರ್ಥಿನಿಯರಿಗೆ ಹಾಲು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಉಪಾಧ್ಯಕ್ಷ ರಮೇಶ್ ವಾಲಿ, ಗುಂಡು ಅಂಗಡಿ, ಸೋಮು ಹುಲ್ಕಲ್, ಶಿಕ್ಷಕರಾದ ವಿಜಯಲಕ್ಷ್ಮಿ ಕುಂಬಾರ್, ಗುರುರಾಜ ಜೋಶಿ, ನಿವೃತ್ತ ಶಿಕ್ಷಕ ಬಸವರಾಜ ಕೋಳಕೂರ, ಸೋಮನಗೌಡ ಬಳವಾಟ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ ಮಶಾಕ್ ಶಿಕ್ಷಕರು ವಂದಿಸಿದರು.

# ಜೂ 25ರ ಐತಿಹಾಸಿಕ ಸಮಾರಂಭ ಆಂಧ್ರ ಸಿಎಂ ನಾಯ್ಡು ಭಾಗಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜೂನ್ 25ರಂದು ತುಂಗಭದ್ರಾ ಜಲಾಶಯದಲ್ಲಿ ನೂತನವಾಗಿ ಅಳವಡಿಸಲಾದ ಕ್ರಸ್ಟ್ ಗೇಟ್‌ಗಳ ಉದ್ಘಾಟನಾ ಸಮಾರಂಭವು ಅದ್ಧೂರಿಯಾಗಿ ನಡೆಯಲಿದ್ದು, ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಆಗಮಿಸುವಂತೆ ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಕರ್ನಾಟಕದ ನಿಯೋಗ ಆಹ್ವಾನಿಸಿದೆ.

ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದ ಮೇರೆಗೆ, ಶಾಸಕರಾದ ಎನ್.ಎಸ್. ಬೋಸುರಾಜ್, ಬಸವರಾಜ ರಾಯರೆಡ್ಡಿ ಮತ್ತು ಬಸನಗೌಡ ಬಾದರ್ಲಿ ಅವರು ಆಂಧ್ರಪ್ರದೇಶಕ್ಕೆ ತೆರಳಿ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಭೇಟಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಶಾಸಕರು ಕಾರ್ಯಕ್ರಮಕ್ಕೆ ಬರುವಂತೆ ಕೋರಿದ ಆಹ್ವಾನವನ್ನು ಸ್ವೀಕರಿಸಿದ ಚಂದ್ರಬಾಬು ನಾಯ್ಡು ಅವರು, ಕಾರ್ಯಕ್ರಮದಲ್ಲಿ ಭಾಗವಹಿಸುವುದಾಗಿ ಖಚಿತಪಡಿಸಿದ್ದಾರೆ.

ಈ ಭೇಟಿಯ ಸಂದರ್ಭದಲ್ಲಿ ಆಂಧ್ರಪ್ರದೇಶದ ನೀರಾವರಿ ಸಚಿವರಾದ ರಾಮ್ ಮೋಹನ್ ನಾಯ್ಡು ಮತ್ತು ಹಣಕಾಸು ಸಚಿವರಾದ ಪಿ. ಕೇಶವ ಉಪಸ್ಥಿತರಿದ್ದರು.

ಈ ಬಾರಿಯ ಉದ್ಘಾಟನಾ ಸಮಾರಂಭವು ವಿಶೇಷ ಮಹತ್ವ ಪಡೆದುಕೊಂಡಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ತುಂಗಭದ್ರಾ ಜಲಾಶಯದ ಕಾರ್ಯಕ್ರಮವೊಂದರಲ್ಲಿ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಒಟ್ಟಾಗಿ ಭಾಗವಹಿಸುತ್ತಿರುವುದು ವಿಶೇಷವಾಗಿದೆ. ಮುಖ್ಯಮಂತ್ರಿಗಳೊಂದಿಗೆ ಆಂಧ್ರಪ್ರದೇಶದ ಸಚಿವರಾದ ರಾಮ್ ಮೋಹನ್ ನಾಯ್ಡು ಮತ್ತು ಪಿ. ಕೇಶವ ಅವರು ಕೂಡ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಶಾಸಕ ಬಸವನಗೌಡ ಬಾದರ್ಲಿರವರು ತಿಳಿಸಿದ್ದಾರೆ.

# ಕಲೆ ಸಂಸ್ಕೃತಿ ಬೆಳೆಸೋಣ: ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ್

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕಲೆ ಸಾಹಿತ್ಯ ಸಂಸ್ಕೃತಿ ನಮ್ಮ ಭಾಗದ ಜೀವಂತ ಕಲೆಯಾಗಿದೆ, ಹಲವು ರೀತಿಯಲ್ಲಿ ವಿವಿಧ ಭಾಷೆಗಳಲ್ಲಿ ಕಲೆಯನ್ನು ಕಾಣುತ್ತೇವೆ, ತಲೆ ಸಾಹಿತ್ಯ ಸಂಸ್ಕೃತಿಯನ್ನು ನಾವೆಲ್ಲರೂ ಪ್ರೋತ್ಸಾಹಿಸಿ ಬೆಂಬಲಿಸೋಣ ಎಂದು ಶಾಸಕ ಚೆನ್ನಾಗಿರೆಡ್ಡಿ ಪಾಟೀಲ್ ತುನ್ನೂರ್ ಹೇಳಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಲ್ಲಿ ನಡೆದ ಶ್ರೀ ರೇಣುಕಾದೇವಿ ಸಾಂಸ್ಕೃತಿಕ ಸಾಮಾಜಿಕ ಕಲಾ ಸಂಘ (ರಿ) ಹಲ್ ಕಾಲ್ (ಜೆ) ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು (ಯಾದಗಿರಿ) ಇವರ ಸಂಯೋಗದಲ್ಲಿ ನಡೆದ ಜಾನಪದ ಸಂಭ್ರಮ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು.

ನಮ್ಮ ಭಾಗದ ಸಂಸ್ಕೃತಿಯನ್ನು ಇತ್ತೀಚಿನ ದಿನಮಾನಗಳಲ್ಲಿ ನೋಡುವ ಸ್ಥಿತಿಯ ಆಗಿಲ್ಲ ಯಾಕೆಂದರೆ ನಮ್ಮ ಕಲೆ ಸಾಹಿತ್ಯ ಸಂಸ್ಕೃತಿ ಅನ್ನೋದು ಮರೆಮಾಚಿ ಹೋಗಿದೆ ಆದ್ದರಿಂದ ಇಂಥ ಸಂಘ ಸಂಸ್ಥೆಗಳ ಕಾರ್ಯಕ್ರಮಗಳಿಂದ ಮತ್ತೆ ಪುನರ್ಜನ್ಮ ಪಡೆಯುತ್ತಿವೆ, ನೈಜ ಕಲಾವಿದರಿಗೆ ಸರ್ಕಾರದಿಂದ ಬರುವ ಸೌಲಭ್ಯಗಳನ್ನು ಪ್ರತಿಯೊಬ್ಬರು ಪಡೆದುಕೊಳ್ಳಿ ಎಂದು ಹೇಳಿದರು.

ಶ್ರೀ ರೇಣುಕಾದೇವಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದ ಬಿಜೆಪಿ ರಾಜ್ಯ ಕಾರ್ಯಕಾರಣಿ ಸದಸ್ಯ ಮಹೇಶ್ ಗೌಡ ಮುದ್ನಾಳ್ ರವರು ಮಾತನಾಡಿ ನಮ್ಮ ಭಾಗದ ಕಲಾವಿದರು ಅತಿ ಹೆಚ್ಚಾಗಿದ್ದು ಅವರು ಶ್ರೀಮಂತ ಕುಟುಂಬದಲ್ಲಿ ಜನಿಸದೆ ಕಡುಬಡತನದಲ್ಲಿ ಹುಟ್ಟಿ ತಮ್ಮ ಕಲೆಯನ್ನು ಪ್ರದರ್ಶಿಸಿ ಜೀವನ ನಡೆಸುತ್ತಿದ್ದಾರೆ, ಅಂತವರಿಗೆ ಸರ್ಕಾರ ಮೊದಲ ಆದ್ಯತೆ ನೀಡಿ ಸರ್ಕಾರದಿಂದ ಬರುವ ಸೌಲಭ್ಯಗಳನ್ನು ನೇರವಾಗಿ ಹಾಗೂ ಕಲಾವಿದರಿಗೆ ದೊರೆಯುವಂತೆ



ಮಾಡಬೇಕು ಎಂದು ಹೇಳಿದರು.

ವಾಸ್ತವಿಕ ನುಡಿದ ಸಮನ್ವಯ ಸೇವಾ ಸಂಸ್ಥೆಯ ಅಧ್ಯಕ್ಷ ಡಿ.ಕೆ. ದೇವಿಂದ್ರ ರವರು ಕಲೆ ಸಾಹಿತ್ಯ ಸಂಸ್ಕೃತಿ ಈ ಭಾಗದ ವೈಶಿಷ್ಟತೆ ಹೊಂದಿದೆ, ನೈಜ ಕಲಾವಿದರು ಈ ಭಾಗದಲ್ಲಿ ಅತೀ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದಾರೆ ಆದ್ದರಿಂದ ಕಲಾವಿದರಿಗೆ ಸರ್ಕಾರದಿಂದ ಸಂಘ ಸಂಸ್ಥೆಗಳಿಗೆ ಹೆಚ್ಚಿನ ಅನುದಾನ ನೀಡಿ ಈ ಭಾಗದ ಕಲಾವಿದರಿಗೆ ಜೀವ ತುಂಬುವ ಕಾರ್ಯ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ದೇವತ್ಕಲ್ಲಿನ ಸಾಬಣ್ಣ ಪೂಜಾರಿ, ಬಸವರಾಜ್ ತಾತ ಕೊಂಕಲ್, ಕಾರ್ಯನಿರತ ಪತ್ರಕರ್ತರ ಸಂಪಾದಕ ಹಾಗೂ ವರದಿಗಾರ ಸಂಘದ ಜಿಲ್ಲಾ ಅಧ್ಯಕ್ಷ ರಫೀಕ್ ಪಾಟೇಲ್, ಕಾರ್ಯದರ್ಶಿ ನಿಜಾಮುದ್ದೀನ್, ಶಂಕರ್ ಸೋನಾರೆ, ಹೇಮರೆಡ್ಡಿ ಮುಂಡಾಸ್, ಮಾದಿಗ ದಂಡೋರ ಜಿಲ್ಲಾಧ್ಯಕ್ಷ ಜಗದೇಶ ದಾಸನಕೆರಿ, ಬಸ್ಸಮ್ಮ ಪೂಜಾರಿ, ತಾರಾದೇವಿ, ಕಾರ್ಯಕ್ರಮದ ಅಧ್ಯಕ್ಷತೆ ಹಣಮಂತ ಬಂಡಾರಿ, ಭೀಮಪ್ಪ ಭಂಡಾರಿ ಇದ್ದರು. ಈ ಕಾರ್ಯಕ್ರಮದಲ್ಲಿ ಸುಗಮ ಸಂಗೀತ ತಂಡ, ಜಾನಪದ ತಂಡ , ತತ್ವಪದ, ಶೋಬಾನ ಪದ ತಂಡ, ಹಲಗಿ ತಂಡದರು ಒಂದೇ ಉಡುಪುಗಳು ಹಾಕಿ ನೋಡುಗರ ಗಮನ ಸೆಳೆದವು. ಸಂಗೀತ ಕಾರ್ಯಕ್ರಮವನ್ನು ಶರಣು ಕುಲಕುಂದ ನಡೆಸಿಕೊಟ್ಟರು.

# ಗಾಜರ್‌ಕೋಟ್‌ನಲ್ಲಿ ಎಸ್‌ಸಿ/ಎಸ್‌ಟಿ ಕುಂದುಕೊರತೆ ಸಭೆ: ಸಮಸ್ಯೆಗಳ ಪರಿಹಾರ ಭರವಸೆ




• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪರಿಶಿಷ್ಟಜಾತಿ ಹಾಗೂ ಪರಿಶಿಷ್ಟಪಂಗಡದವರ ಕುಂದುಕೊರತೆಗಳ ಸಭೆಯನ್ನು ತಾಲೂಕಿನ ಗಾಜರ್‌ಕೋಟ್ ಗ್ರಾಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಅವರ ನೇತೃತ್ವದಲ್ಲಿ ಸೋಮವಾರ ಆಯೋಜಿಸಲಾಯಿತು.

ಸಭೆಯಲ್ಲಿ ಗ್ರಾಮಸ್ಥರು ಭಾಗವಹಿಸಿ ತಮ್ಮ ವಿವಿಧ ಸಮಸ್ಯೆಗಳು ಹಾಗೂ ಸಾರ್ವಜನಿಕ ಹಿತಾಸಕ್ತಿಯ ವಿಷಯಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಗಮನಕ್ಕೆ ತಂದರು.

ಕಾರ್ಯಕ್ರಮದಲ್ಲಿ ಗುರುಮಠಕಲ್ ತಹಶೀಲ್ದಾರ್ ಚನ್ನಮಲ್ಲಪ್ಪ ಗಂಟಿ, ಡಿವೈಎಸ್ಪಿ ಸುರೇಶ್, ಪಿಐ ದೌಲತ್ ಎನ್ ಕುರಿ, ಡಿಎಸ್ ಜಿಲ್ಲಾ ಸಂಚಾಲಕ ಮರೆಪ್ಪ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಹಾಗೂ ಗಾಜರ್‌ಕೋಟ್ ಪಿಡಿಓ ವೇದಿಕೆ ಹಂಚಿಕೊಂಡಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಸಾರ್ವಜನಿಕರು ಸಲ್ಲಿಸಿರುವ ಸಮಸ್ಯೆಗಳಾದ ಶೌಚಾಲಯ, ಗ್ರಂಥಾಲಯ, ನೀರಿನ ಸಮಸ್ಯೆ ಪರಿಹಾರಕ್ಕೆ ಕೇವಲ ಪೊಲೀಸ್ ಇಲಾಖೆ ಮಾತ್ರವಲ್ಲದೆ ಸಂಬಂಧಿಸಿದ ಇತರೆ ಇಲಾಖೆಗಳ ಸಹಯೋಗದೊಂದಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಸಭೆಯಲ್ಲಿ ಮಾತನಾಡಿದ ಮರೆಪ್ಪ ಅವರು, ಕೆಲವು ದಿನಗಳ ಹಿಂದೆ ಗಾಜರ್‌ಕೋಟ್

ಗ್ರಾಮದ ವ್ಯಕ್ತಿಯೊಬ್ಬರಿಗೆ ಎಂಪಾಡ ಗ್ರಾಮದಲ್ಲಿ ಅಸ್ಪೃಶ್ಯತೆ ಹಿನ್ನೆಲೆಯಲ್ಲಿ ದೇವಸ್ಥಾನದ ಒಳಗೆ ವಿಶ್ರಾಂತಿ ಪಡೆಯಲು ಅವಕಾಶ ನೀಡದ ಘಟನೆ ನಡೆದಿರುವುದನ್ನು ಪ್ರಸ್ತಾಪಿಸಿ ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ತಕ್ಷಣ ಆರೋಪಿಗಳನ್ನು ಬಂಧಿಸಿದ್ದಾರೆ, ಇನ್ನೂ ಮುಂದೆಯೂ ಸಹ ಅಸ್ಪೃಶ್ಯತೆ ಪ್ರಕರಣಗಳು ಕಂಡುಬಂದಲ್ಲಿ ಖಂಡಿತ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂಭ ಭರವಸೆ ಇದೇ ಯಾವುದೇ ರೀತಿಯ ಭಯ ಅಥವಾ ಆತಂಕಕ್ಕೆ ಒಳಗಾಗದೆ ಸಾರ್ವಜನಿಕರು ದೂರು ನೀಡಬೇಕು ಎಂದು ತಿಳಿಸಿದರು.

ಸಭೆಯ ಅಂತ್ಯದಲ್ಲಿ ಸಾರ್ವಜನಿಕರಿಂದ ಬಂದ ವಿವಿಧ ಮನವಿಗಳು ಮತ್ತು ಸಮಸ್ಯೆಗಳ ಕುರಿತು ಅಧಿಕಾರಿಗಳು ಮಾಹಿತಿ ಪಡೆದು, ಪರಿಹಾರಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

# ಗುಣಮಟ್ಟದ ಕಾಮಗಾರಿ ಪೂರ್ಣಗೊಳಿಸಲು ಶಾಸಕ ಕಂದಕೂರ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

:ಜೂ.22: ಕೆ.ಕೆ.ಆರ್.ಡಿ.ಬಿ. ಮ್ಯಾಕ್ರೋ ಸಾಮಾನ್ಯ ಯೋಜನೆಯಡಿ ಸುಮಾರು 700 ಲಕ್ಷ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿರುವ ಗುರುಮಠಕಲ್ ಪಟ್ಟಣದ ಶ್ರೀ ಖಾಸಾಮಠ ಕ್ರಾಸ್‌ನಿಂದ ಪುಟಪಾಕ್ ಮುಖ್ಯ ರಸ್ತೆವರೆಗೆ ವಾಯಾ ಚಂಡರಕಿ ಗ್ರಾಮ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸೋಮವಾರ ಚಂಡರಕಿ ಗ್ರಾಮದಲ್ಲಿ ಶಾಸಕ ಶರಣಗೌಡ ಕಂದಕೂರ ಶಿಲಾನ್ಯಾಸ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಕಾಮಗಾರಿಯನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ರಸ್ತೆ ಅಭಿವೃದ್ಧಿ ಕಾರ್ಯದಲ್ಲಿ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಎಚ್ಚರಿಸಿದರು.

ಗ್ರಾಮ ಪಂಚಾಯಿತಿ ಪಿಡಿಓ ಹಾಗೂ ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರಿಂದ ಬಂದಿರುವ ವಿವಿಧ ಸಮಸ್ಯೆಗಳು ಮತ್ತು ದೂರುಗಳನ್ನು ತ್ವರಿತವಾಗಿ ಬಗೆಹರಿಸಬೇಕು ಎಂದು ತಿಳಿಸಿದರು.

ಚಂಡರಕಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರು ಹಲವು ವರ್ಷಗಳಿಂದ ರಸ್ತೆ ಅಭಿವೃದ್ಧಿಗೆ



ನಿರೀಕ್ಷೆಯಲ್ಲಿದ್ದರು. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಗ್ರಾಮ ವಾಸ್ತವ್ಯದ ಅವಧಿಯಲ್ಲಿಯೇ ಈ ಕಾಮಗಾರಿ ಆರಂಭವಾಗಬೇಕಾಗಿತ್ತು. ತಡವಾದರೂ ಇದೀಗ ಕಾಮಗಾರಿ ಆರಂಭಗೊಂಡಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರ ಪ್ರಯತ್ನದಿಂದ ಕೆ.ಕೆ. ಆರ್.ಡಿ.ಬಿ. ಯೋಜನೆಯಡಿ 700 ಲಕ್ಷ ಅನುದಾನ ಬಿಡುಗಡೆಯಾಗಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಈ ಭಾಗದ ಸಂಚಾರ ವ್ಯವಸ್ಥೆಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ಗುರುಮಠಕಲ್ ಕ್ಷೇತ್ರವನ್ನು ಹಲವು ದಶಕಗಳ ಕಾಲ ಪ್ರತಿನಿಧಿಸಿದವರು ಗ್ರಾಮಗಳ ಅಭಿವೃದ್ಧಿಗೆ ನಿರೀಕ್ಷಿತ ಮಟ್ಟದಲ್ಲಿ ಸ್ಪಂದಿಸಲಿಲ್ಲ. ಆದರೆ ಎಚ್.ಡಿ. ಕುಮಾರಸ್ವಾಮಿ ಅವರ ಗ್ರಾಮ ವಾಸ್ತವ್ಯ ಕಾರ್ಯಕ್ರಮ ಗ್ರಾಮೀಣ ಅಭಿವೃದ್ಧಿಗೆ ಹೊಸ ದಿಕ್ಕು ನೀಡಿದೆ ಎಂದು ಹೇಳಿದರು.

ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಕಳೆದ ಮೂರು ವರ್ಷಗಳಿಂದ ಉತ್ತಮ ಸೇವೆ ಸಲ್ಲಿಸಿದ್ದು, ಉಳಿದ ಎರಡು ವರ್ಷಗಳ ಅವಧಿಯಲ್ಲೂ ಸಚಿವರಾಗಿ ಮುಂದುವರಿದು ಜಿಲ್ಲೆಗೆ ಇನ್ನಷ್ಟು ಸೇವೆ ಸಲ್ಲಿಸಲಿ ಎಂಬುದು ತಮ್ಮ ವೈಯಕ್ತಿಕ ಅಭಿಪ್ರಾಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಲೋಕೋಪಯೋಗಿ ಇಲಾಖೆ ಅಧಿಕಾರಿ ಪರಶುರಾಮ, ತಾಲೂಕ ದಂಡಾಧಿಕಾರಿ ಚನ್ನಮಲ್ಲಪ್ಪ ಘಂಟಿ, ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಅಂಬರೀಶ್ ಪಾಟೀಲ್, ಚಂಡರಿಕಿ ಪಿಡಿಓ ಗೀತಾ, ಜೆಡಿಎಸ್ ಮುಖಂಡರಾದ ಶರಣು ಆವಂಟಿ, ಪ್ರಕಾಶ್ ನೀರೆಟಿ ಸೇರಿದಂತೆ ಜನಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ವಿದ್ಯುತ್ ವಿತರಣೆ ಕೇಂದ್ರ ಖಾಸಗಿ ಕಂಪನಿಗೆ ಹಸ್ತಾಂತರ, ಮಾರಾಟ ಬೇಡ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ.22: ಸರ್ಕಾರದ ಆಧೀನದಲ್ಲಿರುವ ವಿದ್ಯುತ್ ವಿತರಣಾ ಕೇಂದ್ರಗಳನ್ನು ಯಾವುದೇ ಕಾರಣಕ್ಕೂ ಟಾಟಾ ಪವರ್ ಖಾಸಗಿಕಂಪನಿಗೆ ಹಸ್ತಾಂತರ ಅಥವಾ ಮಾರಾಟ ಮಾಡಬಾರದು. ಸಾರ್ವಜನಿಕರ ಹಿತಾಸಕ್ತಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಹಿತದೃಷ್ಟಿಯಿಂದ ಕಂಪನಿ ಸಲ್ಲಿಸಿರುವ ಅರ್ಜಿಯನ್ನು ಸರ್ಕಾರ ಕೂಡಲೇ ತಿರಸ್ಕರಿಸಬೇಕು ಎಂದು ಒತ್ತಾಯಿಸಿ ಸೋಮವಾರ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನೌಕರ ಸಂಘ ಮತ್ತು ಒಕ್ಕೂಟದ ಪದಾಧಿಕಾರಿಗಳು ಮತ್ತು ಸಿಬ್ಬಂದಿ ಶಾಸಕ ಶರಣಗೌಡ ಕಂದಕೂರ ಅವರಿಗೆ ಮನವಿ ಸಲ್ಲಿಸಿದರು.ಈ ವೇಳೆ ಮಾತನಾಡಿದ ಕಾರ್ಯ ನಿರ್ವಾಹಕ ಅಭಿಯ ಎಂತರ ಅಭಿಯಂತರ ರಾಘವೇಂದ್ರ ಡಿ.ಅವರು, ಜನಸಾಮಾನ್ಯರ ಹಿತವನ್ನು ಕಡೆಗಣಿಸಿ ಸರ್ಕಾರದ ಅಧೀನದಲ್ಲಿರುವ ವಿದ್ಯುತ್ ವಿತರಣಾ ಕೇಂದ್ರಗಳನ್ನು ಟಾಟಾ ಪವರ್ ಕಂಪನಿಗೆ ಹಸ್ತಾಂತರ ಇಲ್ಲವೇ ಮಾರಾಟ ಮಾಡುವ ನಿಯಮ ಸರಿಯಾಗಿಲ್ಲ. ಇದರಿಂದಾಗಿ ಕೆರೆ ಭಾಗದ ಜನರಿಗೆ ತುಂಬಾ ನಷ್ಟವಾಗುತ್ತದೆ ಎಂದರು. ವಿದ್ಯುತ್ ಪೂರೈಕೆಯು ಸರ್ಕಾರದ ಮೂಲ ಜವಾಬ್ದಾರಿಯಾಗಿದ್ದು, ಇದನ್ನು ಖಾಸಗಿ ಕಂಪನಿಗಳಿಗೆ ವಹಿಸಿದರೆ ರಾಜ್ಯದ ವಿದ್ಯುತ್ ವಿತರಣಾ ವ್ಯವಸ್ಥೆಯ ಮೂಲಭೂತ ರಚನೆಯಲ್ಲಿಯೇ ಮಹತ್ತರ ಬದಲಾವಣೆ ಉಂಟಾಗುವ ಸಾಧ್ಯತೆ ಹೆಚ್ಚಾಗಲಿದೆ. ಇದರ ಪರಿಣಾಮ ರಾಜ್ಯದ ಎಲ್ಲಾ ವರ್ಗದ ವಿದ್ಯುತ್ ಗ್ರಾಹಕರ ಮೇಲೆ, ವಿಶೇಷವಾಗಿ ರೈತರು,



ಗ್ರಾಮೀಣ ಕುಟುಂಬಗಳು, ಸಾರ್ವಜನಿಕ ಕುಡಿಯುವ ನೀರು ಸರಬರಾಜು ಸಂಸ್ಥೆಗಳು, ಆಸ್ಪತ್ರೆಗಳು, ಸ್ಥಳೀಯ ಸಂಸ್ಥೆಗಳು ಹಾಗೂ ರಾಜ್ಯ ಸರಕಾರದ ಅನುದಾನ ಮತ್ತು ಸಹಾಯಧನಗಳ ಮೇಲೆ ಅವಲಂಬಿತವಾಗಿರುವ ಕಲ್ಯಾಣ ಯೋಜನೆಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ರಾಘವೇಂದ್ರ ಅವರು ವಿವರಿಸಿದರು. ಮನವಿ ಸ್ವೀಕರಿಸಿದ ಶಾಸಕ ಕಂದಕೂರ,ಜೇಸ್ಕಾಂ ಮನವಿಯನ್ನು ಕೂಡಲೇ ಸರ್ಕಾರದ ಗಮನಕ್ಕೆ ತರಲಾಗುವುದೆಂದು ಸಕರಾತ್ಮಕವಾಗಿ ಹೇಳಿದರು.ಈ ವೇಳೆಯಲ್ಲಿ ಕಾರ್ಯ ನಿರ್ವಾಹಕ ಅಭಿಯಂತರ ಶಂಕರ್ ಗುತ್ತಿ, ಸಹಾಯಕ ಕಾರ್ಯ ನಿರ್ವಹಕರುಗಳಾದ ಸುರೇಖಾ ಕಟ್ಟಿಮನಿ, ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ ಮಾರ್ಕಡೇಶ್ವರ,

ಸಂಜೀವಕುಮಾರ,ಎ.ಟಿ. ರಾಥೋಡ್, ಅಂಬರೀಷ್, ಜರೀನಾಬೇಗಂ, ಲೆಕ್ಕಾಧಿಕಾರಿ ಬಸವರಾಜ,ಅಶೋಕ,ಪದಾಧಿಕಾರಿಗಳಾದ ಚಂದಪ್ಪ, ದೇವೀಂದ್ರಪ್ಪ, ಮೋಹನ ರಾಥೋಡ್, ಯಮುನಪ್ಪ ಠಣಕೆದಾರ, ಅಶೋಕ ಚವ್ಹಾಣ, ದೇವಪ್ಪ, ಮೆಹಬೂಬ್, ಥಾಮಸ್, ಮೋಸಿನ, ಯಲ್ಲಪ್ಪ, ಆನಂದಕುಮಾರ್, ದೇವಪ್ಪ ಬಸವರಾಜ, ಶ್ವೇತಾ ದಾಸನ್, ಲಲಿತಾ ಸೇರಿದಂತೆಯೇ ಇತರರಿದ್ದರು. ಜೆಸ್ಕಾಂ ಕಚೇರಿಯಿಂದ ಇಲ್ಲಿನ ಶಾಸಕರ ಜನ ಸಂಪರ್ಕ ಕಚೇರಿಯವರೆಗೂ ಕಾಲ್ನಡಿಗೆ ಮುಖಾಂತರ ತೆರಳಿ ಮನವಿ ಸಲ್ಲಿಸಿದರು.

## ನಿರಂತರ ಕರೆಂಟ್ ಕೊಡುವ ಭರವಸೆ ನೀಡಿ

ಜಿಲ್ಲೆಯ ರೈತರಿಗೆ ಅಗತ್ಯವಿದ್ದಾಗ ನಿರಂತರ ಏಳು ತಾಸು ಕರೆಂಟ್ ಕೊಡಲಾಗುವುದು ಮತ್ತು ಸಾರ್ವಜನಿಕರಿಗೂ ತೆ–ಊಂದರೆಯಾಗದಂತೆಯೇ ಸಮರ್ಪಕ ವಿದ್ಯುತ್ ಪೂರೈಕೆ ಮಾಡಲಾಗುವುದೆಂಬ ಭರವಸೆ ತಾವುಗಳು ನೀಡಿದರೇ ನಾನು ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಸಚಿವ ಮತ್ತು ಸಂಬಂಧಪಟ್ಟ ಸಂಸದರೊಂದಿಗೆ ಈ ಬಗ್ಗೆ ಸುಧೀರ್ಘ ಚರ್ಚೆ ಮಾಡಿ ಬೇಡಿಕೆ ಈಡೆಸುವ ನಿಟ್ಟಿನಲ್ಲಿ ಪ್ರಯತ್ನ ಮಾಡುವೆ.

**ಶರಣಗೌಡ ಕಂದಕೂರ ಶಾಸಕರು, ಗುರುಮಠಕಲ್**

# ಜು 11 ರಂದು ರಾಷ್ಟ್ರೀಯ ಲೋಕ ಅದಾಲತ್: ವ್ಯಾಜ್ಯಗಳ ಇತ್ಯರ್ಥಕ್ಕೆ ಸುವರ್ಣಾವಕಾಶ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.22: ರಾಷ್ಟ್ರೀಯ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದಂತೆ, ಕಲಬುರಗಿ ಜಿಲ್ಲೆ ಹಾಗೂ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ತಿಳಿಸಿದ್ದಾರೆ.ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಕಕ್ಷಿದಾರರಿಗೆ ಇದು ಉತ್ತಮ ಅವಕಾಶವಾಗಿದೆ. ಅದಾಲತ್‌ನಲ್ಲಿ ಸಿವಿಲ್ ವ್ಯಾಜ್ಯಗಳು, ರಾಜಿ ಮಾಡಿಕೊಳ್ಳಬಹುದಾದ ಕ್ರಿಮಿನಲ್ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ, ಮೋಟಾರು ವಾಹನ ಅಪಘಾತ ಪರಿಹಾರ, ಕಾರ್ಮಿಕ ಹಾಗೂ ಕೌಟುಂಬಿಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಜೊತೆಗೆ, ಚೆಕ್ ಬೌನ್ಸ್ ಪ್ರಕರಣಗಳಿಗಾಗಿಯೇ ಜುಲೈ 18 ರಂದು ವಿಶೇಷ ಲೋಕ ಅದಾಲತ್ ಆಯೋಜಿಸಲಾಗಿದೆ.ಲೋಕ ಅದಾಲತ್‌ನಲ್ಲಿ ಪ್ರಕರಣ ಇತ್ಯರ್ಥಗೊಂಡರೆ ನ್ಯಾಯಾಲಯಕ್ಕೆ ಪಾವತಿಸಿದ ಶುಲ್ಕವನ್ನು ಪೂರ್ಣವಾಗಿ ಹಿಂದಿರುಗಿಸಲಾಗುವುದು.

# ಯೋಗ ಮಾಡಿ ನಿರೋಗಿಯಾಗಿರಿ



• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಪಟ್ಟಣದ ಗದಗಿ ಮಠದಲ್ಲಿ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಪರಿಸರ ಚಿಂತಕರು, ಜಾನಪದ ಹಿರಿಯ ಕಲಾವಿದೆಯಾದ ಮಾತೋಶ್ರೀ ಸರಸ್ವತಿ ಗದಗಯ್ಯ ಕಾವಾಡಿ (96ನೇ ವಯಸ್ಸು) ಮಠವರು ಯೋಗ ಮಾಡುವ ಮೂಲಕ ಯೋಗದಿನಕ್ಕೆ ಚಾಲನೆ ನೀಡಿದರು. ಪ್ರತಿ ದಿನದಂತೆ ಈ ದಿನ ಕೂಡ ಯೋಗ ಮಾಡಿ ತಮ್ಮ ದಿನಚರಿ ಆರಂಭಿಸಿದರು. ಯೋಗ ದಿನಾಚರಣೆ ಅಂಗವಾಗಿ ಅತಿ ಉತ್ಸಾಹದಿಂದ ಯೋಗ ಪ್ರದರ್ಶಿಸಿದರು. ಪ್ರತಿಯೊಬ್ಬರೂ ದಿನಾಲು ಕಡ್ಡಾಯವಾಗಿ ಯೋಗ ಮಾಡಿದರೆ ರೋಗಗಳೆ ಬರುವುದಿಲ್ಲ ಎಂದು ನುಡಿದರು. ಯೋಗ ಮಾಡುವುದರಿಂದ ಹಲವಾರು ನನ್ನ ರೋಗಗಳು ಮಾಯ ಆಗಿವೆ ಎಂದು ತಮ್ಮ ಅನುಭವವನ್ನು ಮಕ್ಕಳಿಗೆ ವಿವರಿಸಿದ್ದರು. ಭಾರತದ ಪುರಾತನ ಯೋಗ ಕಲೆಯನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಮುಟ್ಟಿಸಿರುವ ಭಾರತದ ಜನಪ್ರಿಯ ಪ್ರಧಾನಮಂತ್ರಿ ನರೇಂದ್ರ ಮೋದಿಜಿಯವರಿಗೆ ತುಂಬು ಹೃದಯದ ಧನ್ಯವಾದ ಸಲ್ಲಿಸಿದರು.

ಶಶಾಂಕ ಕವಡಿ, ಶೈಲಜಾ ಕವಡಿ ಉಪಸ್ಥಿತರಿದ್ದರು.

# ಯೋಗದಿಂದ ಆರೋಗ್ಯ ಸದೃಢ : ಆನಂದ ಕೊಳ್ಳಿ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಯೋಗ ಮಾಡುವದರಿಂದ ಆರೋಗ್ಯ ಸದೃಢ ವಾಗುವುದು ಎಂದು ಶ್ರೀ ವಿಜಯ ಮಹಾಂತೇಶ ಅನುದಾನಿತ ಹಿರಿಯ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯ ಆನಂದ ಕೊಳ್ಳಿ ರವಿವಾರ ಹೇಳಿದರು.

ಶಾಲೆಯಲ್ಲಿ ಹಮ್ಮಿಕೊಂಡಿದ್ದ ಅಂತರ್ರಾಷ್ಟ್ರೀಯ ವಿಶ್ವ ಯೋಗ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತಾಡಿ ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನವೆಂದು ಭಾರತೀಯ ಮೂಲದ ಆರು ಸಾವಿರ ವರ್ಷಗಳ ಇತಿಹಾಸವಿದೆ. ಹಿಂದೆ ಋಷಿಮುನಿಗಳು ಯೋಗಾಭ್ಯಾಸದಿಂದ ಸದೃಡರಾಗಿರುತ್ತಿದ್ದರು. ಪ್ರಧಾನಮಂತ್ರಿ ನರೇಂದ್ರ ಮೋದಿಜೀಯವರು ಯೋಗದ ಮಹತ್ವವನ್ನು ಜಗತ್ತಿಗೆ ತಿಳಿಸಿಕೊಟ್ಟರು. ಪ್ರತಿಯೊಬ್ಬರಿಗೂ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಯೋಗದ ಅವಶ್ಯಕತೆಯಿದೆ. ಪಾಲಕರು ಮಕ್ಕಳಿಗೆ ಯೋಗಾಭ್ಯಾಸ ಮಾಡಿಸಬೇಕು. ಯೋಗದಿಂದ ಮನುಷ್ಯ ಶಾರೀರಿಕ ಹಾಗೂ ಮಾನಸಿಕವಾಗಿ ದೇಹವನ್ನು ಸದೃಡವಾಗಿ ಮಾಡಿಕೊಳ್ಳಬಹುದು, ಮಾನಸಿಕ ನೆಮ್ಮದಿ ಹಾಗೂ ಆಧ್ಯಾತ್ಮಿಕವಾಗಿ ದೇವರನ್ನು ಕಾಣುವ ಶಕ್ತಿಯಾಗಿದೆ, ಪ್ರತಿನಿತ್ಯ ಯೋಗಾಭ್ಯಾಸದಲ್ಲಿ ತೊಡಗಿದರೆ ನಮ್ಮ ದೇಹಕ್ಕೆ ಸಿಗುವ ಲಾಭವಾಗುತ್ತದೆ ಎಂದು ಮಾತಾಡಿದರು. ದೈಹಿಕ ಶಿಕ್ಷಕ ಅಮರೇಶ ಸಿಂಗಾಡಿಯವರು ಸರ್ವರಿಗೂ ಯೋಗ ಮಾಡಿಸಿದರು.

ಇದೇ ವೇಳೆ ಸಿಆರ್ಪಿ ರಾಮಚಂದ್ರ ಡವಳೆ, ಶಿಕ್ಷಕರಾದ ಮಹಾಂತೇಶ ಬನ್ನಿಗೋಳ, ಅಮರೇಶ ಪವಾರ, ಸಾವಿತ್ರಿ ಬೇಣಕಲ್, ಪದ್ಮಾವತಿ, ಶಾಂತ ಬಳಿಗೇರ ಹಾಗೂ ಶಾಲಾ ವಿದ್ಯಾರ್ಥಿಗಳು ಬೆಳೆಯುವ ಸಸಿಗಳಿಗೆ ನಿರುಣಿಸಿದರು.

# ಮಕ್ಕಳ ಶಿಕ್ಷಣದ ಬಗ್ಗೆ ಸರ್ವರೂ ಗಮನ ಹರಿಸಬೇಕು: ಮಾನಪ್ಪ




• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮಕ್ಕಳ ಶಿಕ್ಷಣದ ಬಗ್ಗೆ ಪಾಲಕರು ಸೇರಿದಂತೆ ಸರ್ವರೂ ಗಮನ ಹರಿಸಬೇಕೆಂದು ಲಿಂಗಸ್ಗೂರು ಕ್ಷೇತ್ರದ ಶಾಸಕ ಮಾನಪ್ಪ ಡಿ. ವಜ್ಜಲ್ ರವಿವಾರ ಸಂಜೆ ಹೇಳಿದರು.ಪಟ್ಟಣದ ಅಂಜುಮನ್ ಇಸ್ಲಾಂ ಸಂಸ್ಥೆಯಿಂದ ನೂತನ ಸಿದ್ರಾ ಕಿಡ್ಸ್ ಪ್ರಿ ಸ್ಕೂಲ್ ಉದ್ಘಾಟನೆ ಮಾಡಿದ ಬಳಿಕ ಮಾತನಾಡಿದ ಅವರು ಸಿದ್ರಾ ಕಿಡ್ಸ್ ಪ್ರಿ ಶಾಲೆಯು ಮಕ್ಕಳ ಭವಿಷ್ಯಕ್ಕಾಗಿ ತನ್ನದೇ ಆದ ಚಾಪು ಮೂಡಿಸಲು ಸಂಸ್ಥೆ ಪ್ರಾರಂಭವಾಗಿದೆ. ಶಿಕ್ಷಣದ ಬಗ್ಗೆ ಪಾಲಕರು ನಿಗಾವಹಿಸಬೇಕು. ರಾಜ್ಯದಲ್ಲಿ ಮತ್ತು ದೇಶದಲ್ಲಿ ಅನೇಕ ಸಂಸ್ಥೆಗಳು ಕಾಣ್ತಾ ಇದ್ದೇವೆ. ಅತ್ಯುತ್ತಮ ಶಿಕ್ಷಣ ಪಡೆದಂತ ಮಗು ಅನೇಕ ಕ್ಷೇತ್ರಗಳಲ್ಲಿ ಸಾಧನೆ ಮಾಡಿದರೆ ಅವರೊಬ್ಬ ಮುಖ್ಯ ಕಾರಣಿಭೂತ ವ್ಯಕ್ತಿಗಳಾಗುತ್ತಾರೆ. ವಿದ್ಯೆ ಎನ್ನುವುದು ಯಾರ ಸ್ವತ್ತು ಅಲ್ಲ, ಯಾರು ಕೂಡ ಕಸಿದುಕೊಳ್ಳುವಂತದ್ದಲ್ಲ, ವಿದ್ಯೆ ಶಾಶ್ವತವಾದದ್ದು, ಅದನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುತ್ತಿವೆ. ಬಡತನದ ಮಕ್ಕಳ ಭವಿಷ್ಯಕ್ಕಾಗಿ ಇಂಥ ಸಂಸ್ಥೆಗಳು ಹುಟ್ಟುತ್ತವೆ. ಶಿಕ್ಷಣದ ಸಾಧನೆಯಿಂದ ದೇಶದ ಸ್ವಾಭಿಮಾನ ಬೆಳೆಸಿಕೊಳ್ಳಲು ಮುಂದಾಗೋಣ. ಕಲಿಯುವ ಮಕ್ಕಳ ಭವಿಷ್ಯ ಉಜ್ವಲವಾಗಲಿ. ಸಂಸ್ಥೆ ಇನ್ನೆಷ್ಟು ಉತ್ತುಂಗಕ್ಕೆ ಬೆಳೆಯಲಿ ಎಂದು ಶುಭ ಹಾರೈಸಿದರು.ಕಾರ್ಯಕ್ರಮದಲ್ಲಿ ಅಬ್ದುಲ್ ಗುರಾಣಿ, ಮಾತನಾಡಿದರು.ಅಧ್ಯಕ್ಷ ಅಬ್ದುಲ್ ರೌಫ್, ರಜ್ಜಬಲಿ ಟಿಂಗ್ರಿ, ಸಣ್ಣ ಸಿದ್ದಯ್ಯ ಸ್ವಾಮಿ, ಕರಿಯಪ್ಪ ಯಾದವ್, ಮೊಹಮ್ಮದ್ ಸಾಧಿಕ್ ಅಲಿ, ಅಮೀರ್ಬೇಗ್ ಉಸ್ತಾದ್, ಗಯಾಸುದ್ದಿನ್, ಸೈಯದ್ ಯಾಸಿನ್ ಖಾದ್ರಿ, ರಫೀಕ್ ಬಾಗವಾನ್, ಶಾಲಂ ಸಿಂದನೂರ್, ರಹೀಂ ಷಾ ಮಕಂದಾರ್ ಸೇರಿದಂತೆ ಶಾಲಾ ಸಮಿತಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಖೇಡ ಸಂಗಮ ಗುರುಕುಲ ಶಾಲೆಯಲ್ಲಿ ಸಡಗರದ ವಿಶ್ವ ಯೋಗ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಖೇಡ ಸಂಗಮ ಗುರುಕುಲ ಶಾಲೆಯಲ್ಲಿ ಆವರಣದಲ್ಲಿ ವಿಶ್ವ ಯೋಗ ದಿನಾಚರಣೆಯನ್ನು ಯಶಸ್ವಿಯಾಗಿ ನಡೆಯಿತು. ಕಾರ್ಯಕ್ರಮದಲ್ಲಿ ಶಾಲೆಯ ನೂರಾರು ವಿದ್ಯಾರ್ಥಿಗಳು ಅತ್ಯಂತ ಉತ್ಸಾಹದಿಂದ ಭಾಗವಹಿಸಿ, ಯೋಗದ ವಿವಿಧ ಆಸನಗಳನ್ನು ಪ್ರದರ್ಶಿಸಿದರು.

ಬೆಳಗಿನ ಜಾವ ಶಾಲೆಯ ಮೈದಾನದಲ್ಲಿ ಜಮಾಯಿಸಿದ ವಿದ್ಯಾರ್ಥಿಗಳಿಗೆ ಜಗತ್ಪ್ರಸಿದ್ಧ ಯೋಗಾಸನಗಳ ವಿವಿಧ ಭಂಗಿಗಳನ್ನು ಪ್ರಾಯೋಗಿಕವಾಗಿ ತರಬೇತಿ ನೀಡಿ, ಅಭ್ಯಾಸ ಮಾಡಿಸಲಾಯಿತು. ಶಿಸ್ತುಬದ್ಧವಾಗಿ ಸಾಲಿನಲ್ಲಿ ನಿಂತು ಮಕ್ಕಳು ಮಾಡಿದ ಯೋಗಾಸನಗಳು



ನೆರೆದಿದ್ದವರ ಗಮನ ಸೆಳೆದವು.ಕಾರ್ಯಕ್ರಮದ ದಿವ್ಯ ಸನ್ನಿಧಾನವನ್ನು ವಹಿಸಿದ್ದ ಪೂಜ್ಯ ಡಾ. ಮಹಾದೇವಮ್ಮ ತಾಯಿ ಅವರು ದೀಪ ಬೆಳಗಿಸಿ ಚಾಲನೆ ನೀಡಿ ಮಾತನಾಡಿದರು, ಯೋಗದ ಮಹತ್ವವನ್ನು ಬಾಲ್ಯದಲ್ಲೇ ಅರಿತುಕೊಳ್ಳುವುದು ಮುಖ್ಯ. ಯೋಗದಿಂದ ಕೇವಲ ದೈಹಿಕ ಆರೋಗ್ಯ ಮಾತ್ರವಲ್ಲದೆ ಮಾನಸಿಕ ಏಕಾಗ್ರತೆ ಹೆಚ್ಚುತ್ತದೆ. ಇಂದಿನ ಆಧುನಿಕ ಯುಗದಲ್ಲಿ ಸಶಕ್ತ ಭಾರತವನ್ನು ಕಟ್ಟಲು ಮಕ್ಕಳಿಗೆ ಯೋಗ ಶಿಕ್ಷಣ ಅತ್ಯಗತ್ಯ ಎಂದು ಹೇಳಿದರು.

ಶಾಲೆಯ ಮುಖ್ಯಗುರುಗಳಾದ ಶ್ರೀ ಸಂಜಯಕುಮಾರ್ ಮೇಂಗಾ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.ಶಾಲೆ ಸಿಬ್ಬಂದಿಗಳು ಹಾಗೂ ಮಕ್ಕಳು ಇದ್ದರು.

# ಗಿಣಿಗೇರದ ಅಮೃತ ಸರೋವರ ದಡದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜೂನ್ 21ರಂದು ಅಂತರಾಷ್ಟ್ರೀಯ ಯೋಗ ದಿನ ಪ್ರಯುಕ್ತ ಗಿಣಿಗೇರಾ ಗ್ರಾಮ ಪಂಚಾಯತಿ ಹಾಗು ಕೆರೆ ಅಭಿವೃದ್ದಿ ಸಮಿತಿ ವತಿಯಿಂದ ಗಿಣಿಗೇರಾ ಗ್ರಾಮದ ಅಮೃತ ಸರೋವರ ದಡದಲ್ಲಿಯೋಗಭ್ಯಾಸ ಮತ್ತು ಪ್ರಾಣಾಯಮ ಅಭ್ಯಾಸಗಳನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಕುರಿತು ಗಿಣಿಗೇರಿ ಪಂಚಾಯತ ಅಭಿವೃದ್ದಿ ಅಧಿಕಾರಿ ಮಂಜುಳಾದೇವಿ ಹೂಗಾರ ಮಾತನಾಡಿ ಪ್ರಸ್ತುತ ದಿನದಲ್ಲಿ ಆಹಾರ ಪದ್ದತಿ ಬಹು ಮುಖ್ಯವಾದದು. ಆಹಾರ ಪದ್ದತಿಯನ್ನು ನಾವು ಬದಲಾವಣೆ ಮಾಡಿಕೊಳ್ಳುವದು ಸೂಕ್ತ. ಬದಲಾವಣೆ ಮಾಡಿಕೊಳ್ಳದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರುವದು ಖಂಡಿತವೆಂದರು. ಆಧುನಿಕ ಜಗತ್ತಿನಲ್ಲಿರುವ ನಾವುಗಳು ಪ್ರತಿನಿತ್ಯ ಬದುಕಿನಲ್ಲಿ ಒತ್ತಡ ಜೀವನ ಸಾಗಿಸುತ್ತಿದ್ದೇವೆಂದರು. ಪ್ರತಿ ದಿನ ನಾವುಗಳು ಆರೋಗ್ಯದಿಂದ ಇರಬೇಕಾದ ದಿನದ 24 ಗಂಟೆಗಳಲ್ಲಿ 01 ಗಂಟೆಯಾದರು ಯೋಗ ಮತ್ತು ಪ್ರಾಣಾಯಮವನ್ನು ರೂಢಿಸಿಕೊಳ್ಳಬೇಕು. ಹಿಂದಿನ ಕಾಲದಲ್ಲಿ ಋಷಿಮುನಿಗಳು ಯೋಗ ಮತ್ತು ಪ್ರಾಣಾಯಮದಿಂದ ಆರೋಗ್ಯವನ್ನು ಗೆಲ್ಲುವದಕ್ಕೆ ಸಾಧ್ಯ ಎಂಬುದನ್ನು ಮನಗಂಡು ಸಾಧನೆಗೈದು ಇತರರಿಗೆ ಮಾದರಿಯಾಗಿದ್ದಾರೆ. ಗ್ರಾಮದ ಕೆರೆಗಳು ಜೀವಂತ ಆಗರಗಳು ಎನ್ನುವ ಪದಕ್ಕೆ ಗ್ರಾಮೀಣಾಭಿವೃದ್ದಿ ಆಯುಕ್ತಾಲಯವು ಅಮೃತ



ಸರೋವರ ದಡದಲ್ಲಿ ಯೋಗ ಮತ್ತು ಪ್ರಾಣಾಯಮ ಶಿಬಿರಗಳನ್ನು ಆಯೋಜಿಸಲು ನಿರ್ದೇಶನ ನೀಡಿರುವದು ಕೆರೆಯ ಮಹತ್ವಕ್ಕೆ ಆದ್ಯತೆ ನೀಡಿದೆ ಎಂದರು. ಯೋಗ ಮತ್ತು ಪ್ರಾಣಾಯಮಕ್ಕೆ ಯಾವುದೇ ರೀತಿಯ ವಯಸ್ಸಿನ ಇತಿ ಮಿತಿ ಇರುವದಿಲ್ಲ. ಆದರೆ ಕ್ರಮಬದ್ದವಾಗಿ ಯೋಗಭ್ಯಾಸ ರೂಢಿಸಿಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಯೋಗ ಅಭ್ಯಾಸ ಮತ್ತು ಪ್ರಾಣಾಯಮ ಭಂಗಿಗಳನ್ನು ಮಾರುತಿ ಚಿತ್ರಗಾರ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಪಂಚಾಯತ ಅಭಿವೃದ್ದಿ ಅಧಿಕಾರಿ ಮಂಜುಳಾದೇವಿ ಹೂಗಾರ, ಗ್ರಾಮಸ್ಥರಾದ ಕೃಷ್ಣಮೂರ್ತಿ ಹಲಗೇರಿ, ನೀಲಪ್ಪ ಮೂರಮನಿ, ಪ್ರೌಢಶಾಲಾ ಮುಖ್ಯೋಪಾಧ್ಯಾಯರಾದ ಸದಾನಂದ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮಂಜುನಾಥ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಈಶ್ವರಯ್ಯ ಪೋಲಿಸ್ ಪಾಟೀಲ, ರಾಜಾ, ರಾಜಾಭಕ್ಷಿ, ಶ್ರೀಕಾಂತ, ಆಶಾ ಕಾರ್ಯಕರ್ತರು, ಶಾಲಾ ಮಕ್ಕಳು, ಶಿಕ್ಷಕರು ಹಾಜರಿದ್ದರು.

# ಪತ್ರಕರ್ತರ ಕ್ರಿಕೆಟ್ ತಂಡಕ್ಕೆ ಶಿವರಾಜ್ ಕೆಂಭಾವಿ ಟಿಶರ್ಟ ಕೊಡುಗೆ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಜಿಲ್ಲಾ ಪತ್ರಿಕಾ ದಿನಾಚರಣೆ ಪ್ರಯುಕ್ತ ನಡೆಯಲಿರುವ ರಾಯಚೂರು ಜಿಲ್ಲಾ ಮಟ್ಟದ ಕ್ರಿಕೆಟ್ ಟೂರ್ನಮೆಂಟ್ ಗೆ ಲಿಂಗಸುಗೂರು ತಾಲ್ಲೂಕು ಕ್ರಿಕೆಟ್ ತಂಡಕ್ಕೆ ಟಿಶರ್ಟ ಪತ್ರಕರ್ತರ ಸಂಘದ ಅಧ್ಯಕ್ಷ ಶಿವರಾಜ್ ಕೆಂಭಾವಿ ಕೊಡುಗೆ ನೀಡಿದ್ದಾರೆ.ಪಟ್ಟಣದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ಸಮವಸ್ತ್ರ ಅನಾವರಣ ಮಾಡಲಾಯಿತು. ಈ ವೇಳೆ ಅಧ್ಯಕ್ಷ ಶಿವರಾಜ್ ಕೆಂಭಾವಿ ಮಾತನಾಡಿ, ಪ್ರತಿವರ್ಷದಂತೆ ಪತ್ರಿಕಾ ದಿನಾಚರಣೆ ಕ್ರಿಕೆಟ್ ಪಂದ್ಯಾವಳಿ ಆಯೋಜನೆ ಮಾಡಲಾಗುತ್ತದೆ. 2025–26 ನೇ ಸಾಲಿನ ಕ್ರಿಕೆಟ್ ಪಂದ್ಯಾವಳಿಯಲ್ಲಿ ಲಿಂಗಸುಗೂರ ತಂಡವು ಜಯಶಾಲಿಯಾಗಿತ್ತು. ಈ ಭಾರಿ ಲಿಂಗಸುಗೂರ ತಂಡ ಚಾಂಪಿಯನ್ ಆಗಲಿ ಎಂದು ಹೇಳಿದರು.ಈ ವೇಳೆ ಪ್ರಧಾನ ಕಾರ್ಯದರ್ಶಿ ಗಂಗಾಧರ ನಾಯಕ, ಹಿರಿಯ ಪತ್ರಕರ್ತರಾದ ಘನಮಠದಯ್ಯಸ್ವಾಮಿ,



ಲಕ್ಷ್ಮಣ ಬಾರಿಕೇರ್, ಉಪಾಧ್ಯಕ್ಷ ರಾಘವೇಂದ್ರ ಭಜಂತ್ರಿ, ಪಂಪಾಪತಿ ಭಜಂತ್ರಿ, ಚಂದ್ರು ಹಿರೇಮಠ, ಗೌತಮ ಕುಮಾರ, ಚಂದ್ರಶೇಖರ ನಾಯಕ, ಶ್ರೀಕಾಂತ, ಕಿಶೋರ, ಅರುಣಕುಮಾರ, ಪ್ರಮೋದ್ ಕುಲಕರ್ಣಿ ಸೇರಿದಂತೆ ಇದ್ದರು.

# ನೂತನ ಜೀವನ್ ಆರ್‌ಆರ್ ಆಸ್ಪತ್ರೆ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆಚಿಕ್ಕಬಳ್ಳಾಪುರ

ಅತಿ ಶೀಘ್ರದಲ್ಲೇ ಚಿಕ್ಕಬಳ್ಳಾಪುರದಲ್ಲಿ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸಲಿರುವಆರೋಗ್ಯಕ್ಕೆ ಸಂಬಂಧಿಸಿದ ಎಲ್ಲಾ ಆಧುನಿಕ ಸೌಲಭ್ಯಗಳನ್ನು ಒಳಗೊಂಡ ನೂತನ ಜೀವನ್ ಆರ್‌ಆರ್ ಆಸ್ಪತ್ರೆ ಕಟ್ಟಡವನ್ನು ಐ.ಎಸ್.ರಾವ್ ಅವರ ತಂದೆ ಐ.ಎಂ.ರಾವ್ ಉದ್ಘಾಟಿಸಿದರೆ,ಹೊರರೋಗಿಗಳ ವಿಶ್ರಾಂತಿ ಕೊಠಡಿಯನ್ನು ಸಂಸದ ಡಾ. ಕೆ. ಸುಧಾಕರ್ ಉದ್ಘಾಟಿಸಿದರು.ಬಳಿಕ ಆಸ್ಪತ್ರೆ ವೀಕ್ಷಿಸಿದ ಅವರು, ಭವಿಷ್ಯದಲ್ಲಿ ಕ್ಯಾನ್ಸರ್ ಆಸ್ಪತ್ರೆಯನ್ನೂ ಆರಂಭಿಸಿ ಇನ್ನಷ್ಟು ಆರೋಗ್ಯ ಸೇವೆ ವಿಸ್ತರಿಸಲಿ ಎಂದು ಶುಭ ಹಾರೈಸಿದರು.

ಚಿಕ್ಕಬಳ್ಳಾಪುರದ ಶಿಡ್ಲಘಟ್ಟ ರಸ್ತೆಯಲ್ಲಿ ನಿರ್ಮಾಣಗೊಂಡಿರುವ ಈ ಅತ್ಯಾಧುನಿಕ ಆಸ್ಪತ್ರೆಯ ಉದ್ಘಾಟನಾ ಸಮಾರಂಭದಲ್ಲಿ ಸಂಸದ ಡಾ. ಕೆ. ಸುಧಾಕರ್,ರೆಡ್ ಕ್ರಾಸ್ ಚೇರ್ಮನ್ ಎಂ ಜಯರಾಂ,ಕಸಾಪ ಜಿಲ್ಲಾಧ್ಯಕ್ಷ ಪ್ರೊಫೇಸರ್ ಕೋಡಿ ರಂಗಪ್ಪ,ಸಮಾಜಸೇವಕ ಸಂದೀಪ್ ರೆಡ್ಡಿ,ನಗರಸಭೆ ಮಾಜಿ ಅಧ್ಯಕ್ಷ ಎ.ಗಜೇಂದ್ರ,ಹಾಗೂ ವೈದ್ಯಕೀಯ ಕ್ಷೇತ್ರದ ಗಣ್ಯರು ಭಾಗವಹಿಸಿ ಶುಭಾಶಯ ಕೋರಿದರು.

ಚಿಕ್ಕಬಳ್ಳಾಪುರದಲ್ಲಿ ಕಳೆದ 20 ವರ್ಷಗಳಿಂದ ಆರೋಗ್ಯ ಸೇವೆ ಸಲ್ಲಿಸುತ್ತಿರುವ ಐ.ಎಸ್.ರಾವ್ ಅವರ ಮಾಲಿಕತ್ವದಲ್ಲಿ ಆರಂಭವಾಗಿರುವ ಈ ಆಸ್ಪತ್ರೆ ಶೀಘ್ರದಲ್ಲೇ ಸಾರ್ವಜನಿಕರಿಗೆ ಆರೋಗ್ಯ ಸೇವೆ ನೀಡಲು ಸಜ್ಜಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಆಸ್ಪತ್ರೆಯ ಮಾಲಿಕ ಡಾಕ್ಟರ್ ಐ.ಎಸ್.ರಾವ್,ಚಿಕ್ಕಬಳ್ಳಾಪುರದಲ್ಲಿ ಐಸಿಯು ಹಾಗೂ ಕಾರ್ಡಿಯಾಲಜಿ ಸೇರಿದಂತೆ ಕೆಲವು ಅತ್ಯಾಧುನಿಕ ವೈದ್ಯಕೀಯ ಸೌಲಭ್ಯಗಳ ಕೊರತೆಯನ್ನು ಮನಗಂಡು ಕಳೆದ ಹತ್ತು ವರ್ಷಗಳಿಂದ ಹಿಂದೆ ನಗರದ ಹೃದಯಭಾಗದಲ್ಲಿ ಜೀವನ್ ಆಸ್ಪತ್ರೆಯನ್ನು ಆರಂಭಿಸಿದೆ




ಜನರಿಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಎಲ್ಲಾ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಈಗಾಗಲೇ ಅನೇಕ ರೋಗಿಗಳಿಗೆ ಸೇವೆ ಸಲ್ಲಿಸಿರುವುದು ತೃಪ್ತಿ ತಂದಿದ್ದರೂ,ಇನ್ನಷ್ಟು ಜನರಿಗೆ ಉತ್ತಮ ಚಿಕಿತ್ಸೆ ನೀಡಬೇಕು ಎಂಬ ಕನಸಿನಿಂದ 100 ಹಾಸಿಗೆಗಳ ಸಾಮರ್ಥ್ಯ ಹೊಂದಿರುವ ಈ ಆಸ್ಪತ್ರೆಯನ್ನು ನಿರ್ಮಿಸಿದ್ದೇವೆ ಎಂದು ಹೇಳಿದರು.ಇನ್ನೂ ಆಸ್ಪತ್ರೆಯಲ್ಲಿ ಸಿಟಿ ಸ್ಕ್ಯಾನ್ ಸೌಲಭ್ಯ ಲಭ್ಯವಿದ್ದು, ಶೀಘ್ರದಲ್ಲೇ ಎಂಆರ್‌ಐ ವ್ಯವಸ್ಥೆಯನ್ನೂ ಅಳವಡಿಸಲಾಗುವುದು.

ಜೊತೆಗೆ ವಿವಿಧ ರೋಗಗಳಿಗೆ ತಜ್ಞ ವೈದ್ಯರನ್ನು ನೇಮಕ ಮಾಡಲಾಗುತ್ತಿದ್ದು,ಬೆಂಗಳೂರಿನ ಕಾರ್ಪೊರೇಟ್ ಆಸ್ಪತ್ರೆಗಳಲ್ಲಿ ದೊರೆಯುವ ಮಟ್ಟದ ಆರೋಗ್ಯ ಸೇವೆಯನ್ನು ಇಲ್ಲಿಯೂ ಒದಗಿಸಲಾಗುವುದು ಎಂದು ತಿಳಿಸಿದರು.

ಆಸ್ಪತ್ರೆಯ ಹೆಸರಿನ ಕುರಿತು ಮಾತನಾಡಿದ ಡಾ. ರಾಜಲಕ್ಷ್ಮಿ,ಆರ್ ಆರ್ ಎಂದರೆ ರಾವ್ ಮತ್ತು ರಾಜಲಕ್ಷ್ಮಿ ಎಂಬ ಅರ್ಥದಲ್ಲಿ ಹೆಸರಿಡಲು ಆರಂಭದಲ್ಲಿ ಯೋಚಿಸಿದ್ದೆವು. ಬಳಿಕ ಆಪ್ತರ ಸಲಹೆಯಂತೆ ಜೀವನ್ ಹೆಸರನ್ನು ಸೇರಿಸಿ ಜೀವನ್ ಆರ್ ಆರ್ ಆಸ್ಪತ್ರೆ ಎಂದು ನಾಮಕರಣ ಮಾಡಲಾಗಿದೆ.ಈ ಆಸ್ಪತ್ರೆ ನಿರ್ಮಾಣ ನಮ್ಮಿಬ್ಬರ ಕನಸಾಗಿದ್ದು ಇಂದು ನನಸಾಗಿದೆ.ಜನರಿಗೆ ಕೈಗೆಟುಕುವ ದರದಲ್ಲಿ ಚಿಕಿತ್ಸೆ ನೀಡುವ ಉದ್ದೇಶ ಹೊಂದಿದ್ದೇವೆ.ಒಂದು ವಾರದೊಳಗೆ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸಾ ಸೇವೆಗಳು ಆರಂಭವಾಗಲಿವೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ,ಆಸ್ಪತ್ರೆಯ ವೈದ್ಯಕೀಯ ಹಾಗೂ ಫಾರ್ಮಸಿ ವರ್ಗದವರು ಉಪಸ್ಥಿತರಿದ್ದರು.

# ಭೂತಲದಿನ್ನಿ ದರ್ಗಾದಲ್ಲಿ ಮೊಹರಂ ಸಂಭ್ರಮ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಧರ್ಮಗಳ ಬೇಧವಿಲ್ಲದೆ ಎಲ್ಲರೂ ಒಂದಾಗಿ ಆಚರಿಸುವ ಹಬ್ಬಗಳಲ್ಲಿ ಮೊಹರಂ ಪ್ರಮುಖವಾದದ್ದು. ಈ ಸೌಹಾರ್ದದ ಸಂದೇಶವನ್ನು ಎಲ್ಲರೂ ಸಾರೋಣ ಎಂದು ಮೊಹರಂ ಹಬ್ಬದ ಪ್ರಯುಕ್ತ ಬಿಜೆಪಿ ಮುಖಂಡ ಕೆ. ಕರಿಯಪ್ಪ ಅವರು ಸಿಂಧನೂರು ತಾಲೂಕಿನ ಭೂತಲದಿನ್ನಿ ಗ್ರಾಮದ ದರ್ಗಾಕ್ಕೆ ಭೇಟಿ ನೀಡಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ದರ್ಗಾಕ್ಕೆ ಭೇಟಿ ನೀಡಿದ ನಂತರ ಮಾತನಾಡಿದ ಕೆ. ಕರಿಯಪ್ಪ ಅವರು, "ನಮ್ಮ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಹೋದರತ್ವದ ಭಾವನೆಗಳನ್ನು ನಾವು ಬೆಳೆಸಿಕೊಳ್ಳಬೇಕು. ಧರ್ಮ ಯಾವುದೇ ಇರಲಿ, ಹಬ್ಬಗಳು ಮನುಷ್ಯರನ್ನು ಪ್ರೀತಿ ಮತ್ತು ಸಾಮರಸ್ಯದ ದಾರಿಯಲ್ಲಿ ಒಗ್ಗೂಡಿಸುವ ಶಕ್ತಿಯನ್ನು ಹೊಂದಿವೆ" ಎಂದು ಅಭಿಪ್ರಾಯಪಟ್ಟರು. ನಂತರ, ಧರ್ಮಗುರುಗಳು ಹಾಗೂ ಸ್ಥಳೀಯ ಮುಖಂಡರನ್ನು ಆತ್ಮೀಯವಾಗಿ ಭೇಟಿ ಮಾಡಿ ಹಬ್ಬದ ಸಂಭ್ರಮದಲ್ಲಿ ಭಾಗಿಯಾದರು.

ಭೂತಲದಿನ್ನಿ ದರ್ಗಾದಲ್ಲಿ ಮೊಹರಂ ಹಬ್ಬವನ್ನು ಅತ್ಯಂತ



ಭಕ್ತಿಭಾವದಿಂದ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ದರ್ಗಾದಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ದೈವಿಕ ಪ್ರಾರ್ಥನೆಗಳು ನೆರವೇರಿದವು.

ಈ ಸೌಹಾರ್ದದ ಭೇಟಿಯ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಪ್ರಮುಖ ಮುಖಂಡರು, ಬಿಜೆಪಿ ಪಕ್ಷದ ಕಾರ್ಯಕರ್ತರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಉಪಸ್ಥಿತರಿದ್ದು, ಹಬ್ಬದ ಸಂಭ್ರಮಕ್ಕೆ ಸಾಕ್ಷಿಯಾದರು.

# ಆಕಾಶವಾಣಿಯಲ್ಲಿ ಇಂದು ಕಲ್ಯಾಣವಾಣಿ ನೇರ ಫೋನ್-ಇನ್

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.22 : ಆಕಾಶವಾಣಿ ಕಲಬುರಗಿ ಕೇಂದ್ರವು ಜೂನ್ 23ರ ಮಂಗಳವಾರ ಬೆಳಿಗ್ಗೆ 11 ಗಂಟೆಗೆ ತನ್ನ 'ಕಲ್ಯಾಣವಾಣಿ' ವಿಭಾಗದಲ್ಲಿ ವಿಶೇಷ ನೇರ ಫೋನ್–ಇನ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಇದೇ ತಿಂಗಳ 30 ರಿಂದ ಪ್ರಾರಂಭವಾಗಲಿರುವ 'ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ' (SSR) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಈ ನೇರ ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಇಕ್ರಂ ಶರೀಫ್ (ಐ.ಎ.ಎಸ್) ಅವರು ಭಾಗವಹಿಸಿ, ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಪ್ರಕ್ರಿಯೆಯ ಕುರಿತಾದ ಕೇಳುಗರ ಪ್ರಶ್ನೆಗಳಿಗೆ ನೇರವಾಗಿ ಉತ್ತರಿಸಲಿದ್ದಾರೆ. ಸಾರ್ವಜನಿಕರು ತಮ್ಮ ಗೊಂದಲಗಳನ್ನು ನಿವಾರಿಸಿಕೊಳ್ಳಲು ನೇರವಾಗಿ ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಬಹುದು. ಆಸಕ್ತರು ನಿಲಯದ ದೂರವಾಣಿ ಸಂಖ್ಯೆಗಳಾದ 08472–295986, 08472–295987, ಮತ್ತು 08472–310105 ಗೆ ಕರೆ ಮಾಡಿ ಪ್ರಶ್ನೆಗಳನ್ನು ಕೇಳಬಹುದು ಎಂದು ಆಕಾಶವಾಣಿ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ ರೈಲ್ವೆ ನಿಲ್ದಾಣ : ಜುಲೈ 30ರೊಳಗಾಗಿ ಹೊಸ ಲಿಫ್ಟ್, ಸೆನ್ಸಾರ್ ಎಸ್ಕಲೇಟರ್ ಪ್ರಾರಂಭ ಸಾಧ್ಯತೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿಯ ರೈಲ್ವೆ ನಿಲ್ದಾಣದಲ್ಲಿ ನಿರ್ಮಾಣ ಹಂತದಲ್ಲಿರುವ ಫುಟ್ ಓವರ್ ಬ್ರಿಡ್ಜ್ (ಎಫ್‌ಓಬಿ) ಮತ್ತು ಎಸ್ಕಲೇಟರ್ – ಲಿಫ್ಟ್ ಅಳವಡಿಕೆಯು ಜುಲೈ 30ರೊಳಗಾಗಿ ಜನಸೇವೆಗೆ ಅರ್ಪಣೆಗೊಳ್ಳುವ ಸಾಧ್ಯತೆಗಳಿವೆ.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಉಪಾಧ್ಯಕ್ಷರು ಹಾಗೂ ವಿಭಾಗೀಯ ರೈಲ್ವೆ ಬಳಕೆದಾರರ ಸಲಹಾ ಸಮಿತಿ, ಸದಸ್ಯರಾದ ಸೊಂತ ಗಿರಿಧರ್ ಅವರು, ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿ, ಅಲ್ಲಿಯ ಕಾಮಗಾರಿಗಳನ್ನು ಪರಿಶೀಲಿಸಿದಾಗ ಅಧಿಕಾರಿಗಳು ಮತ್ತು ಕಾಮಗಾರಿಯ ಗುತ್ತಿಗೆದಾರರು, ಜುಲೈ 30ರೊಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವ ಗುರಿಯೊಂದಿಗೆ ಕೆಲಸವನ್ನು ವೇಗವಾಗಿ ನಡೆಸಲಾಗುತ್ತಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಉಪಾಧ್ಯಕ್ಷರು ಹಾಗೂ ವಿಭಾಗೀಯ ರೈಲ್ವೆ ಬಳಕೆದಾರರ ಸಲಹಾ ಸಮಿತಿ, ಸದಸ್ಯರಾದ ಸೊಂತ ಗಿರಿಧರ್ ಅವರು, ಅಮೃತ್ ಯೋಜನೆ ಅಡಿ ಕೈಗೊಂಡಿರುವ ಕಾಮಗಾರಿಗಳು ಪೂರ್ಣಗೊಳ್ಳದೇ ಪ್ರಯಾಣಿಕರು ತೊಂದರೆ ಅನುಭವಿಸುತ್ತಿರುವ ಕುರಿತು ಡಿಆರ್‌ಯುಸಿಸಿ ಸಭೆಗಳಲ್ಲಿ ವಿಷಯ ಪ್ರಸ್ತಾಪ ಮಾಡಿ, ಹಿರಿಯ ಅಧಿಕಾರಿಗಳ ಗಮನ ಸೆಳೆದಿದ್ದೆ. ಈಗ ಕಾಮಗಾರಿ ವೇಗ ಪಡೆದಿದೆ ಎಂದರು.



ಬಳ್ಳಾರಿ ಜಿಲ್ಲಾ ಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್, ಗೌರವ ಕಾರ್ಯದರ್ಶಿಗಳಾಗಿರುವ ಕೆ.ಸಿ. ಸುರೇಶಬಾಬು ಅವರು, ಅಮೃತ್ ಯೋಜನೆಯಲ್ಲಿ ಕಾಮಗಾರಿ ಪ್ರಾರಂಭವಾಗಿದ್ದರೂ ಕೆಲಸ ಆಮೆಗತಿಯಲ್ಲಿ ಸಾಗುತ್ತಿದ್ದ ಬಗ್ಗೆ ಸಚಿವ ವಿ. ಸೋಮಣ್ಣ ಮತ್ತು ರೈಲ್ವೆಯ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದ ಕಾರಣ ಕಾಮಗಾರಿಗೆ ವೇಗ ಸಿಕ್ಕಿದೆ ಎಂದರು.

ರೈಲ್ವೆಯ ಕ್ಲಾಸ್–1 ಗುತ್ತಿಗೆದಾರರಾಗಿರುವ ವೆಂಕಟೇಶಲು ಅವರು, 40 ಅಡಿ ಅಗಲ, 80 ಮೀಟರ್ ಉದ್ದದ, ಅಂದರೆ ರೈಲ್ವೆ ಪ್ಲಾಟ್‌ಫಾರಂ 2 ಮತ್ತು 3 ಅನ್ನು ಸಂಪರ್ಕ ಮಾಡುವಂತೆ ಫುಟ್ ಓವರ್ ಬ್ರಿಡ್ಜ್ ನಿರ್ಮಾಣ ಆಗುತ್ತಿದೆ. ಅಷ್ಟೇ ಅಲ್ಲ, ಆಟೋಮೆಟಿಕ್ ಎಸ್ಕಲೇಟರ್ ಮತ್ತು ಲಿಫ್ಟ್ ಬಂದಿದ್ದು, ಅವುಗಳ ಅಳವಡಿಕೆಯು ಕೂಡ ಪೂರ್ಣಗೊಳ್ಳಲಿದೆ. ಈ ಕಾಮಗಾರಿಗಾಗಿ ಜೂನ್ 1ನೇ ತಾರೀಕಿನಿಂದ ನಿತ್ಯವೂ 5 ತಾಸುಗಳ ಕಾಲ ಜಿಂದಾಲ್‌ಗೆ ಹೋಗುವ ಗೂಡ್ಸ್‌ಗಳನ್ನು ತಡೆಯಲಾಗುತ್ತಿದೆ. ಕಾಮಗಾರಿ ತ್ವರಿತವಾಗಿ ನಡೆದಿದೆ ಎಂದರು.

ಬಳ್ಳಾರಿ ರೈಲ್ವೆ ವಿಭಾಗದ ಮುಖ್ಯ ಕಮರ್ಷಿಯಲ್ ಇನ್ಸ್‌ಪೆಕ್ಟರ್ ರಮೇಶ್ ಅವರು, ಲಿಫ್ಟ್, ಸೆನ್ಸಾರ್ ಆಧಾರಿತ ಎಸ್ಕಲೇಟರ್ ಯಂತ್ರಗಳು ಬಂದಿವೆ. ಪ್ರಯಾಣಿಕರು ರೈಲ್ವೆ ನಿಲ್ದಾಣದಿಂದ ಹೊರಗಡೆ ಹೋಗುವ ಮತ್ತು ಹೊರಗಡೆಯಿಂದ ಒಳಗಡೆ ಬರುವ ನೂತನ ವ್ಯವಸ್ಥೆ ಜಾರಿಗೆ ಬರಲಿದೆ. ಸಿವಿಲ್ ಕಾಮಗಾರಿ ವೇಗವಾಗಿ ನಡೆದಿವೆ. ನಿಗಧಿತ ಅವಧಿಯಲ್ಲಿ ಈ ಸೌಲಭ್ಯಗಳು ಪ್ರಯಾಣಿಕರ ಸೇವೆಗೆ ಸಮರ್ಪಣೆಗೊಳ್ಳುವ ಸಾಧ್ಯತೆಗಳಿವೆ ಎಂದರು.

ರೈಲ್ವೆ ಅಧಿಕಾರಿ ಎಸ್. ಹೊನ್ನೂರುಸ್ವಾಮಿ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕ್ರೀಡಾ ವಸತಿ ನಿಲಯ ಸ್ಥಳಾಂತರ ಮಾಡದಂತೆ ಕ್ರೀಡಾ ಸಚಿವ ಪರಮೇಶ್ವರ್ ಗೆ ಮೇಯರ್ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಹಿರಿಯ ಬಾಲ ।ಕರ ಫುಟ್ಬಾಲ್ ಕ್ರೀಡಾ ವಸತಿ ನಿಲಯವನ್ನು ಇಲ್ಲೇ ಉಳಿಸಿಕೊಳ್ಳಲು ಮತ್ತು ಅದನ್ನು ಬೆಂಗ ಳೂರಿಗೆ ಸ್ಥಳಾಂತರಿಸುವ ಪ್ರಸ್ತಾವನೆಯನ್ನು ಕೈಬಿಡುವಂತೆ ಕ್ರೀಡಾ ಸಚಿವರೂ ಆಗಿರುವ ಉಪ ಮುಖ್ಯ ಮಂತ್ರಿ ಡಾ.ಜಿ.ಪರಮೇಶ್ವರ ಅವರಿಗೆ ಮೇಯರ್ ಪಿ.ಗಾದೆಪ್ಪ ಮನವಿ ಸಲ್ಲಿಸಿದ್ದಾರೆ.

ಕರ್ನಾಟಕದ ಐತಿಹಾಸಿಕವಾಗಿ ಹಿಂದುಳಿದ ಉತ್ತರ ಮತ್ತು ಪೂರ್ವ ವಲಯಗಳಲ್ಲಿ ಫುಟ್ ಬಾಲ್ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ 2018 ರಲ್ಲಿ ಬಳ್ಳಾರಿಯಲ್ಲಿ ಹಿರಿಯ ಬಾಲಕರ ಫುಟ್ ಬಾಲ್ ಕ್ರೀಡಾ ವಸತಿ ನಿಲಯವನ್ನು ಸ್ಥಾಪಿಸಲಾಯಿತು. ಕಳೆದ 8 ವರ್ಷಗಳಲ್ಲಿ, ಈ ಸಂಸ್ಥೆಯು ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದು, ನಿರಂತರವಾಗಿ ಗಮ ನಾರ್ಹ ಸ್ಪರ್ಧಾತ್ಮಕ ಫಲಿತಾಂಶಗಳನ್ನು ನೀಡುವ ಮೂಲಕ ನಮ್ಮ ಬಳ್ಳಾರಿ ಜಿಲ್ಲೆಗೆ ಮತ್ತು ಇಡೀ ಕಲ್ಯಾಣ ಕರ್ನಾಟಕ



ವಿಭಾಗಕ್ಕೆ ಅಪಾರ ಕೀರ್ತಿಯನ್ನು ತಂದಿದೆ. ಈ ಕ್ರೀಡಾ ನಿಲಯದ ಫುಟ್ಬಾಲ್ ತಂಡವು ಸಾಧಿಸಿದ ಅಜಯ ಮೈಲಿಗಲ್ಲುಗಳು ಇವೆ.

ಕಳೆದ 8 ವರ್ಷಗಳಲ್ಲಿ ನಡೆದ ಪ್ರಮುಖ ಪಂದ್ಯಾವಳಿಗಳು ಮತ್ತು ರಾಜ್ಯ ಚಾಂಪಿಯನ್ ಗಳಲ್ಲಿ 5 ಚಿನ್ನದ ಪದಕಗಳು ಮತ್ತು 2 ಬೆಳ್ಳಿ ಪದಕಗಳನ್ನು ಗೆದ್ದುಕೊಂಡಿದೆ.

ಕರ್ನಾಟಕ ರಾಜ್ಯ ಫುಟ್ಬಾಲ್ ಸಂಸ್ಥೆಯ 'ಬಿ' ಡಿವಿಜ್ ನಿಂದ 'ಎ' ಡಿವಿಜನ್ ಗೆ ಬಡ್ತಿ ಪಡೆ ದಿದೆ.

ಅಖಿಲ ಭಾರತ ವಿಶ್ವವಿದ್ಯಾಲಯ ಕ್ರೀಡಾಕೂ

ಟಗಳು ಸೇರಿದಂತೆ ಪ್ರಮುಖ ರಾಷ್ಟ್ರೀಯ ಮಟ್ಟದ ಪಂದ್ಯಾವಳಿಗಳಲ್ಲಿ ರಾಜ್ಯವನ್ನು ಪ್ರತಿನಿಧಿಸಲು ನಿರಂತರವಾಗಿ ಅತ್ಯುತ್ತಮ ಆಟ ಗಾರರನ್ನು ಕೊಡುಗೆಯಾಗಿ ನೀಡಿದೆ. ಉತ್ತಮ ವಾಗಿ ಕಾರ್ಯನಿರ್ವಹಿಸುತ್ತಿರುವ ಮತ್ತು ಯಶಸ್ವಿಯಾಗಿರುವ ಈ ವಸತಿ ನಿಲಯವನ್ನು ಬೆಂಗಳೂರಿಗೆ ಸ್ಥಳಾಂತರಿಸುವುದರಿಂದ

ಉತ್ತರ ಕರ್ನಾಟಕ ಜಿಲ್ಲೆಗಳ ಮಹತ್ವಾ ಕಾಂಕ್ಷಿ ಫುಟ್ಬಾಲ್ ಕ್ರೀಡಾಪಟುಗಳ ಮೇಲೆ ತೀವ್ರ ಪರಿಣಾಮ ಬೀರಲಿದ್ದು, ಅವರು ಅವಕಾಶ ವಂಚಿತರಾಗಲಿದ್ದಾರೆ.

ಅದ್ದರಿಂದ ಬಳ್ಳಾರಿಯಲ್ಲಿಯೇ ಮುಂದು ವರಿಸಬೇಕೆಂದು ಮನವಿ ಮಾಡಿದ್ದಾರೆ.

# ಕಣ್ಮನ ಸೆಳೆದ ಶ್ರೀಕೃಷ್ಣ ಸಂಧಾನ ನಾಟಕ ಸಮೂಹ ನೃತ್ಯ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕನ್ನಡ ನಾಡಿನ ಶ್ರೀಮಂತ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸಿ, ಬೆಳೆಸುವ ನಿಟ್ಟಿನಲ್ಲಿ ಪ್ರೇಕ್ಷಕರು ಹೆಚ್ಚಿರುವ ಸ್ಥಳಗಳಿಗೇ ನೇರವಾಗಿ ತೆರಳಿ ಪ್ರದರ್ಶನ ನೀಡುವ ಕಲಾ ನಡಿಗೆ – ನಿಮ್ಮ ಬಳಿಗೆ' ಯೋಜನೆಗೆ ಚಾಲನೆ ನೀಡಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಹೇಳಿದರು.ತಾಲೂಕಿನ ಬ್ಯಾಲಚಿಂತ ಗ್ರಾಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕಲಾವಿದರ ಸಂಘದ ಸಂಯುಕ್ತಾಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 'ಕಲಾ ನಡಿಗೆ – ನಿಮ್ಮ ಬಳಿಗೆ' ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಾಂಸ್ಕೃತಿಕ ವೇದಿಕೆಗಳಲ್ಲಿ ಪ್ರೇಕ್ಷಕರ ಭಾಗವಹಿಸುವಿಕೆ ಕಡಿಮೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕಲಾವಿದರೇ ಜನರೆಡೆಗೆ ನಡೆದು ಬಂದು ಕಲಾ ನೈಪುಣ್ಯತೆಯನ್ನು ಪ್ರದರ್ಶಿಸುವ ವಿಭಿನ್ನ ಆಶಯವನ್ನು ಈ ಪ್ರಸಕ್ತ ಸಾಲಿನ ಯೋಜನೆ ಹೊಂದಿದೆ ಎಂದು ತಿಳಿಸಿದರು.

ಸಾಂಸ್ಕೃತಿಕ ವೈಭವ: ಕಾರ್ಯಕ್ರಮದ ಅಂಗವಾಗಿ ಬಳ್ಳಾರಿಯ ಕುಮಾರಿ ಸಮೀರಾ ಎಸ್.ಕೆ. ಮತ್ತು ಸಂಗಡಿಗರು ಪ್ರಸ್ತುತಪಡಿಸಿದ ಸಮೂಹ ನೃತ್ಯ ಪ್ರದರ್ಶನ ನೆರೆದಿದ್ದವರ ಗಮನ ಸೆಳೆಯಿತು. ತದನಂತರ ಸಿರುಗುಪ್ಪ ತಾಲ್ಲೂಕಿನ ಸಿರಿಗೇರಿ ಗ್ರಾಮದ ಧಾತ್ರಿ ರಂಗಸಂಸ್ಥೆ ವತಿಯಿಂದ ಪ್ರದರ್ಶನಗೊಂಡ 'ಶ್ರೀಕೃಷ್ಣ ಸಂಧಾನ' ಹಾಸ್ಯ ಪೌರಾಣಿಕ ನಾಟಕವು ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು. ಕಲಾವಿದರ ಅದ್ಭುತ ಅಭಿನಯ, ಚುರುಕಿನ ಸಂಭಾಷಣೆ ಹಾಗೂ ಆಕರ್ಷಕ ರಂಗವಿನ್ಯಾಸಕ್ಕೆ ಜನರಿಂದ ಭರಪೂರ ಚಪ್ಪಾಳೆ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಯಲ್ಲನಗೌಡ ಶಂಕರಬಂಡೆ, ಗ್ರಾಮದ ಹಿರಿಯ ಮುಖಂಡ ಶಿವಶಂಕರಗೌಡ, ಹಿರಿಯ ನೃತ್ಯ ಕಲಾವಿದ ಎಸ್.ಕೆ.ಆರ್. ಜಿಲಾನಿ ಭಾಷ, ಬಯಲಾಟ ಕಲಾವಿದ ಮುದ್ದಟನೂರು ತಿಪ್ಪೇಸ್ವಾಮಿ ಹಾಗೂ ತೊಗಲುಗೊಂಬೆ ಕಲಾವಿದ ಸುಬ್ಬಣ್ಣ ಸೇರಿದಂತೆ ಗ್ರಾಮದ ಮಹಿಳೆಯರು, ಯುವಕರು ಹಾಗೂ ವಿದ್ಯಾರ್ಥಿಗಳು ಇತರರಿದ್ದರು.

# ಬಳ್ಳಾರಿಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಆಕಸ್ಮಿಕ ದಾಳಿ: 5 ಮಕ್ಕಳ ರಕ್ಷಣೆ, ಮಾಲೀಕರ ವಿರುದ್ಧ ಪ್ರಕರಣ ದಾಖಲು




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ವಿವಿಧ ರಸ್ತೆಗಳು ಹಾಗೂ ಅಂಗಡಿ ಮುಂಗಟ್ಟುಗಳ ಮೇಲೆ ಸೋಮವಾರ ಟಾಸ್ಕ್ ಫೋರ್ಸ್ ಸಮಿತಿಯ ಅಧಿಕಾರಿಗಳು ಜಂಟಿಯಾಗಿ ಆಕಸ್ಮಿಕ ದಾಳಿ ನಡೆಸಿ, ಒಟ್ಟು ಐದು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಕಂದಾಯ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಚೈಲ್ಡ್ ಲೈನ್ ಸಂಘಟನೆಯ ಜಂಟಿ ಸಹಯೋಗದೊಂದಿಗೆ ಈ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು.

ಬಳ್ಳಾರಿ ನಗರದ ಪ್ರಮುಖ ವಲಯಗಳಾದ ಸಂಗಮ್ ಸರ್ಕಲ್, ರಾಧಿಕಾ ಟಾಕೀಸ್ ರಸ್ತೆ, ವಡ್ಡರ ಬಂಡೆ ಏರಿಯಾ, ಕಣೇಕಲ್ ಬಸ್ ನಿಲ್ದಾಣ ಹಾಗೂ ಆಂದ್ರಾಳ್ ಭಾಗಗಳಲ್ಲಿರುವ ಪಂಚರ್ ಶಾಪ್, ಟಿಂಕರಿಂಗ್ ಶಾಪ್, ಗ್ಯಾರೇಜ್, ವುಡ್ ವರ್ಕ್ಸ್ ಮತ್ತು ಮೆಕ್ಯಾನಿಕ್ ಶಾಪ್‌ಗಳ ಮೇಲೆ ಅಧಿಕಾರಿಗಳ ತಂಡ ದಾಳಿ ನಡೆಸಿತು.

ತಾಲೂಕು ಮಟ್ಟದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರ ಅಡಿಯಲ್ಲಿ ನೇಮಕವಾಗಿರುವ ನಿರೀಕ್ಷಕರ ಟಾಸ್ಕ್ ಫೋರ್ಸ್ ಸಮಿತಿಯ ನೇತೃತ್ವದಲ್ಲಿ ಈ ಕ್ರಮ ಜರುಗಿಸಲಾಗಿದೆ.ದಾಳಿಯ ವೇಳೆ ಕೆಲಸದಲ್ಲಿ ತೊಡಗಿದ್ದ ಐದು ಮಕ್ಕಳನ್ನು ರಕ್ಷಿಸಿ, ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲಾಗಿದೆ. ಮಕ್ಕಳ ವಯಸ್ಸಿನ ಅಧಿಕೃತ ದಾಖಲಾತಿಗಳನ್ನು ಪರಿಶೀಲಿಸಿದ ನಂತರ, ಬಾಲಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ಮಾಲೀಕರ ವಿರುದ್ಧ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ಕಾಯ್ದೆಯನ್ವಯ ಪ್ರಕರಣ ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ. ಇದೇ ಸಂದರ್ಭದಲ್ಲಿ ಅಂಗಡಿ ಮತ್ತು ಉದ್ದಿಮೆಗಳ ಮಾಲೀಕರಿಗೆ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳದಂತೆ ಎಚ್ಚರಿಕೆ ನೀಡಿ, ಜಾಗೃತಿ ಪೋಸ್ಟರ್‌ಗಳನ್ನು ಹಂಚಲಾಯಿತು.ಈ ಕಾರ್ಯಾಚರಣೆಯಲ್ಲಿ ಉಪತಹಶೀಲ್ದಾರ್ ಮಂಜುನಾಥ್, ಕಾರ್ಮಿಕ ನಿರೀಕ್ಷಕ (2ನೇ ವೃತ್ತ) ರಮೇಶ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ಎಸ್.ಜೆ.ಪಿ.ಯು ನ ಲಲಿತಮ್ಮ, ಮಕ್ಕಳ ರಕ್ಷಣಾಧಿಕಾರಿಗಳಾದ ವಲಿಬಾಷಾ ಮತ್ತು ಹೊನ್ನೂರಪ್ಪ, ಕಂದಾಯ ಇಲಾಖೆಯ ಆಡಳಿತಾಧಿಕಾರಿ ಮಧುಸೂದನ್, ಆರೋಗ್ಯ ಇಲಾಖೆಯ ಮುಸ್ತಾಖ್ ಅಹಮ್ಮದ್, ಚೈಲ್ಡ್ ಲೈನ್ ಸಿಬ್ಬಂದಿ ಸುಶೀಲ ಹಾಗೂ ರೀಚ್ ಸಂಸ್ಥೆಯ ಹನುಮಂತಪ್ಪ ಹಾಜರಿದ್ದರು.

# ರೌಡಿ ಶೀಟರ್ ಮನೆಗಳಮೇಲೆ ದಾಳಿ, ಅನಧಿಕೃತ ದಾಖಲೆಗಳ ವಶ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಮ್ಮ ವಲಯದ ವಿಜಯನಗರ, ರಾಯಚೂರು, ಕೊಪ್ಪಳ ಹಾಗು ಬಳ್ಳಾರಿ ಜಿಲ್ಲೆಯಲ್ಲಿ ಇಂದು ಏಕಕಾಲಕ್ಕೆ 22 ರೌಡಿ ನಿಗ್ರಹ ತಂಡಗಳನ್ನು ರಚಿಸಿ. 381 ರೌಡಿಗಳ ಮನೆಗಳ ಮೇಲೆ ದಾಲಕಿ ನಡೆಸಿ ಪರಿಶೀಲನೆ ನಡೆಸಿದ್ದು, ನಗರದ ಎಪಿಎಂಸಿ ಠಾಣೆ ವ್ಯಾಪ್ತಿಯ ಅಂದ್ರಾಳ್ ಸಿತಾರಾಂ ಮನೆಯಲ್ಲಿ, ಏರ್ ಗನ್, ಸ್ಟ್ಯಾಂಪ್ ಪೇಪರ್, ಪರರ ಆಸ್ತಿಗಳ ದಾಖಲಾತಿಗಳು ದೊರೆತಿವೆ ಎಂದು ಬಳ್ಳಾರಿ ವಲಯದ ಐಜಿಪಿ ಡಾ.ಹರ್ಷ ಹೇಳಿದ್ದಾರೆ

ಅವರು ಇಂದು ಎಸ್ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ. ರೌಡಿ ನಿಗ್ರಹ ದಳ ರಚನೆ ಬಗ್ಗೆ ಸಿಎಂ ಅವರು ಹೇಳಿದ್ದು. ಅದರಂತೆ ಇಲಾಖೆಯ ಮೇಲಾಧಿಕಾರಿಗಳು ಅನೇಕ ನಿರ್ದೇಶನ ನೀಡಿದ್ದಾರೆ. ನಮ್ಮ ವಲಯದ ಪೊಲೀಸ್ ಎಸ್ ಹೆಚ್‌ಓ, ಸರ್ಕಲ್ ಇನ್ಸೆಕ್ಟರ್ ನೇತೃತ್ವದಲ್ಲಿ ತಂಡ ರಚಿಸಿದೆ.

ಬಳ್ಳಾರಿ ಜಿಲ್ಲೆಯ 104, ವಿಜಯನಗರದ 106, ರಾಯಚೂರು103 ಮತ್ತು ಕೊಪ್ಪಳ ಜಿಲ್ಲೆಯ 68 ಸೇರಿ ಒಟ್ಟು 381 ರೌಡಿಗಳ ಮನೆ ಮೇಲೆ ಶೋಧ ಕಾರ್ಯ ನಡೆಸಿದೆ.

ಈ ವೇಳೆ ಅವರ ವಾಸ, ಸಹಚರರ ಬಗ್ಗೆ, ವಾಹನ ಯಾವುದು ಎಂಬ ಬಗ್ಗೆ, ಮನೆಯಲ್ಲಿ ಶಸ್ತ್ರಾಸ್ತ್ರ ಇವೆಯಾ ಎಂದು ಪರಿಶೀಲಿಸಿದೆ. 16 ಕಡೆ ಅವರು ಇರುವಿಕೆ ದೊರೆತಿಲ್ಲ ಅವರಿಗೆ ನೋಟೀಸ್ ನೀಡಿದೆ. ಇವರಲ್ಲಿ 13 ಜನ ಮೃತಪಟ್ಟಿದ್ದಾರೆಂದು ತಿಳಿಸಿದರು.

ರೌಡಿ ಚಟುವಟಿಕೆ ನಿಯಂತ್ರಣದಲ್ಲಿಡುವುದಾಗಿದೆ ಹಾಗಾಗಿ ವಲಯದ ನಾಲ್ಕು ಜಿಲ್ಲೆಗಳಲ್ಲಿ 3814 ಜನರ ಮೇಲೆ ನಿಗಾ ಇಟ್ಟಿದೆ. ಉಳಿದವರ ಮನೆ ಮೇಲೂ ತಪಾಸಣೆ ನಡೆಯಲಿದೆ

ಬಳ್ಳಾರಿ ವಲಯದಲ್ಲಿ 53 ಜನರನ್ನು ಗಡಿ ಪಾರು ಮಾಡಲು ಪ್ರಸ್ತಾವನೆ ಬಂದಿದೆ. ಇದರಲ್ಲಿ 10 ಜನರನ್ನು ಗಡಿ ಪಾರುಮಾಡಿದೆಂದರು

ಕೊಲೆ ಆರೋಪದ ರೌಡಿ ಶೀಟರ್ ಗಳು ವಲಯದಲ್ಲಿ ಒಟ್ಟಾರೆ 377 ಜನರಿದ್ದು. ಬಳ್ಳಾರಿ ಜಿಲ್ಲೆಯಲ್ಲಿ 126, ವಿಜಯನಗರ 71, ರಾಯಚೂರಿನಲ್ಲಿ 100 ಮತ್ತು80 ಕೊಪ್ಪಳ ಜಿಲ್ಲೆಯಲ್ಲಿದ್ದಾರೆಂದರು.

ಸುದ್ದಿಗೋಷ್ಟಿಯಲ್ಲಿ ಎಸ್ಪಿ ಡಾ.ಸುಮನ್ ಡಿ.ಪೆನ್ನೇಕರ್, ಎಎಸ್ಪಿ ನವೀನ್ ಕುಮಾರ್, ನಗರ ಡಿವೈಎಸ್ಪಿ ಗೋವಿಂದರಾಜುಲು ಮೊದಲಾದವರು ಇದ್ದರು.

# ಜೂ. 28 ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಬಳ್ಳಾರಿ ಜಿಲ್ಲೆಯಲ್ಲಿ 1.99 ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಾಮಾನ್ಯವಾಗಿ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟು ಮಾಡುವ 'ಪೋಲಿಯೋ ಮೈಲಿಟಿಸ್' ವೈರಸ್ ನಿಯಂತ್ರಣಕ್ಕಾಗಿ 1995 ರಿಂದ ನಿರಂತರವಾಗಿ ಹಮ್ಮಿಕೊಳ್ಳುತ್ತಾ ಬರಲಾಗಿರುವ "ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ"ವು ಈ ವರ್ಷ ಜೂನ್ 28ರ ಭಾನುವಾರದಂದು ಜಿಲ್ಲಾದ್ಯಂತ ಜರುಗಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ತಿಳಿಸಿದ್ದಾರೆ.

*ಬಳ್ಳಾರಿ ಜಿಲ್ಲೆಯ ಲಸಿಕಾ ಕಾರ್ಯಕ್ರಮದ ಒಂದು ನೋಟ:*

ಬಳ್ಳಾರಿ ಜಿಲ್ಲೆಯ ಒಟ್ಟು 5 ತಾಲ್ಲೂಕುಗಳಲ್ಲಿ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹುಟ್ಟಿನಿಂದ 5 ವರ್ಷದೊಳಗಿನ ಒಟ್ಟು 1,99,703 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. 615 ಮನೆ ಭೇಟಿ ತಂಡಗಳು, 50 ಟ್ರಾನ್ಸಿಟ್ ತಂಡಗಳು ಹಾಗೂ 15 ಸಂಚಾರಿ ತಂಡಗಳು ಸೇರಿದಂತೆ ಒಟ್ಟು 916 ತಂಡಗಳನ್ನು ನಿಯೋಜಿಸಲಾಗಿದೆ.

ಒಟ್ಟು 977 ಲಸಿಕಾ ಕಾರ್ಯಕರ್ತರು, 188 ಮೇಲುಸ್ತುವಾರಿ ತಂಡಗಳು ಮತ್ತು 5 ತಾಲ್ಲೂಕು ಉಸ್ತುವಾರಿ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 236 ಕ್ಲಿಷ್ಟಕರ ಸ್ಥಳಗಳನ್ನು ಗುರುತಿಸಲಾಗಿದ್ದು, ಒಟ್ಟು 3,10,143 ಡೋಸ್ ಲಸಿಕೆಯನ್ನು ಲಭ್ಯವಿಟ್ಟುಕೊಳ್ಳಲಾಗಿದೆ.

*ಭಾರತ ಪೋಲಿಯೋ ಮುಕ್ತ, ಆದರೆ ಜಾಗ್ರತೆ ಅಗತ್ಯ:*

ದೇಶದಲ್ಲಿ ಕೊನೆಯ ಪೋಲಿಯೋ ಪ್ರಕರಣವು 2011ರ ಜನವರಿ 13 ರಂದು ಪಶ್ಚಿಮ ಬಂಗಾಳದ ಹೌರಾ ಜಿಲ್ಲೆಯಲ್ಲಿ ವರದಿಯಾಗಿತ್ತು. ಅದಾದ ಬಳಿಕ



ಯಾವುದೇ ಹೊಸ ಪ್ರಕರಣಗಳು ಕಂಡುಬಂದಿಲ್ಲ. ಈ ಹಿನ್ನೆಲೆಯಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು 2014ರ ಫೆಬ್ರವರಿ 11 ರಂದು ಭಾರತವನ್ನು 'ಪೋಲಿಯೋ ಮುಕ್ತ ರಾಷ್ಟ್ರ' ಎಂದು ಘೋಷಿಸಿದೆ. ಆದರೆ, ಭಾರತವನ್ನು ನಿರಂತರವಾಗಿ ಪೋಲಿಯೋ ಮುಕ್ತವಾಗಿಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಹನುಮಂತಪ್ಪ ಅವರು, ಪೋಲಿಯೋ ವೈರಸ್‌ನಲ್ಲಿ 3 ವಿಧಗಳಿದ್ದು, ಅದರಲ್ಲಿ ಟೈಪ್ 2 ಮತ್ತು ಟೈಪ್ 3 ವೈರಸ್‌ಗಳು ಈಗಾಗಲೇ ನಿರ್ಮೂಲನೆಯಾಗಿವೆ. ಆದರೆ ಟೈಪ್ 1 ವೈರಸ್ ಪ್ರಕರಣಗಳು ಇಂದಿಗೂ ನೆರೆರಾಷ್ಟ್ರಗಳಲ್ಲಿ ಕಂಡುಬರುತ್ತಿರುವುದರಿಂದ ನಾವು ಸದಾ ಜಾಗರೂಕರಾಗಿರಬೇಕು ಎಂದು ಹೇಳಿದ್ದಾರೆ.

ವಲಸೆ ಪ್ರದೇಶಗಳಿಗೆ ಹೆಚ್ಚಿನ ಆದ್ಯತೆ:

ವಲಸೆ ಪ್ರದೇಶಗಳು, ಕೈಗಾರಿಕಾ ವಲಯಗಳು, ಇಟ್ಟಿಗೆ ಭಟ್ಟಿಗಳು, ಅಲೆಮಾರಿ ಕುರಿ ಸಾಕಾಣಿಕೆದಾರರ ತಾತ್ಕಾಲಿಕ ನಿವಾಸಿಗಳು, ತೋಟದ ಮನೆಗಳು ಹಾಗೂ ಕಟ್ಟಡ ನಿರ್ಮಾಣದ ಸ್ಥಳಗಳಲ್ಲಿರುವ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಲು ಕ್ರಿಯಾ ಯೋಜನೆಯಲ್ಲಿ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಡಾ. ಹನುಮಂತಪ್ಪ ತಿಳಿಸಿದ್ದಾರೆ.

ಪಾಲಕರಲ್ಲಿ ಮನವಿ:

ಜಿಲ್ಲೆಯ ಎಲ್ಲಾ ಸಾರ್ವಜನಿಕರು ಹಾಗೂ ಪಾಲಕರು ತಮ್ಮ ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ತಪ್ಪದೇ ಹತ್ತಿರದ ಪೋಲಿಯೋ ಬೂತ್‌ಗಳಿಗೆ ಕರೆತಂದು, ಜೂನ್ 28, 2026ರ ಭಾನುವಾರದಂದು 'ಎರಡು ಹನಿ' ಪೋಲಿಯೋ ಲಸಿಕೆ ಕೊಡಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

# ರಸ್ತೆ ಕಾಮಗಾರಿ ವಿಳಂಬ ಖಂಡಿಸಿ ಪ್ರತಿಭಟನೆ



**ಗಂಗಾವತಿ:** ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಕಿಲ್ಲಾ ಏರಿಯಾದಲ್ಲಿರುವ ಚಂದ್ರಹಾಸ ಚಿತ್ರಮಂದಿರ ಮುಂಭಾಗದ ಮುಖ್ಯ ರಸ್ತೆ ಬಂದು ಕಾಮಗಾರಿ ಕಳೆದ 8 ತಿಂಗಳಿನಿಂದ ನಡೆಯುತ್ತಿದ್ದು, ಮಧ್ಯದಲ್ಲೇ ಸ್ಥಗಿತಗೊಂಡಿರುವುದರಿಂದ ಸ್ಥಳೀಯ ನಿವಾಸಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಸ್ತೆ ಕಾಮಗಾರಿ ವಿಳಂಬದಿಂದ ಸಾರ್ವಜನಿಕರಿಗೆ ಸಂಚಾರ ತೊಂದರೆ ಉಂಟಾಗುತ್ತಿದ್ದು, ಧೂಳು ಹಾಗೂ ಕೆಸರಿನಿಂದ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ನಿವಾಸಿಗಳು ಆರೋಪಿಸಿದರು.

ಈ ಹಿನ್ನೆಲೆಯಲ್ಲಿ ಕಿಲ್ಲಾ ಏರಿಯಾದ ಮಹಿಳೆಯರು ಮಹಾವೀರ ವೃತ್ತದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು. ಕಾಮಗಾರಿಯನ್ನು ಶೀಘ್ರಪೂರ್ಣಗೊಳಿಸಿ ಸಾರ್ವಜನಿಕರ ಸಮಸ್ಯೆಗೆ ಪರಿಹಾರ ಕಲ್ಪಿಸಬೇಕೆಂದು ಸಂಬಂಧಿತ ಅಧಿಕಾರಿಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ಮಾಧ್ಯಮದ ಮೂಲಕ ಮನವಿ ಮಾಡಿಕೊಂಡರು.

ಪ್ರತಿಭಟನಾಕಾರರು ಮಾತನಾಡಿ, ಹಲವು ತಿಂಗಳುಗಳಿಂದ ರಸ್ತೆ ಕಾಮಗಾರಿ ಅಪೂರ್ಣವಾಗಿದ್ದು, ಶಾಲಾ ಮಕ್ಕಳು, ವೃದ್ಧರು ಹಾಗೂ ವಾಹನ ಸವಾರರು ತೊಂದರೆ ಅನುಭವಿಸುತ್ತಿದ್ದಾರೆ. ಆದ್ದರಿಂದ ಕೂಡಲೇ ಕಾಮಗಾರಿ ಪುನರಾರಂಭಿಸಿ ಬೇಗನೆ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಸ್ಥಳೀಯ ಮಹಿಳೆಯರು, ನಿವಾಸಿಗಳು ಹಾಗೂ ಮುಖಂಡರು ಭಾಗವಹಿಸಿದ್ದರು.

# ಆರೋಗ್ಯವೇ ಮಹಾಭಾಗ್ಯ

**ಹಗರಿಬೊಮ್ಮನಹಳ್ಳಿ:** ಪಟ್ಟಣದ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದ ಆವರಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಇಂದು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಪಟ್ಟಣದ ಜನಪ್ರಿಯ ವೈದ್ಯರಾದ ಡಾ.ಸಿದ್ದೇಶ ಶಿವಸ್ವಾಮಿಯವರು ಹಾಗೂ ಅಧ್ಯಕ್ಷರಾಗಿ ಹಗರಿಬೊಮ್ಮನಹಳ್ಳಿ ರಾಷ್ಟ್ರೋತ್ಥಾನ ಸಂಸ್ಥೆಯ ಮುಖ್ಯ ಕಾರ್ಯದರ್ಶಿಗಳಾದ ಬಿ ಬಸವನಗೌಡರು ಆಗಮಿಸಿದ್ದರು.

ಕಾರ್ಯಕ್ರಮದ ಮುಖ್ಯ ವಕ್ತಾರರಾಗಿ ಭಾಗವಹಿಸಿದ್ದ ಡಾ. ಸಿದ್ದೇಶ್ ಅವರು ಮಾತನಾಡಿ "ಸದೃಢವಾದ ದೇಹ ಮನಸ್ಸು ನಮ್ಮದಾಗಿರಲು ನಮ್ಮ ಜೀವನ ಶೈಲಿಯಲ್ಲಿ ಯೋಗಾಸನವನ್ನು ಅಳವಡಿಸಿಕೊಳ್ಳಬೇಕು. ಆರೋಗ್ಯವೇ ಮಹಾಭಾಗ್ಯ. ಯೋಗ ಅಭ್ಯಾಸದಿಂದ ಸ್ಮರಣ ಶಕ್ತಿ ಹೆಚ್ಚಿಸಿಕೊಂಡು ಸಂಸ್ಕಾರಯುತ ಶಿಕ್ಷಣ ಪಡೆಯಬಹುದು" ಎಂದರು.

ನಂತರ ಬಸವನಗೌಡರು ಮಾತನಾಡಿ "ಶರೀರ ಮತ್ತು ಮನಸ್ಸನ್ನು ನಿಗ್ರಹಿಸಿದರೆ ಅಭ್ಯಾಸದಲ್ಲಿ ಏಕಾಗ್ರತೆ ಹೊಂದಲು ಸಾಧ್ಯ ಆದ್ದರಿಂದ ನಿರ್ದಿಷ್ಟ ಆಸನಗಳು, ಪ್ರಾಣಾಯಾಮ, ಧ್ಯಾನ ಮತ್ತು ಒತ್ತಡ ರಹಿತ, ತಂತ್ರಗಳ ಮೂಲಕ ಆರೋಗ್ಯಯುತ ಜೀವನ ರೂಢಿಸಿಕೊಳ್ಳಿ" ಎಂದು ಸಲಹೆ ನೀಡಿದರು. ಯೋಗದ ವಿಶೇಷ ಪಟುಗಳಿಂದ ಯೋಗ ಪ್ರದರ್ಶನ ನೀಡಲಾಯಿತು. ನಂತರ ಎಲ್ಲಾ ಪ್ರಕಲ್ಪದ ವಿದ್ಯಾರ್ಥಿಗಳಿಗೆ ಸಾಮೂಹಿಕ ಸೂರ್ಯನಮಸ್ಕಾರಾಸನಗಳನ್ನು ಮಾಡಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಸಹಕಾರ್ಯದರ್ಶಿಗಳಾದ ದುರ್ಗಣ್ಣ ರವರು, ರಾಷ್ಟ್ರೋತ್ಥಾನ ಎಲ್ಲ ಪ್ರಕಲ್ಪದ ಮುಖ್ಯಸ್ಥರು, ಎಲ್ಲ ಶಿಕ್ಷಕ ವೃಂದದವರು, ಪಾಲಕ ಪೋಷಕರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

# ರೋಗ ಬರುವ ಮುನ್ನ ಯೋಗಮಾಡಿ: ಡಾ. ಕೌಜಲಗಿ




**ಬೀದರ್:** ರೋಗಗಳು ಬರುವ ಮುನ್ನವೇ ಯೋಗ ಮಾಡಿದರೆ ದೀರ್ಘಕಾಲೀನ ಕಾಯಿಲೆಗಳಿಂದ ವ್ಯಕ್ತಿ ದೂರ ಇರಬಹುದೆಂದು ಬ್ರಿಮ್ಸ್ ನಿರ್ದೇಶಕಿ ಡಾ. ಶಾಂತಲಾ ಕೌಜಲಗಿ ತಿಳಿಸಿದರು.

ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೀದರ, ಬ್ರಿಮ್ಸ್ ಕನ್ನಡ ಸಂಘ ಇವರ ಸಹಯೋಗದಲ್ಲಿ ಆಯೋಜಿಸಿದ 12ನೇ ಅಂತ ರಾಷ್ಟ್ರೀಯ ಯೋಗ ದಿನಾಚರಣೆಯನ್ನು ಬ್ರಿಮ್ಸ್ ನಿರ್ದೇಶಕಿ ಡಾ.ಶಾಂತಲಾ ಕೌಜಲಗಿ ಚಾಲನೆ ನೀಡಿ ಮಾತನಾಡಿದರು.

ಹಲವರು ಬಟ್ಟೆ, ಪಾದರಕ್ಷೆ, ಮೊಬೈಲ್ ಮತ್ತು ಇನ್ನಿತರ ವಸ್ತುಗಳ ಬಗ್ಗೆ ಕಾಳಜಿ ವಹಿಸುತ್ತಾರೆ. ಆದರೆ ಆರೋಗ್ಯದ ಬಗ್ಗೆ ನಿಷ್ಕಾಳಜಿ ತೋರುತ್ತಾರೆ. ಯಾವಾಗ ಶರೀರದಲ್ಲಿ ರೋಗಗಳು ತುಂಬಿಕೊಳ್ಳುತ್ತವೆಯೋ ಆವಾಗ ಅವರಿಗೆ ಯೋಗ, ಪ್ರಾಣಾಯಾಮ, ವಾಕಿಂಗ್ ನೆನಪಾಗುತ್ತವೆ. ಈ ರೀತಿ ಮಾಡದೆ ಜೀವನದಲ್ಲಿ ಸದಾ ಆರೋಗ್ಯವಂತರಾಗಿ, ಉತ್ಸಾಹದಿಂದ ಬದುಕಬೇಕಾದರೆ ದಿನನಿತ್ಯ ಯೋಗ ಮಾಡಬೇಕೆಂದು ಸಲಹೆ ನೀಡಿದರು. ಸಮುದಾಯ ವೈದ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಪಲ್ಲವಿ ಕೇಸರಿ ಮಾತನಾಡಿ ಯೋಗ ವ್ಯಕ್ತಿಯ ದೈನಂದಿನ ಭಾಗವಾಗಬೇಕು. ಒಂದ್ಹೊತ್ತು ಊಟ ಮರೆತರೂ ಯೋಗ ಮಾಡುವುದನ್ನು ಮರೆಯಲೇಬಾರದು ಎಂದರು.

ಬ್ರಿಮ್ಸ್ ಕನ್ನಡ ಸಂಘದ ಸಂಯೋಜಕ ಡಾ. ರಾಜಕುಮಾರ ಹೆಬ್ಬಾಳೆ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿ ಬ್ರಿಮ್ಸ್ ನಲ್ಲಿ ಎಲ್ಲಾ ರೀತಿಯ ಸಾಮಾಜಿಕ, ಶಾರೀರಿಕ, ಮಾನಸಿಕ, ನೈತಿಕ ಮತ್ತು ನಾಡು ನುಡಿಗಳ ಬಗ್ಗೆ ಕಾರ್ಯಕ್ರಮ ಆಯೋಜಿಸಲು ನಿರ್ದೇಶಕರಿಂದ ಸಹಕಾರ ಸಿಗುತ್ತಿದೆ. ಯೋಗದಿಂದ ನಿರೋಗಿಯಾಗಲು ಕರೆ ನೀಡಿದರು.

ಇದೇ ವೇಳೆ ಜೀವ ರಸಾಯನಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಶಂಶೋದ್ದೀನ್ ಉಪಸ್ಥಿತರಿದ್ದರು. ಜಿಲ್ಲೆಯ ಪ್ರಸಿದ್ಧ ಯೋಗ ಶಿಕ್ಷಕರಾದ ಯೋಗೇಂದ್ರ ಯದಲಾಪುರೆ ಯೋಗ ತರಬೇತಿ ನಡೆಸಿಕೊಟ್ಟರು. ಡಾ. ದೇವ ನಿರೂಪಿಸಿದರು. ಅಮೋಲ್ ಕಾಂಬ್ಳೆ ವಂದಿಸಿದರು. ಬ್ರಿಮ್ಸ್ ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಇತರೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಎಣ್ಣೆಕಾಳು ಸಂಸ್ಕರಣಾ ಘಟಕ ಸ್ಥಾಪನೆಗೆ ಅರ್ಜಿ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ದೇಶದಲ್ಲಿ ಎಣ್ಣೆ ಕಾಳು ಬೆಳೆಗಳ ಕ್ಷೇತ್ರ ವಿಸ್ತರಣೆ, ಉತ್ಪಾದನೆ ಹಾಗೂ ಇಳುವರಿ ಹೆಚ್ಚಿಸುವ ಮೂಲಕ ಖಾದ್ಯತೈಲಗಳ ಆತ್ಮನಿರ್ಭರತೆ ಸಾಧಿಸುವ ಉದ್ದೇಶದಿಂದ ಕೇಂದ್ರ ಸರಕಾರವು 2024-25 ರಿಂದ 2023-31 ವರೆಗೆ ರಾಷ್ಟ್ರೀಯ ಖಾದ್ಯತೈಲ ಅಭಿಯಾನ, ಎಣ್ಣೆಕಾಳು ಯೋಜನೆಯನ್ನು ಜಾರಿಗೊಳಿಸಿದೆ.

ಈ ಯೋಜನೆಯಡಿ ರಾಜ್ಯ, ಜಿಲ್ಲೆ ಹಾಗೂ ಕ್ಷೇತ್ರ ಮಟ್ಟದಲ್ಲಿ ಎಣ್ಣೆಕಾಳು ಬೆಳೆಗಳಾದ ಸೂರ್ಯಕಾಂತಿ, ಸೋಯಾ ಅವರೆ, ಎಳ್ಳು ಹಾಗೂ ಶೇಂಗಾ ಬೆಳೆಗಳ ಕ್ಷೇತ್ರ, ಉತ್ಪಾದನೆ ಮತ್ತು ಇಳುವರಿ ಹೆಚ್ಚಿಸುವುದು, ರೈತರ ಆದಾಯ ದ್ವಿಗುಣಗೊಳಿಸುವುದು ಹಾಗೂ ಖಾದ್ಯತೈಲಗಳ ಆಮದು ಅವಲಂಬನೆಯನ್ನು ಕಡಿಮೆ ಮಾಡಿ ರಫ್ತು ಪ್ರಮಾಣವನ್ನು ಹೆಚ್ಚಿಸುವುದು ಮುಖ್ಯ ಗುರಿಯಾಗಿದೆ.

ಯೋಜನೆಯಡಿ ಅನುಮೋದಿತ ಯೋಜನಾ ವೆಚ್ಚದ ಶೇ.33 ರಷ್ಟು ಅಥವಾ ಗರಿಷ್ಟ 9.99 ಲಕ್ಷ ರೂ.ಗಳವರೆಗೆ ಸಹಾಯಧನ ನೀಡಲಾಗುತ್ತದೆ. ಕಟ್ಟಡ ನಿರ್ಮಾಣ ವೆಚ್ಚ ಹಾಗೂ ಭೂಮಿ ಬಾಡಿಗೆ ವೆಚ್ಚವನ್ನು ಸಹಾಯಧನಕ್ಕೆ ಪರಿಗಣಿಸಲಾಗುತ್ತದೆ. 10 ಟನ್ ಸಾಮರ್ಥ್ಯದ ತೈಲ ತೆಗೆಯುವ ಮತ್ತು ಎಣ್ಣೆಕಾಳು ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಜಿಲ್ಲೆಗೆ ಗುರಿ ಹಂಚಿಕೆ ಮಾಡಲಾಗಿದೆ.

ಆಸಕ್ತರು ತಮ್ಮ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಜೂನ್ 30 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಸಂಗೀತ ದಿನಾಚರಣೆ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ನಗರದ ಬಸವೇಶ್ವರ ಕಲಾ ಮಹಾವಿದ್ಯಾಲಯದ ಸಂಗೀತ ವಿಭಾಗ ಈ ಭಾಗದ ಸಂಗೀತ ವಿದ್ಯಾರ್ಥಿಗಳಿಗೆ ಕಾಶಿಯಿದ್ದಂತೆ, ಹೆಸರಾಂತ ಸಂಗೀತ ಕಲಾವಿದರನ್ನು ನಾಡಿಗೆ ನೀಡಿದ ಕೀರ್ತಿ ಬಸವೇಶ್ವರ ಕಲಾ ಮಹಾವಿದ್ಯಾಲಯಕ್ಕೆ ಸಲ್ಲುತ್ತದೆ ಎಂದು ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ.ಎಸ್.ಆರ್.ಮುಗನೂರಮಠ ಹೇಳಿದರು.

ಮಹಾವಿದ್ಯಾಲಯದ ಐಕ್ಯೂಎಸಿ, ಹಿಂದೂಸ್ತಾನಿ ಸಂಗೀತ ವಿಭಾಗ, ಸಾಂಸ್ಕೃತಿಕ ಸಮಿತಿ ಹಾಗೂ ಎನ್‌ಎಸ್‌ಎಸ್ ಘಟಕದ ಸಂಯುಕ್ತ ಆಶ್ರಯದಲ್ಲಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಅಂತರರಾಷ್ಟ್ರೀಯ ಯೋಗ ದಿನ ಹಾಗೂ ವಿಶ್ವ ಸಂಗೀತ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಾಯನ,ತಬಲಾ ಹಾಗೂ ಸಿತಾರ್ ವಿಭಾಗಗಳನ್ನು ಒಳಗೊಂಡಂತೆ ಹಿಂದೂಸ್ತಾನಿ ಸಂಗೀತವನ್ನು ಶಾಸ್ತ್ರೋಕ್ತವಾಗಿ ಬೋಧಿಸುವ ಏಕೈಕ ಮಹಾವಿದ್ಯಾಲಯ ಇದಾಗಿದ್ದು, ಇಲ್ಲಿ ಕಲಿತ ಅನೇಕ ವಿದ್ಯಾರ್ಥಿಗಳು ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿ ಶಿಕ್ಷಕರಾಗಿ ಹಾಗೂ ಕಲಾವಿದರಾಗಿ ತಮ್ಮ ಬದುಕನ್ನು ರೂಪಿಸಿಕೊಂಡಿದ್ದಾರೆ. ರಾಜ್ಯ ಹಾಗೂ ರಾಷ್ಟ್ರ ಮಟ್ಟಕ್ಕೆ ಸಾವಿರಾರು ಸಂಗೀತ ಕಲಾವಿದರನ್ನು ನೀಡಿದ ಹೆಗ್ಗಳಿಕೆ ಈ ಮಹಾವಿದ್ಯಾಲಯಕ್ಕೆ ಸಲ್ಲುತ್ತದೆ ಎಂದು ತಿಳಿಸಿದರು. ಮುಖ್ಯ ಅತಿಥಿಯಾಗಿ ಮಾತನಾಡಿದ ಹಿಂದೂಸ್ತಾನಿ ಸಂಗೀತ ವಿಭಾಗದ ಮುಖ್ಯಸ್ಥ ಡಾ.ಕೆ.ವಿ.ಮಠ, ಯೋಗ ಮತ್ತು ಸಂಗೀತ ಎರಡೂ ಮನಸ್ಸು ಹಾಗೂ ದೇಹದ ಸಮತೋಲನಕ್ಕೆ ಪೂರಕವಾಗಿದ್ದು, ಇಂದಿನ ಯುವಜನತೆ ಈ ಎರಡನ್ನೂ ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಡಾ.ಆರ್.ಎಂ.ಬೆನ್ನೂರ, ಡಾ.ವಿರುಪಾಕ್ಷಿ ಎನ್.ಬಿ., ಡಾ.ಆರ್.ಆರ್. ಅರಶಿನಗೋಡಿ ಹಾಗೂ ಕುಮಾರಿ ಎಸ್.ಎಸ್.ಜೋರಾಪುರ ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಯೋಗ ಪ್ರದರ್ಶನ ನೀಡಿದರೆ, ಹಿಂದೂಸ್ತಾನಿ ಸಂಗೀತ ವಿಭಾಗದ ವಿದ್ಯಾರ್ಥಿಗಳು ಸಂಗೀತ ಕಾರ್ಯಕ್ರಮವನ್ನು ಪ್ರಸ್ತುತಪಡಿಸಿ ಗಮನ ಸೆಳೆದರು.

# ಖಾಸಗೀಕರಣ ವಿರೋಧಿಸಿ ರೈತ ಸಂಘದ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**



ರಾಜ್ಯದಲ್ಲಿ ವಿದ್ಯುತ್ ಖಾಸಗೀಕರಣ ನೀತಿಯನ್ನು ವಿರೋಧಿಸಿ ತಾಲೂಕು ರೈತ ಸಂಘದ ನೇತೃತ್ವದಲ್ಲಿ ಸೋಮವಾರ ಪಟ್ಟಣದಲ್ಲಿ ಉಪ ತಹಸೀಲ್ದಾರ್ ಶಿವಕುಮಾರ್ ಗೌಡ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ರೈತ ಸಂಘದ ಸಂಚಾಲಕ ಶಿಗೇನಹಳ್ಳಿ ಬಸವರಾಜ್, ವಿದ್ಯುತ್ ಖಾಸಗೀಕರಣ ಜಾರಿಯಾದರೆ ರೈತರಿಗೆ ದೊರೆಯುತ್ತಿರುವ ಸೌಲಭ್ಯಗಳು ಕಡಿಮೆಯಾಗುವ ಸಾಧ್ಯತೆ ಇದೆ. ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆಯನ್ನು ಮುಂದುವರಿಸಿ, ಗ್ರಾಮೀಣ ಪ್ರದೇಶಗಳಲ್ಲಿ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಒದಗಿಸಬೇಕು ಎಂದು ಒತ್ತಾಯಿಸಿದರು.

ತಾಲೂಕು ರೈತ ಸಂಘದ ಮುಖಂಡ ಟಿ. ಕೊಟ್ರೇಶ್ ಮಾತನಾಡಿ, ವಿದ್ಯುತ್ ಕ್ಷೇತ್ರವನ್ನು ಖಾಸಗಿ ಕಂಪನಿಗಳಿಗೆ ಒಪ್ಪಿಸುವುದರಿಂದ ರೈತರು ಹಾಗೂ ಸಾಮಾನ್ಯ ಗ್ರಾಹಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಲಿದೆ. ವಿದ್ಯುತ್ ಇಲಾಖೆಯ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿ, ಹಳೆಯ ಟ್ರಾನ್ಸ್‌ಫಾರ್ಮರ್‌ಗಳು ಸೇರಿದಂತೆ ವಿದ್ಯುತ್ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಬೇಕು ಎಂದು ಆಗ್ರಹಿಸಿದರು. ಮನವಿಯಲ್ಲಿ ವಿದ್ಯುತ್ ಖಾಸಗೀಕರಣ ನೀತಿಯನ್ನು ಹಿಂಪಡೆಯುವುದು, ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಯೋಜನೆಯನ್ನು ಮುಂದುವರಿಸುವುದು, ಗ್ರಾಮೀಣ ಭಾಗಗಳಲ್ಲಿ ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಪ್ರಸ್ತಾಪಿಸಲಾಯಿತು.

# ಯೋಗ ಫಾರ್ ಹೆಲ್ದಿ ಏಜಿಂಗ್

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**




ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಈ ವರ್ಷದ "ಯೋಗ ಫಾರ್ ಹೆಲ್ದಿ ಏಜಿಂಗ್" (Yoga ForHealthyAgeing) ಎಂಬ ಘೋಷವಾಕ್ಯದೊಂದಿಗೆ ಶಾಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮವು ಬೆಳಿಗ್ಗೆ 8:00 ಗಂಟೆಗೆ ಶಾಲಾ ಆವರಣದಲ್ಲಿ ಪ್ರಾರಂಭವಾಯಿತು. ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಹಾಗೂ ಶಿಕ್ಷಕ-ಶಿಕ್ಷಕಿಯರು ಯೋಗ ಸಮವಸ್ತ್ರದಲ್ಲಿ ಆಗಮಿಸಿ, ಶಿಸ್ತುಬದ್ಧವಾಗಿ ಸಾಲಾಗಿ ನಿಂತು ವಿವಿಧ ಯೋಗಾಸನಗಳು, ಪ್ರಾಣಾಯಾಮಗಳು ಹಾಗೂ ಧ್ಯಾನಾಭ್ಯಾಸಗಳನ್ನು ನೆರವೇರಿಸಿದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಪ್ರಿಯಾ ಕುಮಾರಿ ಅವರು ಸಹ ವಿದ್ಯಾರ್ಥಿಗಳು ಹಾಗೂ ಶಿಕ್ಷಕಿಯರೊಂದಿಗೆ ಯೋಗಾಭ್ಯಾಸದಲ್ಲಿ ಪಾಲ್ಗೊಂಡರು. ಯೋಗ ತರಬೇತಿದಾರರ ಮಾರ್ಗದರ್ಶನದಲ್ಲಿ ಹಲವು ಯೋಗಾಸನಗಳನ್ನು ಅಭ್ಯಾಸ ಮಾಡಿದ ಬಳಿಕ ಮಾತನಾಡಿದ ಅವರು, ಯೋಗವು ಆರೋಗ್ಯಕರ ಜೀವನಕ್ಕೆ ಅತ್ಯಂತ ಅವಶ್ಯಕವಾಗಿದ್ದು, ಇಂದಿನ ಜೀವನಶೈಲಿಯಲ್ಲಿ ಹೆಚ್ಚುತ್ತಿರುವ ಆರೋಗ್ಯ ಸಮಸ್ಯೆಗಳನ್ನು ದೂರ ಮಾಡಲು ಯೋಗ ಮತ್ತು ಸರಿಯಾದ ಉಸಿರಾಟ ಕ್ರಮಗಳು ಸಹಕಾರಿಯಾಗುತ್ತವೆ ಎಂದು ತಿಳಿಸಿದರು. ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಪ್ರತಿಯೊಬ್ಬರೂ ಯೋಗವನ್ನು ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

# ಯೋಗ ನಿತ್ಯದ ಜೀವನದ ಭಾಗವಾಗಲಿ: ಬಸವಲಿಂಗ ಪಟ್ಟದ್ದೇವರು






• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಸ್ವಸ್ಥ, ಸುಂದರ ಶರೀರಕ್ಕೆ ಅಗತ್ಯವಾಗಿರುವ ಯೋಗ ಪ್ರತಿಯೊಬ್ಬರ ಜೀವನದ ನಿತ್ಯದ ಭಾಗವಾಗಬೇಕು ಎಂದು ಹಿರೇಮಠದ ಹಿರಿಯ ಸ್ವಾಮೀಜಿ ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಚಯದಲ್ಲಿ ಹಮ್ಮಿಕೊಂಡಿದ್ದ ಯೋಗ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಯೋಗ ಜಗತ್ತಿಗೆ ಭಾರತ ಕೊಟ್ಟಿರುವ ಅತ್ಯದ್ಭುತ ಕೊಡುಗೆ. ಪ್ರತಿನಿತ್ಯ ಯೋಗಕ್ಕಾಗಿ ಬೆಳಿಗ್ಗೆ ಮತ್ತು ಸಂಜೆ ಕೆಲ ಸಮಯ ಮೀಸಲಿಡುವುದರಿಂದ ರೋಗರಹಿತ ಶರೀರವನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು. ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ; ಇದು ಭಾರತದ ಪ್ರಾಚೀನ ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದೆ. ಇದು ದೇಹ, ಮನಸ್ಸು ಮತ್ತು ಆತ್ಮದ ನಡುವಿನ ಸಮತೋಲನವನ್ನು ಸಾಧಿಸಲು ಸಹಾಯ ಮಾಡುತ್ತದೆ. ಆಧುನಿಕ ಜೀವನಶೈಲಿಯ ಒತ್ತಡದಿಂದ ಮುಕ್ತಿ ಪಡೆಯಲು ಯೋಗವು ಅತ್ಯುತ್ತಮ ಮಾರ್ಗವಾಗಿದೆ ಎಂದು ಹೇಳಿದರು. ಯೋಗ ದಿನವು ದೈಹಿಕ ಮತ್ತು ಮಾನಸಿಕ ಆರೋಗ್ಯದ ಮಹತ್ವ ಸಾರುತ್ತದೆ. ಯೋಗದ ಮೂಲಕ ಆರೋಗ್ಯ ವೃದ್ಧಿಸಿಕೊಂಡು ಉತ್ತಮ ಯೋಗಕ್ಷೇಮವನ್ನು ಕಾಪಾಡಿಕೊಳ್ಳುವುದು ಈ ಆಚರಣೆಯ ಮುಖ್ಯ ಉದ್ದೇಶವಾಗಿದೆ ಎಂದರು. ಯೋಗಗುರು ಮಹಾಲಿಂಗ ಸ್ವಾಮೀಜಿ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ, ವೈದ್ಯರಾದ ನಾಗಮ್ಮ, ಸುಮಾಜಂಲಿ ಮೋರ್ಗೆ, ದಿವ್ಯಾಂಜಲಿ ಸೇರಿದಂತೆ ಇತರರು ಇದ್ದರು.

# ಪಂಚಗ್ಯಾರಂಟಿ ಯೋಜನೆ ಅರ್ಹರಿಗೆ ಮಾತ್ರ ಸಿಗುವಂತಾಗಲಿ




• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ಮುಂದುವರೆದಿದ್ದು, ರಾಜ್ಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರಶಂಸೆಗೆ ಪಾತ್ರವಾಗಿ ಗಿನ್ನಿಸ್ ರೆಕಾರ್ಡ್ಸ್‌ನಲ್ಲಿ ದಾಖಲಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಅವರು ಹೇಳಿದರು.

ಬೀದರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ರಂದು ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇಶದಲ್ಲಿ ಅರ್ಥಿಕ ತಜ್ಞರು ತಿಳಿಸಿದಂತೆ ಇಡೀ ಭಾರತ ದೇಶದ ಅರ್ಥಿಕತೆ ತಲಾ ಆದಾಯವು ಹೆಚ್ಚಿಸಿದ ಈ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಂಡಿವೆ ಅದರಂತೆ ಬೀದರ ಜಿಲ್ಲೆಯಲ್ಲಿಯೂ ಕೂಡ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಂಡಿವೆ ಆದರೆ ಗೃಹಲಕ್ಷ್ಮಿ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಸುಮಾರು 114 ಕೋಟಿ ರೂ.ಗಳಿಗಿಂತಲ್ಲೂ ಹೆಚ್ಚು ಮೃತಪಟ್ಟವರ ಖಾತೆಗೆ ಹಣ ವರ್ಗಾವಣೆಯಾಗಿದ್ದು, ಈಗಾಗಲೇ ಅಂತಹ ಖಾತೆಗಳನ್ನು ಗುರುತಿಸಿ 14 ಕೋಟಿ ರೂ.ಗಳನ್ನು ವಾಪಸ್ಸು ಪಡೆಯಲಾಗಿದೆ. ಪಂಚ ಗ್ಯಾರಂಟಿ ಯೋಜನೆಗಳು ನೀಜವಾದ ಫಲಾನುಭವಿಗಳಿಗೆ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

> ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಯಶ್ವಸಿಯಾಗಿ ಜಾರಿಯಲ್ಲಿದ್ದು, ಅರ್ಹ ಫಲಾನುಭವಿಗಳಿಗೆ ಗುರುತಿಸುವ ಕಾರ್ಯ ನಡೆಯುತ್ತಿದ್ದು, ಶಿಘ್ರವಾಗಿ ಪರಿಷ್ಕರಣೆ ಮಾಡಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಸಿಗುವಂತೆ ನೋಡಿಕೊಳ್ಳಲಾಗುವುದು.
> –ಗಿರೀಶ್ ಬದೋಲೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ

ಈಗಾಗಲೇ ಯೋಜನೆಗಳ ಪರಿಷ್ಕರಣೆ ಕಾರ್ಯ ನಡೆದಿದ್ದು, ಈ ಜಿಲ್ಲೆಯಲ್ಲಿಯೂ ಕೂಡ ಪರಿಷ್ಕರಣೆ ಕಾರ್ಯ ಚುರುಕುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಅದರಂತೆ ಈಗಾಗಲೇ 5,331 ದೂರುಗಳು ದಾಖಲಾಗಿದ್ದು, ಅದರಲ್ಲಿ 4,943 ಫಲಾನುಭವಿಗಳಿಗೆ ಗುರುತಿಸಿ ಸೇವಾ ಸಿಂಧು ಪೋರ್ಟಲ್‌ನಿಂದ ಡಿಲಿಟ್ ಮಾಡಿಲಾಗಿದೆ. ಜಿಲ್ಲೆಯಲ್ಲಿ ಅನರ್ಹ ಫಲಾನುಭವಿಗಳ ಖಾತೆಗೆ 12 ಕೋಟಿ ರೂಗಳು ಜಾಮೆಯಾಗಿದ್ದು, ಅದರಲ್ಲಿ 11 ಲಕ್ಷ ರೂ.ಗಳನ್ನು ವಾಪಸ್ಸು ಪಡೆಯಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಬ್ಯಾಂಕ್ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಅನರ್ಹ ಫಲಾನುಭವಿಗಳ ಖಾತೆ ಜಮೆಯಾದ ಹಣವನ್ನು ವಾಪಸ್ಸು ಪಡೆಯುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ಕೆಲವೆಡೆ ಗೃಹ ಬಳಕೆ ಮಾತ್ರವಲ್ಲದೇ ವಾಣಿಜ್ಯ ಬಳಕೆ ಮಾಡುತ್ತಿರುವುದು ಕಂಡು ಬಂದಿದೆ ಅಂತಹವರನ್ನು ಗುರುತಿಸಿ ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ಸಿಗುವಂತೆ ಅಧಿಕಾರಿಗಳಿಗೆ ಸೂಚಿಸಿದರು.ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರತಿ ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಪಡಿತರ ಚೀಟಿ ಹೊಂದಿರುವವರ ಮಾಹಿತಿ ಕಲೆ ಹಾಕಿ ಅಂತಹ ಫಲಾನುಭವಿಗಳಿಗೆ ಗುರುತಿಸುವ ಕಾರ್ಯ ಚುರುಕುಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಅಮೃತರಾವ ಚಿಮ್ಮಕೊಡೆ ಮಾತನಾಡಿ, ಜಿಲ್ಲೆಯಲ್ಲಿ ಹೊಸದಾಗಿ ಮೂರು ತಾಲೂಕು ರಚನೆಯಾಗಿದ್ದರಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಹೆಚ್ಚುವರಿ 70 ಬಸ್ಸುಗಳನ್ನು ಶಾಲೆ ಮಕ್ಕಳಿಗೆ ಹಾಗೂ ಸಾರ್ವಜನಿಕ ಅನುಕೂಲಕ್ಕಾಗಿ ನೀಡುವಂತೆ ಅಧ್ಯಕ್ಷರಲ್ಲಿ ಮನವಿ ಮಾಡಿದರು. ಆದಕ್ಕೆ ಅಧ್ಯಕ್ಷರು ಅಧ್ಯತೆ ಮೇರೆಗೆ ಬಸ್‌ಗಳನ್ನು ಈ ಜಿಲ್ಲೆಗೆ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದರು,

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಮಟ್ಟದ ಸದಸ್ಯರು, ತಾಲೂಕು ಮಟ್ಟದ ಅಧ್ಯಕ್ಷರು, ಸದಸ್ಯರು, ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಒಳರೋಗಿ ಮತ್ತು ಹೊರರೋಗಿ ಸೇವೆ



**ತುಮಕೂರು:** NIRAM RIMH ಪ್ಯಾಲಿಯೇಟಿವ್ ಕೇರ್ ಸೆಂಟರ್ ಮತ್ತು ತುಮಕೂರು ಜಿಲ್ಲಾಡಳಿತವು ತುಮಕೂರಿನ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟ್ ಶ್ರೀಮತಿ ಶುಭ ಕಲ್ಯಾಣ್, ಐಎಎಸ್ ಮತ್ತು ತುಮಕೂರು ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಚಂದ್ರಶೇಖರ್ ಜಿ. ಮತ್ತು ಅಜಿತ್ ಐಸಾಕ್ ಫೌಂಡೇಶನ್ ಪ್ರತಿನಿಧಿಗಳ ಸಮ್ಮುಖದಲ್ಲಿ ತಿಳುವಳಿಕೆ ಪತ್ರಕ್ಕೆ (MoU) ಸಹಿ ಹಾಕಿದೆ. ಜಿಲ್ಲೆಯಲ್ಲಿ ಜಾಗೃತಿ, ಸಾಮರ್ಥ್ಯ ವೃದ್ಧಿ ಮತ್ತು ಪ್ಯಾಲಿಯೇಟಿವ್ ಕೇರ್ ಸೇವೆಗಳಿಗೆ ಪ್ರವೇಶವನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಸಹಯೋಗದ ಅವಕಾಶಗಳನ್ನು ಈ ಪಾಲುದಾರಿಕೆ ಅನ್ವೇಷಿಸುತ್ತದೆ.

ತುಮಕೂರಿನ ಸಿರಾ ರಸ್ತೆಯಲ್ಲಿರುವ ಗ್ರಾಮೀಣ ಭಾರತ ಮಿಷನ್ ಆಸ್ಪತ್ರೆ ಕ್ಯಾಂಪಸ್‌ನಲ್ಲಿ ಸ್ಥಾಪಿಸಲಾದ ಅಜಿತ್ ಐಸಾಕ್ ಫೌಂಡೇಶನ್ನ ಯೋಜನೆಯಾದ NIRAM RIMH ಪ್ಯಾಲಿಯೇಟಿವ್ ಕೇರ್ ಸೆಂಟರ್, ಗೃಹ ಆರೈಕೆ, ಒಳರೋಗಿ ಮತ್ತು ಹೊರರೋಗಿ ಸೇವೆಗಳ ಮೂಲಕ ಉಪಶಮನ ಆರೈಕೆಯನ್ನು ಒದಗಿಸುತ್ತದೆ. ಸಾರ್ವಜನಿಕ ಆರೋಗ್ಯ ಮತ್ತು ಉಪಶಮನ ಆರೈಕೆಯಲ್ಲಿ ಜಾಗತಿಕವಾಗಿ ಗುರುತಿಸಲ್ಪಟ್ಟ ನಾಯಕ ಜಾನ್ಸ್ ಹಾಪ್ಕಿನ್ಸ್ ವಿಶ್ವವಿದ್ಯಾಲಯದೊಂದಿಗೆ ಕೇಂದ್ರವು ತಾಂತ್ರಿಕ ಪಾಲುದಾರಿಕೆಯನ್ನು ಹೊಂದಿದೆ. ಪ್ಯಾಲಿಯೇಟಿವ್ ಕೇರ್ ಎನ್ನುವುದು ಗಂಭೀರ, ದೀರ್ಘಕಾಲದ ಅಥವಾ ಮಾರಕ ಕಾಯಿಲೆಯಿಂದ ಬಳಲುತ್ತಿರುವ ಜನರಿಗೆ ರೋಗಲಕ್ಷಣದ ಪರಿಹಾರ, ಸೌಕರ್ಯ ಮತ್ತು ಬೆಂಬಲವನ್ನು ಒದಗಿಸಲು ಪ್ರಯತ್ನಿಸುವ ವಿಶೇಷ ಮತ್ತು ಸಮಗ್ರ ಆರೈಕೆಯ ರೂಪವಾಗಿದೆ.

# ಕೇಂದ್ರ ಕಾರಾಗೃಹದಲ್ಲಿ ಯೋಗ ದಿನಾಚರಣೆ



**ವಿಜಯಪುರ:** ಕಾರಾಗೃಹವು ಕೇವಲ ಬಂದಿಗಳ ಕೇಂದ್ರವಲ್ಲ, ಇದೊಂದು ಸುಧಾರಣಾ ಕೇಂದ್ರವಾಗಿದೆ ಎಂದು ಕಾರಾಗೃಹದ ಅಧೀಕ್ಷಕರಾದ ಮಲ್ಲಿಕಾರ್ಜುನ ಎಸ್. ಮಾಳಿ ಅವರು ಹೇಳಿದರು.ಅವರು ನಗರದ ಕೇಂದ್ರ ಕಾರಾಗೃಹದಲ್ಲಿ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಯೋಗ ದಿನಾಚಾರಣೆಯ ಅಂಗವಾಗಿ ಯೋಗ ತರಬೇತಿ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಂದಿಗಳಲ್ಲಿ ಪರಿವರ್ತನೆ ತರುವ ಪರಿವರ್ತನಾ ನಿಲಯವೂ ಆಗಿದೆ. ದೈನಂದಿನ ಯೋಗಾಭ್ಯಾಸವು ಬಂದಿಗಳ ಪುನರ್ವಸತಿ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಅತ್ಯಂತ ಸಹಕಾರಿಯಾಗಿದ್ದು, ಪ್ರತಿಯೊಬ್ಬರೂ ನಿಯಮಿತವಾಗಿ ಯೋಗಾಭ್ಯಾಸವನ್ನು ರೂಢಿಸಿಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಕಾರಾಗೃಹದಲ್ಲಿ ನಿರಂತರವಾಗಿ ಯೋಗಾಭ್ಯಾಸ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗುವುದು. ಕಾರಾಗೃಹದ ಬಂದಿಗಳನ್ನು ಉತ್ತಮ ನಾಗರೀಕರಾಗಿ ಸಮಾಜದ ಮುಖ್ಯ ವಾಹಿನಿಗೆ ಕಳುಹಿಸಲು ಶ್ರಮಿಸುವುದಾಗಿ ಹೇಳಿದರು. ಆರ್ಟ ಆಫ್ ಲಿವಿಂಗ್ ಶ್ರೀ ಬಿ.ಎಂ. ಪಾಟೀಲ ಗುರೂಜಿ ಮಾತನಾಡಿ, ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯವೃದ್ಧಿಗೆ ಸಹಕಾರಿಯಾಗುವುದರ ಜೊತೆಗೆ ಒತ್ತಡ ನಿವಾರಣೆ, ಏಕಾಗ್ರತೆ ಮತ್ತು ಆತ್ಮವಿಶ್ವಾಸ ಹೆಚ್ಚಿಸಲು ನೆರವಾಗುತ್ತದೆ ಎಂದು ಹೇಳಿದರು. ಬಂದಿಗಳ ಮನಃಪರಿವರ್ತನೆ ಯಾಗಲು ಧನಾತ್ಮಕ ಚಿಂತನೆ ಬೆಳೆಸುವುದು ಹಾಗೂ ಸಿಬ್ಬಂದಿಗಳ ಒತ್ತಡ ನಿರ್ವಹಣೆಯ ಉದ್ದೇಶದಿಂದ ವಿಶೇಷ ಯೋಗ, ಪ್ರಾಣಾಯಾಮ ಮತ್ತು ಧ್ಯಾನ ಏಕಾಗ್ರತೆ, ಮತ್ತು ಆತ್ಮವಿಶ್ವಾಸ ಹೆಚ್ಚಿಸಲು ನೆರವಾಗುತ್ತದೆ. ಉತ್ತಮ, ಸದೃಡ ಆರೋಗ್ಯ ಹೊಂದಲು ಯೋಗ ಸಹಾಯಕಾರಿಯಾಗುತ್ತದೆ ಎಂದರು. ಶಿಕ್ಷಕ ಡಿ.ಎಸ್.ದೀಕ್ಷಿತ ನಿರೂಪಿಸಿದರು. ಸಹಾಯಕ ಅಧೀಕ್ಷಕರಾದ ಅಭಿಜಿತ್ ಜಾಯಕ್ಕನವರ ಸೇರಿದಂತೆ ಮತ್ತಿತರರುಉಪಸ್ಥಿತರಿದ್ದರು.

# ಪೋಷಕರ ಪತ್ತೆಗಾಗಿ ಮನವಿ



**ಬೆಂಗಳೂರು:** ಭೋಗೇಶ್ ಎಂಬ 8 ವರ್ಷದ ಬಾಲಕನನ್ನು ಅನ್ನಪೂರ್ಣಚಾರಿಟೇಬಲ್ ಟ್ರಸ್ಟ್ ಮಕ್ಕಳ ಪಾಲನಾ ಸಂಸ್ಥೆಯಲ್ಲಿ ತಾತ್ಕಾಲಿಕವಾಗಿ ಪುರ್ನವಸತಿಗಾಗಿ ದಾಖಲಾಗಿದೆ.ಆದರೆ ಇದುವರೆಗೆ ಬಾಲಕನ ಪೋಷಕರು ಅಥವಾ ಸಂಬಂಧಿಕರು ಯಾರು ಭೇಟಿ ನೀಡಿರುವುದಿಲ್ಲ. ಬಾಲಕನ ಜನ್ಮ ದಿನಾಂಕ 14–11–2018 ಆಗಿದ್ದು, ತಂದೆ– ಸುಬ್ರಮಣಿ ಮತ್ತು ತಾಯಿ ಶಾಂತಮ್ಮ ಎಂದು ದಾಖಲಾಗಿದೆ. ಬಾಲಕ ತೆಲುಗು ಭಾಷೆಯನ್ನು ಮಾತನಾಡುತ್ತಾನೆ ಹಾಗೂ 2ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಾನೆ. ಬಾಲಕನ ದೈಹಿಕ ಮತ್ತು ಮಾನಸಿಕ ಸ್ಥಿತಿ ಸಾಮಾನ್ಯವಾಗಿದ್ದು, ಎತ್ತರ 114 ಸೆಂ.ಮೀ. ಹಾಗೂ ತೂಕ 18 ಕೆ.ಜಿ. 500 ಗ್ರಾಂ ಇರುತ್ತದೆ.

ಬಾಲಕನ ಪೋಷಕರು ಪತ್ತೆಯಾದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿ,ನಂ.27/17.2ನೇ ಮಹಡಿ, ಅಕ್ಷಯ ಸ್ಕೇರ್, 80 ಅಡಿ ವರ್ತುಲ ರಸ್ತೆ. ಪಾಪರೆಡ್ಡಿಪಾಳ್ಯ. ನಾಗರಬಾವಿ– 2ನೇ ಹಂತ ಬೆಂಗಳೂರು ನಗರ ದಕ್ಷಿಣ( ಕೆಂಗೇರಿ) ಇಲ್ಲಿ ಸಂಪರ್ಕಿಸಬಹುದಾಗಿದೆ.

# ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ, ಜಾಗೃತಿ ಜಾಥಾ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) – 2026ರ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಈ ಜಾಗೃತಿ ಜಾಥಾವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಸಂಕನೂರ ಅವರು ಹೇಳಿದರು.

ಸೋಮವಾರ ನಗರದ ಜಗತ್ ವೃತ್ತದಲ್ಲಿವ ಭಾರತ ಚುನಾವಣಾ ಆಯೋಗ, ಮುಖ್ಯ ಚುನಾವಣಾಧಿಕಾರಿಗಳು ಕರ್ನಾಟಕ, ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ (SVEEP) ಸಮಿತಿ ಕಲಬುರಗಿ ಇವರ ಸಂಯಕ್ತಾಶ್ರಯದಲ್ಲಿ ಆಯೋಜಿಸಿದ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, 2026ರ ಜೂನ್ 30ರಿಂದ ಜುಲೈ 30ರವರೆಗೆ ನಡೆಯಲಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣಾ ಕಾರ್ಯಕ್ರಮದ ಬಗ್ಗೆ ಜನಸಾಮಾನ್ಯರಿಗೆ ಅರಿವು ಮೂಡಿಸುವುದು ಮತ್ತು ಅರ್ಹರಾದ ಪ್ರತಿಯೊಬ್ಬ ವ್ಯಕ್ತಿಯ ಹೆಸರು ಮತದಾರರ ಪಟ್ಟಿಯಲ್ಲಿರುವುದನ್ನು ಖಚಿತಪಡಿಸಿಕೊಳ್ಳುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.



ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ಹಾಗೂ ಅಧ್ಯಕ್ಷರು ಜಿಲ್ಲಾ ಸ್ವೀಪ್ ಸಮಿತಿ ಕಲಬುರಗಿ ರವರು ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ, (S.I.R) ದಿನಾಂಕ: 30–06–2026 ರಿಂದ 29–07–2026 ರವರೆಗೆ ಮತಗಟ್ಟೆ ಮಟ್ಟದ ಅಧಿಕಾರಿ (BLOs) ಗಳಿಂದ ಮನೆ ಮನೆ ಭೇಟಿ ನೀಡಿ Enumeration Form & Declaration Form, (ಗಣತಿ–ದಾರರ ನಮೂನೆಯನ್ನು ದ್ವಿಪ್ರತಿಯಲ್ಲಿ ನೀಡಲು ತಿಳಿಸಿದರು. ಹಾಗೂ ದೋಷರಹಿತ ಮತದಾರರ ಪಟ್ಟಿಗಳು ಪ್ರಜಾಪ್ರಭುತ್ವವನ್ನು ಬಲಪಡಿಸುತ್ತದೆ, ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎಂದು ಮಾತನಾಡಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ತಪ್ಪು ಮಾಹಿತಿಗಳ ಬಗ್ಗೆ ಎಚ್ಚರಿಕೆ ಅಗತ್ಯ. ಈ ಪ್ರಕ್ರಿಯೆಯಲ್ಲಿ ಎಲ್ಲರೂ ಸಕ್ರಿಯವಾಗಿ ಭಾಗವಹಿಸಿ, ತಮ್ಮ ಹೆಸರುಗಳನ್ನು ಪಟ್ಟಿಯಲ್ಲಿ ಸೇರಿಸಿಕೊಳ್ಳಲು ಹಾಗೂ ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಕೊಳ್ಳಲು ತಿಳಿಸಿದರು.

ವಿಶೇಷ ಸಮಗ್ರ ಪರಿಷ್ಕರಣೆ, SPECIAL INTENSIVE REVISION (S.I.R) ಕುರಿತು ಕಲಬುರಗಿ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ಕುರಿತು ಜಿಲ್ಲಾಡಳಿತ ಹಾಗೂ ಜಿಲ್ಲಾಟ ಸ್ವೀಪ್ ಸಮಿತಿ,ಹಾಗೂ ಪ್ರಾದೇಶಿಕ ಜಂಟಿ ನಿರ್ದೇಶಕರು ಕಾಲೇಜು ಶೀಕ್ಷಣ ಇಲಾಖೆ, ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ಕಲಬುರಗಿ ಇವರ ಸಹಯೋಗದೊಂದಿಗೆ ಜಿಲ್ಲೆಯ ಜನರಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ(S.I.R), ಕುರಿತು ಅರಿವು ಮೂಡಿಸಲು ಜಗತ್ ವೃತ್ತದಿಂದ ಅನ್ನಪೂರ್ಣ ಕ್ರಾಸ, ಲಾಹೋಟಿ ಪೇಟ್ರೋಲ್ ಬಂಕದಿಂದ ಜಿಲ್ಲಾಧಿಕಾರಿಯವರ ಕಛೇರಿ ವರೆಗೆ ಕಾಲ್ನಡಿಗೆ ಜಾಥಾ ಹಮ್ಮಿಕೊಳ್ಳಲಾಯಿತು. ದೇಶದಲ್ಲಿ ಇದು ಮೂರನೇ ಹಂತದ ಮತದಾರರ ಪರಿಷ್ಕರಣೆಯಾಗಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಅದರ ಕುರಿತಾದ ಜಾಗೃತಿ ಅಭಿಯಾನದ ಕುರಿತು ವಿದ್ಯಾರ್ಥಿಗಳು ತಮ್ಮ ಕೈಯಲ್ಲಿ ಜಾಗೃತಿ ಫಲಕಗಳನ್ನು ಹಿಡಿದು ಪ್ರದರ್ಶಿಸಿ ಘೋಷಣೆಗಳನ್ನು ಕೂಗಿದರು.

ಈ ಜಾಗೃತಿ ಅಭಿಯಾನದಲ್ಲಿ ಸ್ವೀಪ್ ನೋಡಲ್ ಅಧ್ಯಕ್ಷರು, ಜಿ.ಪಂ. ಯೋಜನಾ ನಿರ್ದೇಶಕ ಜಗದೇವಪ್ಪ, ಪ್ರಾದೇಶಿಕ ಜಂಟಿ ನಿರ್ದೇಶಕರು ಕಾಲೇಜು ಶಿಕ್ಷಣ ಇಲಾಖೆಯೊ ಕಛೇರಿಯ ಅಧಿಕಾರಿ ಸೂರ್ಯಕಾಂತ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ ಅಕ್ಕಣ್ಣ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಚೆನ್ನಪ್ಪ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾನಪ್ಪ ಕಟ್ಟಿಮನಿ, ಎಸ್‌ಎಚ್‌ಜಿ ಮಹಿಳೆಯರು, ಎನ್.ಎಸ್.ಎಸ್ ಸ್ವಯಂಸೇವಕರು, ಬಿ.ಎಲ್.ಒ.ಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು, ಪಾಲ್ಗೊಂಡಿದ್ದರು.

# 12 ಕೋಟಿ ವೆಚ್ಚದ ವಿವಿಧ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ನಗರದ ಸರ್ವಾಂಗೀಣ ಪ್ರಗತಿ ಹಾಗೂ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವ ನಿಟ್ಟಿನಲ್ಲಿ, ಗಂಗಾವತಿ ಕ್ಷೇತ್ರದ ಜನಪ್ರಿಯ ಶಾಸಕರಾದ ಶ್ರೀ ಗಾಲಿ ಜನಾರ್ದನ ರೆಡ್ಡಿ ಅವರು ಇಂದು ನಗರದಲ್ಲಿ ಒಟ್ಟು ₹12 ಕೋಟಿ ಅಂದಾಜು ವೆಚ್ಚದ ವಿವಿಧ ರಸ್ತೆ ಅಭಿವೃದ್ಧಿ ಹಾಗೂ ಡಾಂಬರೀಕರಣ ಕಾಮಗಾರಿಗಳಿಗೆ ಅಧಿಕೃತವಾಗಿ ಚಾಲನೆ ನೀಡಿದರು.

ನಗರದ ಜುಲಾಯಿ ನಗರದಿಂದ ದುರ್ಗಮ್ಮ ಹಳ್ಳದವರೆಗಿನ (ಬೈಪಾಸ್ ರಸ್ತೆ) ರಸ್ತೆ ಅಭಿವೃದ್ಧಿ ಹಾಗೂ ಡಾಂಬರೀಕರಣ ಕಾಮಗಾರಿಗೆ ಅಂದಾಜು ₹2 ಕೋಟಿ ವೆಚ್ಚದಲ್ಲಿ ಹಾಗೂ ಬಸವೇಶ್ವರ ವೃತ್ತದಿಂದ ಸೇವಾಲಾಲ್ ವೃತ್ತದವರೆಗೆ ಮತ್ತು ಸೇವಾಲಾಲ್ ವೃತ್ತದಿಂದ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಯವರೆಗಿನ ರಸ್ತೆ ಅಭಿವೃದ್ಧಿ ಹಾಗೂ ಡಾಂಬರೀಕರಣ ಕಾಮಗಾರಿಗೆ ಅಂದಾಜು ₹10 ಕೋಟಿ ವೆಚ್ಚದ ಯೋಜನೆಗಳಿಗೆ



ಶಾಸಕರು ಭೂಮಿಪೂಜೆ ನೆರವೇರಿಸಿದರು.

ಇದೇ ವೇಳೆ ಕಾಮಗಾರಿ ನಿರ್ವಹಿಸುವ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಶಾಸಕರು, ರಸ್ತೆ ನಿರ್ಮಾಣದಲ್ಲಿ ಯಾವುದೇ ರೀತಿಯ ಗುಣಮಟ್ಟದ ಕೊರತೆಯಾಗದಂತೆ ನಿಗದಿತ ಅವಧಿಯೊಳಗೆ ಕಡ್ಡಾಯವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ನಿರ್ದೇಶಿಸಿದರು.

ಈ ಸಂದರ್ಭದಲ್ಲಿ ನಗರ ಮಂಡಲ ಅಧ್ಯಕ್ಷರಾದ ಚಂದ್ರಶೇಖರ ಹಿರೂರು, ಗ್ರಾಮೀಣ ಮಂಡಲ ಅಧ್ಯಕ್ಷರಾದ ಡಿ ಕೆ ಆಗೋಲಿ, ಮಾಜಿ ನಗರಸಭಾ ಅಧ್ಯಕ್ಷರಾದ ಮೌಲಸಾಬ್, ಜಿಲ್ಲಾ ಉಪಾಧ್ಯಕ್ಷರಾದ ಮನೋಹರಗೌಡ ಹೇರೂರು ಮುಖಂಡರಾದ ಅಮರಜ್ಯೋತಿ ನರಸಪ್ಪ, ಯಮನೂರು ಚೌಡ್ಕಿ, ವೆಂಕಟೇಶ್ ಜಬ್ಬಲಗುಡ್ಡ, ಚನ್ನವೀರನಗೌಡ, ಚನ್ನಪ್ಪ ಮಳಗಿ, ಕಾಶಿನಾಥ ಚಿತ್ರಗಾರ, ರಮೇಶ್ ಹೊಸಮಲಿ, ಬಸವರಾಜ್, ಅರ್ಜುನ್ ನಾಯಕ್, ದೀಪಕ್ ಬಾಂಟೀಯ, ಷಣ್ಮುಖ ನಾಯಕ್, ಟಿ ಜಿ ಬಾಬು, ಶ್ರೀಧರ್, ಪ್ರಸಾದ್, ನೀಲಕಂಠ ಕಟ್ಟಿಮನೆ ಮತ್ತು ನಗರ ಹಾಗೂ ಗ್ರಾಮೀಣ ಮಹಿಳಾ ಮಂಡಲ ಅಧ್ಯಕ್ಷರುಗಳಾದ ಭಾರತಿ ಹಗಲೂರು, ಮಾಲ ನಾಗರಾಜ್ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಹಾಗೂ ನಗರಸಭಾ ಆಯುಕ್ತರಾದ ವಿರುಪಾಕ್ಷಮೂರ್ತಿ ಹಾಗೂ ಪಿಡಬ್ಲ್ಯೂಡಿ ಎಇಇ ವಿಶ್ವನಾಥ್ ಉಪಸ್ಥಿತರಿದ್ದರು.

# AVR CINE-MAX ಎಂಬ ಕನ್ನಡ ಓಟಿಟಿಗೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

AVR ಪ್ರೊಡಕ್ಷನ್ಸ್ ಮೂಲಕ ಸದಭಿರುಚಿಯ ಚಿತ್ರಗಳನ್ನು ನಿರ್ಮಾಣ ಮಾಡುತ್ತಿರುವ ಅರವಿಂದ್ ವೆಂಕಟೇಶ್ ರೆಡ್ಡಿ(AVR) ಅವರು ಈಗ "AVR CINE - MAX" ಎಂಬ ಕನ್ನಡ ಓಟಿಟಿಯನ್ನು ಆರಂಭಿಸಿದ್ದಾರೆ. ಹಿರಿಯ ನಟ ನರಸಿಂಹರಾಜು ಅವರ ಮೊಮ್ಮಗ ನಟ, ನಿರ್ದೇಶಕ ಅವಿನಾಶ್ ದಿವಾಕರ್ ಶೃಂಗೇರಿ ಇದರ ಉಸ್ತುವಾರಿ ವಹಿಸಿಕೊಂಡಿದ್ದಾರೆ. ಇತ್ತೀಚಿಗೆ "AVR CINE - MAX" ಓಟಿಟಿ ಅನಾವರಣ ಸಮಾರಂಭ ಅದ್ದೂರಿಯಾಗಿ ನೆರವೇರಿತು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷೆ ಡಾ॥ಜಯಮಾಲ, ನಿರ್ದೇಶಕರಾದ ಟಿ.ಎಸ್.ನಾಗಾಭರಣ, ನಾಗತಿಹಳ್ಳಿ ಚಂದ್ರಶೇಖರ್, ಟಿ.ಎನ್ ಸೀತಾರಾಮ್, ಪಿ.ಶೇಷಾದ್ರಿ, ಶಶಾಂಕ್, ನಾಗಣ್ಣ, ನಟರಾದ ದೊಡ್ಡಣ್ಣ, ಮುಖ್ಯಮಂತ್ರಿ ಚಂದ್ರು, ಸುಂದರರಾಜ್, ಮೋಹನ್, ಗುರುಕಿರಣ್, ಥ್ರಿಲ್ಲರ್ ಮಂಜು, ಶಿವಧ್ವಜ್, ನಟಿಯರಾದ ಗಿರಿಜಾ ಲೋಕೇಶ್, ಸುಧಾರಾಣಿ, ತಾರಾ ಅನುರಾಧ, ಹರ್ಷಿಕಾ ಪೂಣಚ್ಚ, ಪದ್ಮಜಾರಾವ್, ನಿರ್ಮಾಪಕ



ಯೋಗೀಶ್ ದ್ವಾರಕೀಶ್, ಪತ್ರಕರ್ತ ಸದಾಶಿವ ಶೆಣೈ ಮುಂತಾದವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

"AVR CINE - MAX" ಓಟಿಟಿಯನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ವಾಣಿಜ್ಯ ಮಂಡಳಿ ಅಧ್ಯಕ್ಷೆ ಡಾ॥ಜಯಮಾಲ, ಅರವಿಂದ್ ವೆಂಕಟೇಶ್ ರೆಡ್ಡಿ ಆರಂಭಿಸುತ್ತಿರುವ ಹಾಗೂ ನಟ ನರಸಿಂಹರಾಜು ಅವರ ಮೊಮ್ಮಗ ಅವಿನಾಶ್ ದಿವಾಕರ್ ಅವರ ಉಸ್ತುವಾರಿಯಲ್ಲಿ ಬರುತ್ತಿರುವ ಈ ನೂತನ ಓಟಿಟಿಗೆ ಶುಭವಾಗಲಿ ಹಾಗೂ ಇದರಿಂದ ಕನ್ನಡ ನಿರ್ಮಾಪಕರಿಗೆ ಒಳ್ಳೆಯದಾಗಲಿ ಎಂದು ಹಾರೈಸಿದರು. "AVR CINE - MAX" ಕನ್ನಡಿಗರಿಂದ ಕನ್ನಡಿಗರಿಗಾಗಿಯೇ ಆರಂಭಿಸಿರುವ ಓಟಿಟಿ . ಕನ್ನಡ ಚಲನಚಿತ್ರ ಹಾಗೂ ಸೃಜನಾತ್ಮಕ ಮನರಂಜನಾ ವಿಷಯಗಳನ್ನು ವಿಶ್ವದಾದ್ಯಂತ ಪ್ರೇಕ್ಷಕರಿಗೆ ತಲುಪಿಸುವ ಉದ್ದೇಶದಿಂದ ರೂಪುಗೊಂಡಿರುವ ಓಟಿಟಿಯೂ ಹೌದು. ಈ ಓಟಿಟಿಯಲ್ಲಿ ಈಗಾಗಲೇ 750ಕ್ಕೂ ಹೆಚ್ಚು ಸಿನಿಮಾಗಳಿದೆ. ಕೇವಲ ಸಿನಿಮಾ ಮಾತ್ರವಲ್ಲದೇ ರಿಯಾಲಿಟಿ ಶೋ, ಕ್ರೀಡೆ, ಸಂಗೀತ, ನೇರ ಕಾರ್ಯಕ್ರಮಗಳು ಹೀಗೆ ಮೂಲ ಸೃಜನಾತ್ಮಕ ವಿಷಯಗಳಿಗೆ ಉತ್ತೇಜನ ನೀಡಿ ಅವುಗಳನ್ನು ವಿಶ್ವದ ಪ್ರೇಕ್ಷಕರಿಗೆ ತಲುಪಿಸುವ ಮನರಂಜನಾ ವೇದಿಕೆ ಇದಾಗಿದೆ. ರವಿಶ್ರೀವತ್ಸ ಅವರ "ಗ್ಯಾಂಗ್ ಆಫ್ ಯುಕೆ" ಸಿನಿಮಾವನ್ನು ವೆಬ್ ಸಿರೀಸ್ ರೂಪದಲ್ಲಿ ಪ್ರದರ್ಶನ ಮಾಡಲಾಗುತ್ತಿದೆ. ಸೃಜನ್ ಲೋಕೇಶ್ ಅವರು "ಸೃಜಾ ಟಾಕೀಸ್" ಎಂಬ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ವಾರಾಂತ್ಯದಲ್ಲಿ ಸಂಗೀತದ ಕಾರ್ಯಕ್ರಮಗಳು ಇರುತ್ತದೆ. ಕ್ರಿಕೆಟ್ ಸೇರಿದಂತೆ ಯಾವುದೇ ಕ್ರೀಡೆಯನ್ನು ಇದರ ಮೂಲಕ ಆಸಕ್ತರು ನೇರಪ್ರಸಾರವನ್ನು ಮಾಡಬಹುದು. ಸದ್ಯದಲ್ಲೇ ಮಲೇಷಿಯಾದಲ್ಲಿ ಅದ್ದೂರಿ ಕ್ರಿಕೆಟ್ ಟೂರ್ನಿಯನ್ನು ಸಹ ಆಯೋಜಿಸುತ್ತಿದ್ದೇವೆ. ನಮ್ಮ ಈ ಪ್ರಯತ್ನ–ಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ತಿಳಿಸಿದ "AVR CINE - MAX" ಓಟಿಟಿ ಸ್ಥಾಪಕ ಅರವಿಂದ್ ವೆಂಕಟೇಶ್ ರೆಡ್ಡಿ, ಸಮಾರಂಭಕ್ಕೆ ಆಗಮಿಸಿದ ಗಣ್ಯರಿಗೆ ಧನ್ಯವಾದ ತಿಳಿಸಿದರು.

# ಸ್ವಯಂ ಪ್ರಯತ್ನದ ಸಾರ್ವಕಾಲಿಕ ದರ್ಶನ




ಶರಣ ಪರಂಪರೆಯು ಜಗತ್ತಿಗೆ ನೀಡಿದ ಅತಿ ದೊಡ್ಡ ಕೊಡುಗೆಯೆಂದರೆ, ಅದು ಅಲೌಕಿಕ ದೈವತ್ವವನ್ನು ಲೌಕಿಕದ ಕಾಯಕದೊಂದಿಗೆ ಬೆಸೆದದ್ದು. ಆಧ್ಯಾತ್ಮವನ್ನು ಆಕಾಶದಿಂದ ತಂದು ಭೂಮಿಯ ಮಣ್ಣಿನಲ್ಲಿ ಬಿತ್ತಿದ ಆ ವೈಚಾರಿಕತೆಯ ಮುಂದುವರಿಕೆಯನ್ನು ಕೆಂಭಾವಿಯ ಪತ್ರಕರ್ತ, ಕವಿ, ಗಜಲಕಾರ ಹಾಗೂ ಲೇಖಕ ಶ್ರೀಯುತ ವೀರಣ್ಣ ಕಲಕೇರಿಯವರ ಮಾರ್ಮಿಕ ವಚನದಲ್ಲಿ ಕಾಣಬಹುದು. 'ಸೃಷ್ಟಿಬಲೇಶ' ಎಂಬ ಅಂಕಿತನಾಮದಲ್ಲಿ ಮೂಡಿಬಂದಿರುವ ಅವರ ವಚನ ಹೀಗಿದೆ:

> **ಬಾಧೆಗಳನು ಮಣಿಸಿ ಭವದೋಳ್**
> **ಸಾಧಕನಾಗಬಯಸಿದೊಡೆ ಪ್ರೇರಣೆ ಪರವಾಗಿ**
> **ದೊರಕಲುಂಟು ಪ್ರಯತ್ನ ತನ್ನದಾಗದೆ**
> **ಫಲಶೃತಿ ಪಡೆಯಲುಂಟೆ ಸೃಷ್ಟಿಬಲೇಶ?**

ಈ ವಚನವು ಸಂಕಟ, ಪ್ರೇರಣೆ ಮತ್ತು ಶ್ರಮ ಎಂಬ ಮೂರು ಪ್ರಮುಖ ಅಂಶಗಳ ಕುರಿತು ಗಂಭೀರವಾಗಿ ವಿಶ್ಲೇಷಿಸುತ್ತದೆ. ವಚನದ ಆರಂಭವೇ ಬದುಕಿನ ಕಟುವಾದ ಸತ್ಯದ ದರ್ಶನದೊಂದಿಗೆ ಮೂಡುತ್ತದೆ. 'ಭವದ ಬಾಧೆ' ಎನ್ನುವುದು ಕೇವಲ ಭೌತಿಕ ಕಷ್ಟಗಳಲ್ಲ; ಅದು ಮನುಷ್ಯನಿಗೆ ಎದುರಾಗುವ ಅಸ್ತಿತ್ವದ ಬಿಕ್ಕಟ್ಟು, ಅನಿಶ್ಚಿತತೆ ಮತ್ತು ಆಧುನಿಕ ಜಗತ್ತಿನ ನಿರಂತರ ಒತ್ತಡಗಳಾಗಿವೆ. ವಚನಕಾರರು ಇಲ್ಲಿ ಜಗತ್ತಿನಿಂದ ಪಲಾಯನ ಮಾಡುವ 'ಸನ್ಯಾಸಿ'ಯನ್ನು ಪ್ರಸ್ತಾಪಿಸುತ್ತಿಲ್ಲ. ಬದಲಿಗೆ, ಆ ಬಾಧೆಗಳನ್ನು ಎದುರಿಸಿ, ಮಣಿಸಿ, ಇಲ್ಲೇ ಬದುಕಿ ತೋರಿಸುವ 'ಸಾಧಕ'ನನ್ನು ಆವಾಹಿನಿಸಿದ್ದಾರೆ. ಬದುಕಿನ ಸಂಕಟಗಳೇ ಸಾಧಕನಿಗೆ ಕಸುವಾಗಬೇಕು ಎಂಬುದು ವಚನಕಾರರ ಪ್ರಬುದ್ಧ ಆಶಯವಾಗಿದೆ.

**"ಪ್ರೇರಣೆ ಪರವಾಗಿ ದೊರಕಲುಂಟು"**

ಈ ಸಾಲು ಅತ್ಯಂತ ತೀಕ್ಷ್ಣವಾದ ತಾತ್ವಿಕ ವಿಡಂಬನೆಯಾಗಿದೆ. ಇಂದಿನ ಜಾಗತೀಕರಣ ಹಾಗೂ ಮಾಹಿತಿ ಯುಗದಲ್ಲಿ ಪ್ರೇರಣೆ ಎನ್ನುವುದು ಒಂದು ದೊಡ್ಡ ಉದ್ಯಮವಾಗಿ ಬೆಳೆದಿದೆ. ಜಗತ್ತು ಸದಾ ಉಪದೇಶಗಳನ್ನು ನೀಡಲು ಸಿದ್ಧವಿರುತ್ತದೆ. ಹೊರಗಿನಿಂದ ಬರುವ ಮಾತುಗಳು ಕ್ಷಣಿಕವಾಗಿ ನಮಗೆ ಉತ್ಸಾಹ ನೀಡಬಹುದು. ಆದರೆ, ದಾರ್ಶನಿಕರ ದೃಷ್ಟಿಕೋನದಲ್ಲಿ ಬಾಹ್ಯ ಪ್ರೇರಣೆ ಎನ್ನುವುದು ಕತ್ತಲೆಯಲ್ಲಿ ಮಿಂಚುವ ಮಿಂಚುಹುಳುವಿನಂತೆ. ಅದು ದಾರಿಯನ್ನು ತೋರಿಸಬಲ್ಲದೇ ಹೊರತು, ನಮ್ಮ ಒಳಗಿನ ಕತ್ತಲೆಯನ್ನು ಶಾಶ್ವತವಾಗಿ ದೂರಾಗಿಸಲಾರದು. ಕೇವಲ ಪರರ ಪ್ರೇರಣೆ–ಯ ಮೇಲೆ ಅವಲಂಬಿತವಾಗುವವರು ತಮ್ಮ ಸ್ವಂತ ಅಸ್ತಿತ್ವವನ್ನೇ ಕಳೆದುಕೊಳ್ಳುತ್ತಾರೆ ಎಂಬ ಎಚ್ಚರಿಕೆ ಇಲ್ಲಿದೆ.

ವಚನದ ಗಂಭೀರತೆ ಅಂತಿಮವಾಗಿ ಬಂದು ನಿಲ್ಲುವುದು "ಪ್ರಯತ್ನ ತನ್ನದಾಗದೆ ಫಲಶೃತಿ ಪಡೆಯಲುಂಟೆ?" ಎನ್ನುವ ಮಾರ್ಮಿಕ ಪ್ರಶ್ನೆಯಲ್ಲಿ. ಇದು ಕೇವಲ ನೈತಿಕ ಬೋಧನೆಯಲ್ಲ, ಬದಲಿಗೆ ಬ್ರಹ್ಮಾಂಡದ ಸಾರ್ವತ್ರಿಕ ನಿಯಮವಾಗಿದೆ. ಈ ಜಗತ್ತಿನಲ್ಲಿ ಯಾವುದೂ ಉಚಿತವಾಗಿ ಸಿಗುವುದಿಲ್ಲ; ಪರಿಶ್ರಮವಿಲ್ಲದ ಫಲಪ್ರದತೆ ಪ್ರಕೃತಿಯ ನಿಯಮಕ್ಕೆ ವಿರುದ್ಧವಾದದ್ದು. ಪರರ ಪ್ರೇರಣೆ ಎಷ್ಟೇ ಶ್ರೇಷ್ಠವಾಗಿದ್ದರೂ, ಕರ್ತೃವಿನ ಸ್ವಂತ ಶ್ರಮವಿಲ್ಲದಿದ್ದರೆ ಯಾವುದೇ ಬದಲಾವಣೆ ಸಾಧ್ಯವಿಲ್ಲ. ಇಲ್ಲಿ 'ಸೃಷ್ಟಿಬಲೇಶ' ಎಂಬ ಅಂಕಿತವು ಕೇವಲ ಒಂದು ದೈವದ ಹೆಸರಲ್ಲ. ಅದು ಇಡೀ ಸೃಷ್ಟಿಯ ಚಲನಶೀಲ ಶಕ್ತಿ. ಆ ಸೃಷ್ಟಿಯ ಶಕ್ತಿಯೂ ಕೂಡ ಸ್ವಯಂ ಪ್ರಯತ್ನ ಮಾಡುವವನಿಗೆ ಮಾತ್ರ ಸ್ಪಂದಿಸುತ್ತದೆ. ಬಿತ್ತದ ಬೀಜಕ್ಕೆ ಪ್ರಕೃತಿ ಮಳೆ ಸುರಿಸಿದರೂ ಮೊಳಕೆ ಒಡೆಯಲು ಸಾಧ್ಯವಿಲ್ಲ ಎಂಬ ಕಟು ಅನುಭದ ಸಾರವಿದು.

ಮನುಷ್ಯ ತನ್ನ ಪರಿಸ್ಥಿತಿಗೆ ತಾನೇ ಹೊಣೆ. ಹೊರಗಿನ ಶಕ್ತಿಗಳಿಗಾಗಿ ಕಾಯದೆ, ತನ್ನ ಉದ್ಧಾರವನ್ನು ತಾನೇ ಮಾಡಿಕೊಳ್ಳಬೇಕು. ಆಂತರಿಕ ಜಾಗೃತಿ ಹಾಗೂ ಬಾಹ್ಯ ಜಗತ್ತಿನ ಪ್ರಭಾವಗಳಿಗಿಂತ ಒಳಗಿನ ಸಂಕಲ್ಪ ಶಕ್ತಿಯೇ ಯಶಸ್ಸಿನ ಮೂಲ ಎಂದು ಈ ವಚನ ಸಾರುತ್ತದೆ. ವೀರಣ್ಣ ಕಲಿಕೇರಿಯವರ ಈ ವಚನವು ತನ್ನ ಸುಂದರ ಪದಬಂಧ ಮತ್ತು ಗಂಭೀರ ಆಲೋಚನೆಯಿಂದಾಗಿ ಸಮಕಾಲೀನ ಸಮಾಜದ 'ಆಲಸ್ಯ' ಹಾಗೂ 'ಸೌಕರ್ಯ ಸಂಸ್ಕೃತಿ'ಗೆ ಕೊಡುತ್ತಿರುವ ಚಿಕಿತ್ಸಕ ಏಟಾಗಿದೆ. ಕೇವಲ ಪ್ರೇರಣಾತ್ಮಕ ಮಾತುಗಳನ್ನು ಕೇಳುತ್ತಾ, ಭ್ರಮಲೋಕದಲ್ಲಿ ತೇಲುವ ಇಂದಿನ ತಲೆಮಾರಿಗೆ ಈ ವಚನವು ನೆಲದ ಸತ್ಯವನ್ನು, ಶ್ರಮದ ಮಹತ್ವವನ್ನು ಬಲವಾಗಿ ನೆನಪಿಸುತ್ತದೆ.

ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಅಂತರಂಗದ ಮಿಡಿತವನ್ನು(ಆಂತರಿಕ ಶಕ್ತಿ) ಜಾಗೃತಗೊಳಿಸಿಕೊಂಡು, ಸ್ವಂತ ಪ್ರಯತ್ನದ ಮೂಲಕವೇ ಬದುಕಿನ 'ಫಲಶೃತಿ'ಯನ್ನು ಪಡೆದುಕೊಳ್ಳಬೇಕು ಎಂಬ ಈ ವಚನದ ಸಾರವು ಸಾರ್ವಕಾಲಿಕ ಮತ್ತು ಸಾರ್ವತ್ರಿಕವಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200215

PRGI NO. 120927
(RNINO:KARKAN/2011/48371)